22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 22 | ಸಂಚಿಕೆ 283 | ನವದೆಹಲಿ | ಬೆಲೆ ₹ 10 | ಏಪ್ರಿಲ್ 19 2025, ಶನಿವಾರ



## ನಿತ್ಯ ಪಂಚಾಂಗ 19.04.2025 ಶನಿವಾರ



ಶ್ರೀ ವಿಶ್ವಾವಸು ನಾಮ ಸಂವತ್ಸರ, ಉತ್ತರಾಯಣ ವಸಂತ ಋತು ಚಾಂದ್ರಮಾನ, ಚೈತ್ರ ಬಹುಳ

ಷಷ್ಠಿ, ಮೂಲ ನಕ್ಷತ್ರ, ಹುಳಿಮಾವು ಕೋದಂಡರಾಮ/ಬ್ರಹ್ಮಾವರ/ ಕಡೇಶಿವಾಲಯ ರಥ, ಕೊಕ್ಕಡ ಪುತ್ತಿಗೆ ವಿಷ್ಣುರಂಗ ಪೂಜೆ, ಹೋಲಿ ಸಾಟರ್ಡೇ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| | ರಾಹುಕಾಲ | ಯಮಗಂಡ | ಗುಳಿಕಕಾಲ |
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

## ಇಲಾಖೆ ಕಾರ್ಯನಿರ್ವಹಣೆಯಲ್ಲಿ ಮಗನ ಹಸ್ತಕ್ಷೇಪ ಇಲ್ಲ: ಬೋಸರಾಜು

**ಬೆಂಗಳೂರು, ಏ.18:** ಸಣ್ಣ ನೀರಾವರಿ ಇಲಾಖೆಯ ಕಾರ್ಯನಿರ್ವಹಣೆಯಲ್ಲಿ ಪುತ್ರನ ಹಸ್ತಕ್ಷೇಪ ಆರೋಪ ಆಧಾರರಹಿತ ಎಂದು ಸಚಿವ ಬೋಸರಾಜು ಸ್ಪಷ್ಟಪಡಿಸಿದ್ದಾರೆ. ವಿಕಾಸಸೌಧದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಇದರಲ್ಲಿ ಯಾರ ಹಸ್ತಕ್ಷೇಪವೂ ಇಲ್ಲ. ಇದು ಆಧಾರರಹಿತ ಆರೋಪ. ಯಾರು ಹಸ್ತಕ್ಷೇಪ ಮಾಡಿದ್ದಾರೆ ಎಂದು ಹೇಳಲಿ. ಗುತ್ತಿಗೆದಾರರ ಬಿಲ್ ಬಿಡುಗಡೆಗಾಗಿ ಎಲ್‌ಒಸಿ ವ್ಯವಸ್ಥೆಯನ್ನು ನಾವು ಮಾಡಿಯೇ ಇಲ್ಲ. ಒಂದು ರೂಪಾಯಿನೂ ಆ ರೀತಿ



ಆಗಿಲ್ಲ. ಗುತ್ತಿಗೆದಾರರು ಬಂದು ಸಾಬೀತು ಮಾಡಲಿ. ಗುತ್ತಿಗೆದಾರರ ಆರೋಪ ನಿರಾಧಾರ. ಲೋಪವಾಗಿದ್ದರೆ ನಾನೇ ಜವಾಬ್ದಾರ. ತಪ್ಪಿದ್ದರೆ ತಕ್ಷಣವೇ ನಾವು ಕ್ರಮ ಕೈಗೊಳ್ಳುತ್ತೇವೆ. ಪ್ರತಿಯೊಂದು ಪಾರದರ್ಶಕವಾಗಿಟ್ಟಿದ್ದೇವೆ. ಮೂರು ತಿಂಗಳಿಗೊಮ್ಮೆ ನಮಗೆ ಹಣ ಬರುತ್ತದೆ. ಹಣ ಬರುತ್ತಲೇ ನಾವು ಬಾಕಿ ಬಿಲ್ ಕ್ಲಿಯರ್ ಮಾಡುತ್ತಿದ್ದೇವೆ. ಬಹಳ ಪಾರದರ್ಶಕತೆ ಕಾಯ್ದುಕೊಂಡಿದ್ದೇವೆ" ಎಂದರು. ಗುತ್ತಿಗೆದಾರರ ಸಂಘಟನೆ ಭೇಟಿ ಮಾಡಿ, ನಮ್ಮ ಬಳಿ ಬಾಕಿ ಬಿಲ್ಸ್ ಬಗ್ಗೆ ಚರ್ಚೆ ಮಾಡಿದ್ದರು. ಮಾರ್ಚ್‌ನಲ್ಲಿ ಸಭೆ ಕರೆಯೋಕೆ ಮುಂದಾಗಿದ್ದೆ. ಅಷ್ಟರೊಳಗೆ ಗುತ್ತಿಗೆದಾರರ ಸಂಘದ ಅಧ್ಯಕ್ಷ ಮಂಜುನಾಥ್ ಆರೋಪಿಸಿದ್ದರು. ಮಾಧ್ಯಮಗಳು ಇದರ ಬಗ್ಗೆ ಪ್ರಶ್ನೆ ಮಾಡಿದ್ದರು. ನಿನ್ನೆ ಗುತ್ತಿಗೆದಾರರ ಸಂಘದ ಜೊತೆ ಸಭೆ ನಡೆಸಿದ್ದೇನೆ. ಮಾರ್ಚ್, ಡಿಸೆಂಬರ್‌ನಲ್ಲಿ ಎಷ್ಟು ಪಾವತಿ ಆಗಿದೆ, ಫೆಬ್ರವರಿಯಲ್ಲಿ ಎಷ್ಟು ಬಾಕಿ ಇದೆ. ಇದರ ಬಗ್ಗೆ ಎಲ್ಲವನ್ನೂ ಅವರಿಗೆ ತಿಳಿಸಿದ್ದೇವೆ. ಅವರು ಅದಕ್ಕೆ ಒಪ್ಪಿಕೊಂಡಿದ್ದಾರೆ ಎಂದು ಹೇಳಿದರು.

## ಬಿದರ್ ಪತ್ರಕರ್ತನ ಮೇಲೆ ಹಲ್ಲೆ ಅರಣ್ಯ ಸಿಬ್ಬಂದಿ ಅಮಾನತು

**ಸಚಿವರ ಕ್ರಮಕ್ಕೆ ಕೆಯುಡಬ್ಲ್ಯುಜೆ ಸ್ವಾಗತ**

**ಬೆಂಗಳೂರು, ಏ.18:** ಬೀದರ್ ನಲ್ಲಿ ವರದಿ ಮಾಡಲು ಹೋಗಿದ್ದ ಪತ್ರಕರ್ತ ರವಿ ಬಸವರಾಜ ಬೋಸುಂಡೆ ಅವರ ಮೇಲೆ ಹಲ್ಲೆ ಮಾಡಿದ್ದ ಅರಣ್ಯ ಇಲಾಖೆ ಸಿಬ್ಬಂದಿ ದಸ್ತಗಿರಿಸಾಬ್ ಅವರನ್ನು ಉಪ ಅರಣ್ಯ ಸಂರಕ್ಷಣಾಧಿಕಾರಿಗಳು ಅಮಾನತ್ತು ಮಾಡಿ ಆದೇಶ ಹೊರಡಿಸಿದ್ದಾರೆ. ಪತ್ರಕರ್ತನ ಮೇಲೆ ನಡೆದ ಹಲ್ಲೆಯನ್ನು ಖಂಡಿಸಿದ್ದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ಕೆಯುಡಬ್ಲ್ಯುಜೆ) ಈ ಬಗ್ಗೆ ತಪ್ಪಿತಸ್ಥರ ಮೇಲೆ ಕ್ರಮಕ್ಕೆ ಆಗ್ರಹಿಸಿತ್ತು. ಬೀದರ್ ನಲ್ಲಿ ಸಂಘಟನೆ ಪ್ರತಿಭಟನೆಯನ್ನು ನಡೆಸಿತ್ತು. ಘಟನೆ ಬಗ್ಗೆ ಕೂಡಲೇ ಕ್ರಮಕ್ಕೆ ಮುಂದಾದ ಅರಣ್ಯ ಸಚಿವ ಈಶ್ವರ ಖಂಡ್ರೆ ಅವರು ತನಿಖೆಗೆ ಆದೇಶಿಸಿದ್ದರು. ಸಚಿವರ ಸೂಚನೆ ಮೇರೆಗೆ ಅಮಾನತ್ತು ಮಾಡಿದ ಕ್ರಮವನ್ನು ಸ್ವಾಗತಿಸಿರುವ ಕೆಯುಡಬ್ಲ್ಯುಜೆ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರು, ಇದು ಪತ್ರಕರ್ತರ ಸಾಂಘಿಕ ಹೋರಾಟಕ್ಕೆ ಸಿಕ್ಕ ಮನ್ನಣೆ ಎಂದು ಪ್ರತಿಕ್ರಿಯಿಸಿದ್ದಾರೆ. ತಪ್ಪು ಮಾಡಿದ ಹಲ್ಲೆಕೋರರಿಗೆ ಮುಂದುವರಿದ ಕ್ರಮ ಆಗಬೇಕೆಂದು ಆಗ್ರಹಿಸಿದ್ದಾರೆ.

**ಸಿಇಟಿ ಪರೀಕ್ಷೆಗೆ ಆಗಮಿಸಿದ್ದ ವಿದ್ಯಾರ್ಥಿಗೆ ಜನಿವಾರ ತೆಗೆದುಹಾಕುವಂತೆ ಅಮಾನವೀಯ ಆದೇಶ: ಭಾರೀ ವಿವಾದಕ್ಕೆಡೆ**

# ತಪ್ಪು ನಡೆದಿದೆ, ತಪ್ಪಿತಸ್ಥರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ: ವಿವಾದವನ್ನು ದೊಡ್ಡದು ಮಾಡುವುದು ಬೇಡ- ಎಚ್. ಪ್ರಸನ್ನ ಪ್ರತಿಕ್ರಿಯೆ

**ಜನಿವಾರ ತೆಗೆಯಲು ಒಪ್ಪದೇ ಗಣಿತ ಪರೀಕ್ಷೆಯಿಂದ ಹೊರಗುಳಿದ ವಿದ್ಯಾರ್ಥಿ**



**ಬೆಂಗಳೂರು, ಏ.18:** ವೃತ್ತಿಪರ ಕೋರ್ಸ್‌ಗಳ ಪ್ರವೇಶಾತಿಗಾಗಿ ರಾಜ್ಯಾದ್ಯಂತ ನಡೆದ ಸಿಇಟಿ ಪರೀಕ್ಷೆಗಳು ಮುಗಿದಿವೆ. ಇದೇ ಏಪ್ರಿಲ್ 15, 16, 17 ಸಿಇಟಿ ಪರೀಕ್ಷೆ ನಡೆದಿವೆ. ಆದ್ರೆ, ಕೊನೆಯ ದಿನವಾದ ಏಪ್ರಿಲ್ 17ರಂದು ಶಿವಮೊಗ್ಗ ಮತ್ತು ಬೀದರ್‌ನಲ್ಲಿ ಪರೀಕ್ಷಾರ್ಥಿಗೆ ತಪಾಸಣೆ ವೇಳೆ ಜನಿವಾರ ತೆಗೆಸಿರುವುದು ಭಾರೀ ವಿವಾದಕ್ಕೆ ಕಾರಣವಾಗಿದೆ. ಬೀದರ್‌ನ ಸಾಯಿ ಸ್ಫೂರ್ತಿ ಪರೀಕ್ಷಾ ಕೇಂದ್ರದಲ್ಲಿ ವಿದ್ಯಾರ್ಥಿಯೊಬ್ಬ ಜನಿವಾರ ತೆಗೆಯಲು ಒಪ್ಪದೇ ಗಣಿತ ಪರೀಕ್ಷೆಯಿಂದ ಹೊರಗುಳಿದಿದ್ದಾನೆ. ಇದರಿಂದ ಆತನ ಎಂಜಿನಿಯರಿಂಗ್ ಭವಿಷ್ಯ ಅತಂತ್ರಗೊಂಡಿದೆ. ಮತ್ತೊಂದೆಡೆ ಶಿವಮೊಗ್ಗದ ಆದಿಚುಂಚನಗಿರಿ ಕಾಲೇಜಿನ ಪರೀಕ್ಷಾ ಕೇಂದ್ರದಲ್ಲಿ ವಿದ್ಯಾರ್ಥಿಯೊಬ್ಬನ ಜನಿವಾರ ಕತ್ತರಿಸಿ ಪರೀಕ್ಷೆ ಬರೆಯಲು ಅನುಮತಿ ನೀಡಲಾಗಿದೆ. ವಿದ್ಯಾರ್ಥಿ ಜನಿವಾರ ತೆಗೆಯಲ್ಲ ಎಂದಿದ್ದಕ್ಕೆ ಪರೀಕ್ಷಾ ಸಿಬ್ಬಂದಿ ಅದನ್ನು ಕತ್ತರಿಸಿರುವ ಆರೋಪ ಕೇಳಿಬಂದಿದ್ದು, ಈ ಸಂಬಂಧ ಆಕ್ರೋಶಗಳು ವ್ಯಕ್ತವಾಗಿವೆ. ಹಾಗಾದ್ರೆ, ಸಿಇಟಿ ವಸ್ತ್ರ ಸಂಹಿತೆ ಏನು ಹೇಳುತ್ತೆ? ಯಾವ ಡ್ರೆಸ್ ಧರಿಸಲು ಪುರುಷರಿಗೆ ಮಹಿಳೆಯರಿಗೆ ಅವಕಾಶ ಇದೆ ಎನ್ನುವ ವಿವರ ಈ ಕೆಳಗಿನಂತಿದೆ ನೋಡಿ. ಗೆಜೆಟೆಡ್ ಪ್ರೊಬೆಷನರಿ ಹುದ್ದೆಗಳಿಗೆ (ಕೆಎಎಸ್) ನಡೆದ ಪೂರ್ವಭಾವಿ ಪರೀಕ್ಷೆಯಲ್ಲಿ ಮಹಿಳಾ ಅಭ್ಯರ್ಥಿಗಳ ಮಂಗಳಸೂತ್ರ ಮತ್ತು ಕಾಲುಂಗುರ ತೆಗೆಸಿರುವ ಪ್ರಕರಣ ನಡೆದಿದ್ದವು. ಇದು ಭಾರೀ ವಿವಾದ ಸೃಷ್ಟಿಸಿತ್ತು. ಇದರ ಬೆನ್ನಲ್ಲೇ ಎಚ್ಚೆತ್ತ ಕೆಇಎ ಮಂಗಳಸೂತ್ರ ಮತ್ತು ಕಾಲುಂಗುರಕ್ಕೆ ಅವಕಾಶ ನೀಡಿತ್ತು. ಆದ್ರೆ, ಇದೀಗ ಜನಿವಾರ ವಿವಾದ ಹುಟ್ಟುಹಾಕಿದೆ. ಕೆಇಎ ಕಾರ್ಯ ನಿರ್ವಾಹಕ ನಿರ್ದೇಶಕ ಹೇಳಿದ್ದಿಷ್ಟು, ಇನ್ನು ಈ ಬಗ್ಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಎಚ್. ಪ್ರಸನ್ನ ಪ್ರತಿಕ್ರಿಯಿಸಿದ್ದು, ಸಿಇಟಿ ಪರೀಕ್ಷೆ ವೇಳೆ ಅಲ್ಲಿನ ಸಿಬ್ಬಂದಿ ಜನಿವಾರ ತೆಗೆಯ ಬೇಕು ಎಂದು ಹೇಳಿದ್ದು ತಪ್ಪು. ಇಂತಹ ಯಾವುದೇ ಮಾರ್ಗ ಸೂಚಿಯನ್ನು ಕೆಇಎ ನೀಡಿಲ್ಲ ಎಂಬುದಾಗಿ ಸ್ಪಷ್ಟ ಪಡಿಸಿದರು. ಯಾವುದೇ ಜಾತಿ, ಧರ್ಮದ ವಿರುದ್ಧ ನಾವು ಮಾರ್ಗಸೂಚಿ ಸಿದ್ಧ ಮಾಡುವುದಿಲ್ಲ. ಈಗ ತಪ್ಪು ಆಗಿದೆ. ಇಂತಹ ತಪ್ಪು ಮುಂದೆ ಆಗದಂತೆ ಕ್ರಮ ತೆಗೆದುಕೊಳ್ಳುತ್ತೇವೆ. ಈ ವಿಷಯವನ್ನ ಮತ್ತಷ್ಟು ದೊಡ್ಡದು ಮಾಡುವುದು ಬೇಡ. ಯಾರೂ ಇಂತಹ ಕೆಲಸ ಮಾಡಿದ್ದಾರೆ ಅವರ ಮೇಲೆ ಕ್ರಮ ತೆಗೆದುಕೊಳ್ಳುತ್ತೇವೆ. ಡಿ.ಸಿ ಗಳಿಗೆ ಈಗಾಗಲೇ ತನಿಖೆಗೆ ಆದೇಶ ಮಾಡಿದ್ದೇನೆ. ವರದಿ ಅನ್ವಯ ಕ್ರಮ ಖಂಡಿತವಾಗಿ ತೆಗೆದುಕೊಳ್ಳುತ್ತೇವೆ ಎಂದು ಹೇಳಿದರು.



ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಎಚ್.ಪ್ರಸನ್ನ

**ಜನಿವಾರದ ವಿಚಾರದಲ್ಲಿ ಅಧಿಕಾರಿಗಳು ನಡೆದುಕೊಂಡ ನಡೆಗೆ ಬ್ರಾಹ್ಮಣ ಮಹಾಸಭಾ ತೀವ್ರ ಆಕ್ಷೇಪ ವ್ಯಕ್ತಪಡಿಸಿದೆ. ಮಹಾಸಭಾದ ಅಧ್ಯಕ್ಷ ಎಸ್ ರಘುನಾಥ್ ಮುಖ್ಯಮಂತ್ರಿಗಳಿಗೆ ಪತ್ರ ಬರೆದು ಆಕ್ರೋಶ ವ್ಯಕ್ತಪಡಿಸಿದ್ದು, ಪ್ರತಿಭಟನೆಗೂ ಕರೆ ನೀಡಿದ್ದಾರೆ. ಇನ್ನು ಈ ಸಂಬಂಧ ಉನ್ನತ ಶಿಕ್ಷಣ ಸಚಿವ ಸುಧಾಕರ್ ಮಾತನಾಡಿ, ಸಿಇಟಿ ಅಭ್ಯರ್ಥಿಯ ಜನಿವಾರ ತೆಗೆಸಿದ್ದು ನಿಜವೇ ಆದರೆ ಅದು ಅತಿರೇಕದ ವರ್ತನೆ. ತಪ್ಪಿತಸ್ಥರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳುತ್ತೇವೆ ಎಂದಿದ್ದಾರೆ.**

### ಬೇಷರತ್ ಕ್ಷಮೆಗೆ ಆಗ್ರಹ

**ತೀರ್ಥಹಳ್ಳಿ ಹಾಗೂ ಬೀದರ್‌ನಲ್ಲಿ ಬ್ರಾಹ್ಮಣ ಸಮುದಾಯದ ವಿದ್ಯಾರ್ಥಿಗಳಿಗೆ ಜನಿವಾರ ಧರಿಸಿರುವುದಕ್ಕೆ ಆಕ್ಷೇಪ ವ್ಯಕ್ತಪಡಿಸಿ ಅವಮಾನ ಮಾಡಿ ಅಮಾನವೀಯವಾಗಿ ವರ್ತಿಸಿದ ಅಧಿಕಾರಿಯ ವಿರುದ್ಧ ಕಠಿಣ ಕ್ರಮ ಕೈಗೊಂಡು ಬೇಷರತ್ ಕ್ಷಮೆಯಾಚಿಸಬೇಕೆಂದು ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ಅಧ್ಯಕ್ಷ ಎಸ್. ರಘುನಾಥ್ ಒತ್ತಾಯಿಸಿದ್ದಾರೆ.**

### ಪುರುಷರ ವಸ್ತ್ರಸಂಹಿತೆ

ಪರೀಕ್ಷೆ ದಿನ ಪೂರ್ಣ ತೋಳಿನ ಬಟ್ಟೆ ಧರಿಸುವ ಹಾಗಿಲ್ಲ ಕಾಲರ್ ರಹಿತ ನಾರ್ಮಲ್ ಶರ್ಟ್/ಟೀ ಶರ್ಟ್‌ಗೆ ಆದ್ಯತೆ ಪ್ಯಾಂಟ್ ಮತ್ತು ಸರಳ ಪ್ಯಾಂಟ್ (ಜೇಬು ಕಡಿಮೆಯಿರುವ ಪ್ಯಾಂಟ್), ಕುರ್ತಾ, ಪೈಜಾಮ, ಜೀನ್ಸ್ ಪ್ಯಾಂಟ್ ಅವಕಾಶ ಇಲ್ಲ, ಪರೀಕ್ಷಾ ಹಾಲ್ ಒಳಗೆ ಶೂ ಧರಿಸುವ ಹಾಗಿಲ್ಲ ಕುತ್ತಿಗೆ ಸುತ್ತ ಯಾವುದೇ ಲೋಹದ ಆಭರಣ ಧರಿಸುವ ಹಾಗಿಲ್ಲ, ಕಿವಿಯೋಲೆ ಕಡಗ ಧರಿಸುವ ಹಾಗಿಲ್ಲ.

### ಮಹಿಳೆಯರ ವಸ್ತ್ರಸಂಹಿತೆ

ಮಹಿಳಾ ಅಭ್ಯರ್ಥಿಗಳು ವಿಸ್ತಾರವಾದ ಕಸೂತಿ ಹೂ ಬಟನ್ ಹೊಂದಿರುವ ಬಟ್ಟೆ ಧರಿಸುವುದು ನಿಷೇಧ. ಪರೀಕ್ಷೆ ದಿನ ಪೂರ್ಣ ತೋಳಿನ ಬಟ್ಟೆಯನ್ನು ಜೀನ್ಸ್ ಧರಿಸಬಾರದು. ಬದಲಾಗಿ ಅರ್ಧ ತೋಳಿನ ಬಟ್ಟೆ ಮುಜುಗರ ಆಗದಿರುವಂತಹ ಬಟ್ಟೆ ಧರಿಸಬೇಕು ದಪ್ಪ ಹೀಲ್ಸ್ ಬಳಸುವುದು ನಿಷೇಧ. ದಪ್ಪವಾದ ಶೂ ದಪ್ಪವಾದ ಚಪ್ಪಲಿ, ಅತಿ ತೆಳುವಾದ ಶೂ ಅತಿ ತೆಳುವಾದ ಚಪ್ಪಲಿ ನಿಷೇಧ. ಮಹಿಳಾ ಅಭ್ಯರ್ಥಿಗಳು ಯಾವುದೇ ರೀತಿಯ ಲೋಹದ ಆಭರಣ ಧರಿಸುವುದು ನಿಷೇಧ. ಕಿವಿ ಓಲೆ ಉಂಗುರ ಧರಿಸುವ ಹಾಗಿಲ್ಲ. ಮಂಗಳ ಸೂತ್ರ ಮತ್ತು ಕಾಲುಂಗುರ ಧರಿಸಲು ಅವಕಾಶ.

## ಜನಿವಾರ ದರಿಸಿದ್ದಕ್ಕೆ ಸಿಇಟಿ ಬರೆಯಲು ಅವಕಾಶ ನೀಡದ ಅಧಿಕಾರಿಗೆ ತಕ್ಕ ಶಾಸ್ತಿಯಾಗಲಿ: ಬಿ.ವೈ.ವಿಜಯೇಂದ್ರ ಆಗ್ರಹ

**ಬೆಂಗಳೂರು, ಏ.18–** ಬೀದರ್‌ನಲ್ಲಿ ಜನಿವಾರ ಧರಿಸಿದ್ದ ವಿದ್ಯಾರ್ಥಿಗೆ ಸಿಇಟಿ ಪರೀಕ್ಷೆಗೆ ಅವಕಾಶ ಕೊಡದೇ, ಶಿವಮೊಗ್ಗದಲ್ಲಿ ವಿದ್ಯಾರ್ಥಿಯೊಬ್ಬನ ಜನಿವಾರ ಕಿತ್ತೆಸೆದು ದರ್ಪ ಮೆರೆದು ವಿದ್ಯಾರ್ಥಿಯ ಭವಿಷ್ಯಕ್ಕೆ ಕಲ್ಲು ಹಾಕಿದ ಅಧಿಕಾರಿ, ಸಿಬ್ಬಂದಿಗಳ ವಿರುದ್ಧ ತಕ್ಷಣವೇ ಶಿಸ್ತು ಕ್ರಮ ತೆಗೆದುಕೊಳ್ಳಲು ಮುಂದಾಗಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಒತ್ತಾಯಿಸಿದ್ದಾರೆ.ಈ ಕುರಿತು ತಮ್ಮ ಸಾಮಾಜಿಕ ಜಾಲ ತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ವಿದ್ಯಾರ್ಥಿಯ ಭವಿಷ್ಯಕ್ಕೆ ಕಲ್ಲು ಹಾಕಿ ಹಿಂದೂ ಸಂಪ್ರದಾಯದ ಆಚಾರ ವಿಚಾರವನ್ನು ಅಪಮಾನಿಸಿರುವ ಅಧಿಕಾರಿಗಳ ವಿರುದ್ಧ ಕ್ರಮ ತೆಗೆದುಕೊಳ್ಳಲು ಮುಂದಾಗಬೇಕು.



ಸನಾತನ ಹಿಂದೂ ಧರ್ಮದ ಆಚಾರ ವಿಚಾರಗಳಿಗೆ ಮಾರ್ಗದರ್ಶನ ತೋರುವ ಸ್ಮಬ್ರಾಹ್ಮಣ ಸಮುದಾಯವನ್ನು ಅಪಮಾನಿಸಿರುವ ಕಾಂಗ್ರೆಸ್ ಸರ್ಕಾರ ಈ ಕೂಡಲೇ ಬೇಷರತ್ ಕ್ಷಮೆಯಾಚಿಸಲಿ ಎಂದು ಆಗ್ರಹಿಸಿದ್ದಾರೆ. ಬೀದರ್‌ನಲ್ಲಿ ಜನಿವಾರ ಧರಿಸಿದ್ದ ವಿದ್ಯಾರ್ಥಿಗೆ ಸಿಇಟಿ ಪರೀಕ್ಷೆಗೆ ಅವಕಾಶ ಕೊಡದೇ, ಶಿವಮೊಗ್ಗದಲ್ಲಿ ವಿದ್ಯಾರ್ಥಿಯೊಬ್ಬನ ಜನಿವಾರ ಕಿತ್ತೆಸೆಯಲು ದರ್ಪ ಮೆರೆದ ವರ್ತನೆ ಅತ್ಯಂತ ಹೇಯ. ಈ ರೀತಿಯ ಬೌದ್ಧಿಕ ವಿಕೃತಿ ಹಾಗೂ ಮನುಷ್ಯತ್ವ ಇಲ್ಲದ ನಡೆ ಇನ್ನೊಂದಿರಲಾರದು, ಇದು ಕಾಂಗ್ರೆಸ್ ಸರ್ಕಾರದ ಹೀನ ಮನಃಸ್ಥಿತಿಯ ಮುಖವಾಡವನ್ನು ಪ್ರದರ್ಶಿಸಿದೆ. ಬಾಲ್ಯ ದಿಂದಲೂ ಕನಸು ಕಟ್ಟಿ ಕೊಂಡು ಭವಿಷ್ಯದ ತಿರುವಿನಲ್ಲಿ ಆಘಾತ ಎದುರಿಸಿ ವಿದ್ಯಾರ್ಥಿ ಯೊಬ್ಬನ ಎಂಜಿನಿಯರಿಂಗ್ ಪದವಿಯ ಕನಸಿನ ಮೇಲೆ ಅಟ್ಟಹಾಸಗೈದ ಸಿಇಟಿ ಪರೀಕ್ಷಾ ಸಿಬ್ಬಂದಿಯ ವರ್ತನೆ ಅತ್ಯಂತ ಖಂಡನೀಯ ಎಂದು ವಾಗ್ದಾಳಿ ನಡೆಸಿದ್ದಾರೆ. ಪರೀಕ್ಷೆ ಹಾಗೂ ಸಂದರ್ಶನ ಎದುರಿಸುವ ವೇಳೆ ಕೆಲ ವಸ್ತುಗಳನ್ನು ಕೊಂಡೊಯ್ಯುವುದು ನಿಷಿದ್ಧ, ಆದರೆ ಜನಿವಾರ ತೊಡುವುದು ಒಂದು ಕುಟುಂಬ ಹಾಗೂ ಭಾರತೀಯ ಸಮುದಾಯದ ಆಚಾರ ವಿಚಾರಕ್ಕೆ ಸಂಬಂಧಿಸಿದ್ದು, ವಿದ್ಯಾರ್ಥಿ ಬರೆಯುವ ಪರೀಕ್ಷೆಯ ಮೇಲೆ ಜನಿವಾರ ಏನು ಪ್ರಭಾವ ಅಥವಾ ಪರಿಣಾಮ ಬೀರುತ್ತದೆ? ಎಂಬುದಕ್ಕೆ ಸಂಬಂಧಿಸಿದ ಸಚಿವರು ಹಾಗೂ ಸರ್ಕಾರ ಉತ್ತರಿಸಬೇಕು.

**ಸಿಇಟಿ ಪರೀಕ್ಷೆಯಲ್ಲಿ ಬ್ರಾಹ್ಮಣರಿಗೆ ಜನಿವಾರಕ್ಕೆ ಅವಕಾಶ ನೀಡದ ಮೂಲಕ ಸರ್ಕಾರ ಅಪಮಾನ ಮಾಡಿದೆ. ಹಿಂದೂಗಳ ಬಗ್ಗೆ ಎಷ್ಟು ಕೋಪ ಇದೆ ಎಂಬುದು ಗೊತ್ತಾಗುತ್ತದೆ. ಬ್ರಾಹ್ಮಣರು ಮಾತ್ರವಲ್ಲದೆ, ಮರಾಠರು, ವೈಶ್ಯ ಸಮಯದಾಯದವರು ಕೂಡ ಜನಿವಾರ ಹಾಕುತ್ತಾರೆ. ಈ ಎಲ್ಲ ಸಮುದಾಯಗಳಿಗೆ ಅಪಮಾನ ಮಾಡಲಾಗಿದೆ. ಮುಸ್ಲಿಮ್ ಹುಡುಗಿಯರು ಹಿಜಾಬ್ ಹಾಕಲು ಅವಕಾಶ ನೀಡಲಾಗಿದೆ. ಸಿಎಂ ಸಿದ್ದರಾಮಯ್ಯ ಕ್ಷಮೆ ಕೇಳಿ, ಅಧಿಕಾರಿಗಳನ್ನು ಅಮಾನತು ಮಾಡಬೇಕು ಎಂದು ಆಗ್ರಹಿಸಿದರು.**

ಶಿಕ್ಷಣವೆಂದರೆ ಸಂಸ್ಕಾರ, ಅದು ಇಲ್ಲದವರು ಶಿಕ್ಷಣ ಖಾತೆಯನ್ನು ನಿರ್ವಹಿಸಿದರೆ ಏನು ಪರಿಣಾಮ ಬೀರಬಹುದು ಎನ್ನುವುದಕ್ಕೆ ಈ ಘಟನೆ ಸಾಕ್ಷಿಯಾಗಿದೆ ಎಂದು ಪರೋಕ್ಷವಾಗಿ ಉನ್ನತ ಶಿಕ್ಷಣ ಸಚಿವ ಎಂ.ಸಿ.ಸುಧಾಕರ್ ವಿರುದ್ದವೂ ವಿಜಯೇಂದ್ರ ಕಿಡಿಕಾರಿದ್ದಾರೆ.

## ಪ್ರಿಯಾಂಕ್‌ಗೆ ಮುಖ್ಯಮಂತ್ರಿ ಪಟ್ಟ ಖರ್ಗೆ ದೆಹಲಿಯಲ್ಲಿ ಸಂಚು ಶ್ರೀರಾಮುಲು ಸ್ಫೋಟಕ ಮಾಹಿತಿ

**ಕಲಬುರಗಿ, ಏ.18:** ಸಿಎಂ ಸಿದ್ದರಾಮಯ್ಯ ಮತ್ತು ಡಿಸಿಎಂ ಡಿಕೆ ಶಿವಕುಮಾರ್ ನಡುವಿನ ಸಿಎಂ ಕುರ್ಚಿಗಾಗಿ ನಡೆಯುತ್ತಿರುವ ಆಂತರಿಕ ಗುದ್ದಾಟದ ಮಧ್ಯಯೇ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ತಮ್ಮ ಪುತ್ರ ಹಾಗೂ ಸಚಿವ ಪ್ರಿಯಾಂಕ್ ಖರ್ಗೆ ಅವರನ್ನು ಸಿಎಂ ಮಾಡಲು ಪ್ಲ್ಯಾನ್ ಮಾಡಿದ್ದಾರೆಂದು ಮಾಜಿ ಸಚಿವ ಬಿ.ಶ್ರೀರಾಮುಲು ಸ್ಫೋಟಕ ಹೇಳಿಕೆ ನೀಡಿದ್ದಾರೆ. ನಗರದಲ್ಲಿ ನಡೆಯುತ್ತಿರುವ ಜನಾಕ್ರೋಶ ಯಾತ್ರೆಯಲ್ಲಿ ಮಾತನಾಡಿ, ಇತ್ತೀಚೆಗೆ ಸರ್ಕಾರ ಪತನವಾಗಲಿದೆ ಎಂದು ಖರ್ಗೆ ಅವರು ಹೇಳಿದ್ದರು. ಸರ್ಕಾರ ಬೀಳಿಸಲು ದಿಲ್ಲಿಯಲ್ಲಿ ಸಂಚು ನಡೆದಿದೆ. ನೀವು ಎಚ್ಚರಿಕೆಯಿಂದ ಇರಿ ಎಂದು ಸಿಎಂ–ಡಿಸಿಎಂಗೆ ಖರ್ಗೆ ಅವರು ಎಚ್ಚರಿಕೆ ನೀಡಿದ್ದರು. ಆದರೆ ಖರ್ಗೆ ಅವರೇ ಸರ್ಕಾರವನ್ನು ಬೀಳಿಸಲಿದ್ದು, ಬಳಿಕ



ತಮ್ಮ ಪುತ್ರನನ್ನು ಸಿಎಂ ಮಾಡಲು ಸಂಚು ಮಾಡಿದ್ದಾರೆ ಎಂದು ರಾಮುಲು ಆರೋಪಿಸಿದ್ದಾರೆ. ಸಿದ್ದರಾಮಯ್ಯ, ಡಿಕೆಶಿ ನಡುವೆ ಸಿಎಂ ಗಾದಿಗಾಗಿ ಫೈಟ್ ನಡೆದಿದೆ. ಇದರ ನಡುವೆ ಮೂರನೇ ವ್ಯಕ್ತಿ ಪ್ರವೇಶಿಸಲಿದ್ದಾರೆ. ಅವರ ಖರ್ಗೆ..ತಮ್ಮ ಮಗನನ್ನು ಸಿಎಂ ಮಾಡಲು ಮಧ್ಯಪ್ರವೇಶಿಸಲಿದ್ದಾರೆ ಎಂದು ರಾಮುಲು ಹೇಳಿದ್ದಾರೆ. ದಿಲ್ಲಿಯಿಂದ ಸರ್ಕಾರ ಬೀಳಿಸಲು ಸಂಚು ನಡೆದಿದೆ ಎಂದು ನಮ್ಮ ಹೈಕಮಾಂಡ್‌ನತ್ತ ಖರ್ಗೆ ಅವರು ಬೊಟ್ಟು ಮಾಡಿದ್ದಾರೆ.

## ಜಾತಿಗಣತಿ ಅಧ್ಯಯನ ಜಟಿಲ ಸಮಸ್ಯೆ: ತೀರ್ಮಾನಕ್ಕೆ ಬರಲು ಒಂದು ವರ್ಷ ಕಾಲಾವಧಿ ಅಗತ್ಯ– ಸತೀಶ್ ಜಾರಕಿಹೊಳಿ ಸ್ಪಷ್ಟನೆ

**ಬೆಂಗಳೂರು, ಏ.18:** ಜಾತಿಗಣತಿ ವರದಿ ತೀರ್ಮಾನಕ್ಕೆ ಬರಲು ಇನ್ನೂ ಒಂದು ವರ್ಷವಾಗಬಹುದು. ಬಹಳ ಜಟಿಲ ಸಮಸ್ಯೆ ಇದು. ಬಹಳಷ್ಟು ಚರ್ಚೆಯಾಗಬೇಕಿದೆ ಎಂದು ಸಚಿವ ಸತೀಶ್ ಜಾರಕಿಹೊಳಿ ತಿಳಿಸಿದ್ದಾರೆ.

ಸಂಜಯನಗರ ನಿವಾಸದಲ್ಲಿ ಸಚಿವ ಕೆ.ಎಚ್. ಮುನಿಯಪ್ಪ ಭೇಟಿ ಬಳಿಕ ಮಾತನಾಡಿದ ಅವರು, ಜಾತಿಗಣತಿ ತೀರ್ಮಾನ ಕೈಗೊಳ್ಳಲು ಇನ್ನೂ ಒಂದು ವರ್ಷವಾಗಬಹುದು. ಬಹಳ ಜಟಿಲ ಸಮಸ್ಯೆ ಇದು. ಬಹಳಷ್ಟು ಚರ್ಚೆಯಾಗಬೇಕಿದೆ. ವರದಿ ಸ್ವೀಕಾರಕ್ಕೆ ಹತ್ತು ವರ್ಷ ತೆಗೆದುಕೊಂಡಿದೆ. ಹೀಗಾಗಿ ಇನ್ನೂ 1 ವರ್ಷವಾಗಬಹುದು. ಅಂಕಿ ಸಂಖ್ಯೆ ಜನರೇ ಬರೆಸಿದ್ದು ಅಲ್ವಾ. ಸಹಿ ಮಾಡಿದವರೆ ವಿರೋಧ ಮಾಡುತ್ತಿದ್ದಾರೆ. ಸಮಗ್ರ ಚರ್ಚೆಯಾಗಬೇಕು ಎಂದರು. ಸಾದರ ಜನರನ್ನು ಕಡಿಮೆ ತೋರಿಸಲಾಗಿದೆ. 64 ಸಾವಿರ ಅಷ್ಟೆ ತೋರಿಸಿದ್ದಾರೆ. ಮೂರು ಜಿಲ್ಲೆಗಳಲ್ಲಿ ಅವರಿದ್ದಾರೆ. ಹೀಗಾಗಿ ಅವರು ಧ್ವನಿ ಎತ್ತಿದ್ದಾರೆ. ಮೀಸಲಾತಿ ಹೆಚ್ಚು ಮಾಡುವುದು ಈಗ ಅಸಾಧ್ಯ. ಶಿಫಾರಸು ಅವರು ಮಾಡಿದ್ದಾರೆ. ಈಗ ಅಂಕಿ – ಅಂಶಗಳನ್ನು ಸರಿ ಮಾಡಬೇಕು. ಅಂಕಿ ಅಂಶಗಳನ್ನು ಸರಿ ಮಾಡಲು ಅವಕಾಶ ನೀಡಬೇಕು ಎಂದು ತಿಳಿಸಿದರು.

ಜಾತಿಗಣತಿ ವರದಿ ಶಿಫಾರಸು ಸರಿಯಾಗಿ ಜಾರಿ ಆಗಬೇಕು. ಸರಿಯಾಗಿ ನಾವು ಮಾಡದಿದ್ದರೆ ಕಷ್ಟವಾಗುತ್ತದೆ. ನಾವು ಸರಿಯಾಗಿ ಜಾರಿ ಮಾಡಬೇಕು. ಇಲ್ಲವಾದರೆ ಒದಿನ ಸರ್ಕಾರದಂತೆ ನಮಗೆ ತೊಂದರೆಯಾಗುತ್ತದೆ. ಯಾವುದೇ ಸಮಾಜಕ್ಕೆ ನೋವಾಗಬಾರದು. ಇದಷ್ಟೇ ನಮ್ಮ ಉದ್ದೇಶ ಎಂದು ಸ್ಪಷ್ಟಪಡಿಸಿದರು. ಸಚಿವ ಕೆ.ಎಚ್.ಮುನಿಯಪ್ಪ ಮಾತನಾಡಿ, ಜಾತಿಗಣತಿ



ಬಗ್ಗೆ ಇನ್ನೂ ತೀರ್ಮಾನ ಆಗಿಲ್ಲ. ಜಾತಿಗಣತಿ ಯಾರಿಗೂ ತೊಂದರೆಯಾಗಲ್ಲ. ಲಿಂಗಾಯತ, ಒಕ್ಕಲಿಗ ಯಾರಿಗೂ ತೊಂದರೆಯಾಗಲ್ಲ. ಎಲ್ಲ ಸೇರಿ ಸರ್ಕಾರ ನಡೆಸುತ್ತಿದ್ದೇವೆ. ಎಲ್ಲರೂ ಒಪ್ಪುವ ತೀರ್ಮಾನ ಮಾಡುತ್ತೇವೆ ಎಂದರು.

## ಭೂಒತ್ತುವರಿ ಪ್ರಕರಣ: ಎಚ್.ಡಿ.ಕೆ. ಆರೋಪಿಯಾಗಿಸಲು ಅರ್ಜಿ ತಿದ್ದುಪಡಿ ಸಮಾಜ ಪರಿವರ್ತನಾ ಸಮುದಾಯಕ್ಕೆ ಹೈಕೋರ್ಟ್ ಸೂಚನೆ

**ಬೆಂಗಳೂರು, ಏ.18:** ರಾಮನಗರ ಜಿಲ್ಲೆ ಬಿಡದಿ ಹೋಬಳಿಯ ಕೇತಗಾನಹಳ್ಳಿಯಲ್ಲಿ ಒತ್ತುವರಿ ತೆರವು ಸಂಬಂಧ ದಾಖಲಾಗಿರುವ ನ್ಯಾಯಾಂಗ ನಿಂದನೆ ಅರ್ಜಿಯಲ್ಲಿ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರನ್ನು ಆರೋಪಿಯನ್ನಾಗಿಸಿ, ಅರ್ಜಿಗೆ ತಿದ್ದುಪಡಿ ಮಾಡಲು ಕರ್ನಾಟಕ ಹೈಕೋರ್ಟ್ ಸಮಾಜ ಪರಿವರ್ತನಾ ಸಮುದಾಯಕ್ಕೆ ನಿರ್ದೇಶಿಸಿದೆ. ಕುಮಾರಸ್ವಾಮಿ ಅವರ ಅರ್ಜಿ ಇತ್ಯರ್ಥಪಡಿಸುವಾಗ ಸುಪ್ರೀಂ ಕೋರ್ಟ್ ಮಾಡಿರುವ ಆದೇಶದ ಅನ್ವಯ ನ್ಯಾಯಮೂರ್ತಿಗಳಾದ ಕೆ.ಸೋಮಶೇಖರ್ ಮತ್ತು ಕೆ.ವೆಂಕಟೇಶ್‌ನಾಯ್ಕ್ ಅವರ ವಿಭಾಗೀಯ ಪೀಠವು ನ್ಯಾಯಾಂಗ ನಿಂದನೆ ಅರ್ಜಿ ಸಲ್ಲಿಸಿರುವ ಸಮಾಜ ಪರಿವರ್ತನಾ ಸಮುದಾಯದ ಪರ ಹಿರಿಯ ವಕೀಲ ಎಸ್ ಬಸವರಾಜು ಅವರಿಗೆ ಕುಮಾರಸ್ವಾಮಿ ಅವರನ್ನು ಮೂರನೇ ಆರೋಪಿಯನ್ನಾಗಿಸಿ ತಿದ್ದುಪಡಿ ಮಾಡುವಂತೆ ನಿರ್ದೇಶಿಸಿತು.

ಅಲ್ಲದೇ, ಕುಮಾರಸ್ವಾಮಿ ಪರ ಹಿರಿಯ ವಕೀಲ ಉದಯ್ ಹೊಳ್ಳ ಅವರಿಗೆ ಅರ್ಜಿಗೆ ಆಕ್ಷೇಪಣೆ ಸಲ್ಲಿಸಲು ಆದೇಶಿಸಿದ್ದು, ಆನಂತರ ಪ್ರತ್ಯುತ್ತರ ದಾಖಲಿಸಲು ಬಸವರಾಜು ಅವರಿಗೆ ಅನುಮತಿಸಿ, ವಿಚಾರಣೆಯನ್ನು ಜೂನ್ 10ಕ್ಕೆ ಮುಂದೂಡಿತು.

ಇದಕ್ಕೂ ಮುನ್ನ, ಕುಮಾರಸ್ವಾಮಿ ಪ್ರತಿನಿಧಿಸಿದ್ದ ಉದಯ್ ಹೊಳ್ಳ ಅವರು ಲೋಕಾಯುಕ್ತ ವರದಿಯಲ್ಲಿ ಕುಮಾರಸ್ವಾಮಿ ಅವರನ್ನು ಆರೋಪಮುಕ್ತ ಮಾಡಲಾಗಿದೆ. ವಿಭಾಗೀಯ ಪೀಠದ ಮುಂದಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯಲ್ಲೂ ಕುಮಾರಸ್ವಾಮಿ ಯನ್ನು ಪ್ರತಿವಾದಿಯನ್ನಾಗಿಸಲಾಗಿಲ್ಲ.

ನ್ಯಾಯಾಂಗ ನಿಂದನೆ ಅರ್ಜಿಯಲ್ಲೂ ಅವರನ್ನು ಆರೋಪಿಯನ್ನಾಗಿಸಲಾಗಿಲ್ಲ. ತಮ್ಮ ವಾದವನ್ನು ಮಂಡಿಸಲು ಅವಕಾಶವೇ ಸಿಕ್ಕಿಲ್ಲ. ಹೀಗಾಗಿ, ಹಾಲಿ ಅರ್ಜಿಯಲ್ಲಿ ತಮ್ಮನ್ನು ಆರೋಪಿಯನ್ನಾಗಿಸಲು ಕೋರಿ ಅರ್ಜಿ ಸಲ್ಲಿಸಲಾಗಿದೆ ಎಂದರು.

ಬಸವರಾಜು ಅವರು ವಿಭಾಗೀಯ ಪೀಠದ ಮುಂದಿದ್ದ ಪಿಐಎಲ್‌ನಲ್ಲಿ ಹಲವು ಮಂದಿಯನ್ನು ಪ್ರತಿವಾದಿಗಳನ್ನಾಗಿಸಲಾಗಿತ್ತು.

ನ್ಯಾಯಾಲಯದ ಸೂಚನೆ ಆಧರಿಸಿ ಎಲ್ಲರನ್ನೂ ಕೈಬಿಡಲಾಗಿತ್ತು. ಆನಂತರ ನ್ಯಾಯಾಂಗ ನಿಂದನೆ ಅರ್ಜಿ ಸಲ್ಲಿಸುವಾಗ ರಿಜಿಸ್ಟ್ರಿ ಆಕ್ಷೇಪಿಸಿದ್ದರಿಂದ ಕುಮಾರಸ್ವಾಮಿ ಮತ್ತಿತರರ ಹೆಸರನ್ನು ಕೈಬಿಡಲಾಗಿತ್ತೇ ವಿನಾ ಉದ್ದೇಶಪೂರ್ವಕ ವಾಗಿಯಲ್ಲ. ಆರೋಪಿಯಾಗಿ ಕುಮಾರಸ್ವಾಮಿ ಅವರು ಪ್ರಕರಣದಲ್ಲಿ ಭಾಗಿಯಾಗುವುದು ಸಮಂಜಸವಾಗಿದೆ ಎಂದು ವಿವರಿಸಿದರು. ಮಾರ್ಚ್ 28ರಂದು ಸುಪ್ರೀಂ ಕೋರ್ಟ್ ನ್ಯಾಯಾಂಗ ನಿಂದನೆ ಅರ್ಜಿ ಸಂಬಂಧ ಹೈಕೋರ್ಟ್ ಎಡತಾಕಲು ಕುಮಾರಸ್ವಾಮಿ ಅವರಿಗೆ ಸೂಚಿಸಿತ್ತು. ಇದರ ಆಧಾರದಲ್ಲಿ ಕುಮಾರಸ್ವಾಮಿ ಅವರು ಹೈಕೋರ್ಟ್‌ಗೆ ಮಧ್ಯಂತರ ಅರ್ಜಿ ಸಲ್ಲಿಸಿದ್ದರು.

## ಡಾ. ಶರತ್ ಜವಳಿಯವರ ಅಗಲಿಕೆ ಸಮಾಜಕ್ಕೆ ತುಂಬಲಾರದ ನಷ್ಟ: ವಿ.ವಿ.ಬಿರಾದಾರ ಕಂಬನಿ




**ನವದೆಹಲಿ, ಏ.18–** ಸರಳ ಸಜ್ಜನಿಕೆಯ ವ್ಯಕ್ತಿತ್ವ ನೇರ ಮಾತಾಡುವ ಬಿಚ್ಚು ಹೃದಯ ನಗು ಮುಖದ ಅಪ್ಪಟ ಬಸವ ಭಕ್ತರು ಸುಪ್ರೀಂ ಕೋರ್ಟಿನ ಹಿರಿಯ ವಕೀಲರು, ಕನ್ನಡ ಶಾಲೆ, ಕರ್ನಾಟಕ ಸಂಘದ ಸಲಹೆಗಾರರು, ಬಸವ ಇಂಟರ್ ನ್ಯಾಷನಲ್ ಸೆಂಟರ್, ಅಧ್ಯಕ್ಷರು, (ಸಂಸ್ಥಾಪಕರು) ಆದ ಡಾಕ್ಟರ್ ಶರತ್ ಜವಳಿಯವರು ತಮ್ಮ ವಕೀಲಿ ವೃತ್ತಿಯ ಜೊತೆಗೆ ಅನೇಕ ಸಂಘ ಸಂಸ್ಥೆಗಳ ಜೊತೆಗೂಡಿ ದಕ್ಷತೆಯಿಂದ ಕರ್ತವ್ಯ ನಿರ್ವಹಿಸಿ ರಾಜ್ಯಕ್ಕೆ ರಾಷ್ಟ್ರಕ್ಕೆ ತಮ್ಮದೆ ಆದ ಅನುಪಮ ಕೊಡುಗೆ ನೀಡಿದ್ದಾರೆ. ಶ್ರೀಯುತರು ದೆಹಲಿಯ ಸಿ–39, ನೀತಿಬಾಗದ ತಮ್ಮ ಸ್ವಗೃಹದಲ್ಲಿ ದಿನಾಂಕ 16–04–25 ರಂದು ಬುಧವಾರ ಸಾಯಂಕಾಲ ಸುಮಾರು 3.30 ಗಂಟೆಗೆ ನಿಧನರಾದರು ಎಂಬ ಸಮಾಚಾರ ಕೇಳಿ ನನಗೆ ದುಃಖವಾಯಿತು. ಧಾರವಾಡ ಜಿಲ್ಲೆಯಲ್ಲಿ ಜನಿಸಿದ ಇವರು ತಮ್ಮ ಹುಟ್ಟು ಸಾವಿನ ನಡುವೆ ಸುಮಾರು 85 ವರುಷ ಬಾಳಿ ಬದುಕಿ ನಾಡಿನ ರಾಷ್ಟ್ರದ ಉನ್ನತಿಗಾಗಿ ಹಗಲಿರುಳು ದುಡಿದ ಮಹನಿಯರಲ್ಲಿ ಇವರೊಬ್ಬರೆಂದರೆ ತಪ್ಪಾಗದು.

ಜವಳಿ ಅವರು 1964 ರಿಂದ 2025 ರವರೆಗೆ ಸುಪ್ರೀಂ ಕೋರ್ಟಿನ ಹಿರಿಯ ವಕೀಲರಾಗಿ ಕಾವೇರಿ ಕೃಷ್ಣ ಮಹದಾಯಿ ಜಲವಿವಾದ ಕರ್ನಾಟಕ ಪರವಾಗಿ ವಾದಿಸಿ ನ್ಯಾಯ ಒದಗಿಸಿದ ಧೀಮಂತ ವ್ಯಕ್ತಿಯಾಗಿದ್ದರು. ಕರ್ನಾಟಕ ವಿಶ್ವವಿದ್ಯಾಲಯದ ಉಪಕುಲಪತಿ ಡಾಕ್ಟರ್ ಡಿ.ಸಿ.ಪಾವಟೆಯವರ ಗರಡಿಯಲ್ಲಿ ಬೆಳೆದ ಇವರು ಧಾರವಾಡದ ಸಾಂಸ್ಕೃತಿಕ ಶ್ರೀಮಂತಿಕೆಯನ್ನು ಕನ್ನಡಿಗರಿಗೆ ಕನ್ನಡೇತರರಿಗೆ ಇಡಿ ದೇಶದಲ್ಲಿಯೆ ಸಂಘ ಸಂಸ್ಥೆಗಳಿಂದ ಪರಿಚಯಿಸುವ ಪ್ರಯತ್ನ ಮಾಡಿದ್ದಾರೆ.

ಮಾಜಿ ಪ್ರಧಾನಿ ದಿವಂಗತ ರಾಜೀವ್ ಗಾಂಧಿ ಅವರ ಹತ್ಯ ವಿಚಾರಣೆಗೆ ಸಂಬಂಧಿಸಿದಂತೆ ನೇಮಿಸಲ್ಪಟ್ಟ ಜೈನ ಕಮಿಶನ್ ನಲ್ಲಿ ಕೌನ್ಸಿಲ್ ಆಗಿ ಕೇಂದ್ರ ಸರ್ಕಾರದ ಮತ್ತು ಕರ್ನಾಟಕದ ಹಿರಿಯ ವಕೀಲರ ತಂಡದ ಸದಸ್ಯನಾಗಿ ನಂತರ ಯುಪಿಎಸ್ಸಿ ನಡೆಸುವ ಕಾನೂನು ಮಂತ್ರಾಲಯದ ವಿವಿಧ ಕಾನೂನು ಅಧಿಕಾರಿಗಳ ಆಯ್ಕೆ ಸಮಿತಿಯ ಸದಸ್ಯರಾಗಿ. ರಾಜಸ್ಥಾನ ಮತ್ತು ಕಾಶ್ಮೀರ ಲೋಕಸೇವಾ ಆಯೋಗಗಳ ಆಯ್ಕೆ ಸಮಿತಿಯ ಸದಸ್ಯರಾಗಿ ಅಜ್ಮೇರ್ ಮಯೋ ಕಾಲೇಜು ಹಾಗು ದೆಹಲಿ ಕನ್ನಡ ಶಿಕ್ಷಣ ಸಂಸ್ಥೆಗಳ ಆಡಳಿತ ಮಂಡಳಿಗಳ ವಿವಿಧ ಹುದ್ದೆಗಳಲ್ಲಿ ಕೆಲಸ,

ಬೆಂಗಳೂರಿನ ನ್ಯಾಷನಲ್ ಲಾ ಕಾಲೇಜಿನ ಅಕಾಡೆಮಿ ಕೌನ್ಸಿಲಿನ ಸದಸ್ಯ, ಕರ್ನಾಟಕ ಹೈಕೋರ್ಟಿನ ಸಂಚಾರಿ ಪೀಠ ಧಾರವಾಡಕ್ಕೆ ಎಸ್.ಸಿ.ಜವಳಿ ಲಿಗಲ್ ರಿಸರ್ಚ್ ಸೆಂಟರ್ ಸ್ಥಾಪಿಸಲು ಮುಂಚುಣಿಯ ಪಾತ್ರ ಕರ್ನಾಟಕ ವಿಶ್ವವಿದ್ಯಾಲಯ ಅಡಿಯಲ್ಲಿ ಸ್ಥಾಪನೆಯಾಗಿರುವ ಲಾ ಕಾಲೇಜಿನಲ್ಲಿ ಮೂಟೆ ಕೋರ್ಟ್ ಸ್ಥಾಪನೆಯಲ್ಲಿ ಸಕ್ರಿಯ ಪಾತ್ರ, ಹೊರನಾಡ ಕನ್ನಡಿಗರ ಪ್ರಾತಿನಿಧಿಕ ಸಂಸ್ಥೆಯಾಗಿರುವ ದೆಹಲಿ ಕರ್ನಾಟಕದ ಸಂಘದ ವಿಶೇಷ ಆಹ್ವಾನಿತರಾಗಿ ಸೇವೆ. ಹೀಗೆ ಅನೇಕ ಸಂಘ ಸಂಸ್ಥೆಗಳಲ್ಲಿ ಪ್ರಮುಖ ಪಾತ್ರ ವಹಿಸಿದ ಇವರು ಜನಸಾಮಾನ್ಯರ ಬದುಕಿನ ಬಂಡಿಯಾಗಿದ್ದರು. ಸಾಮಾಜಿಕವಾಗಿ ರಾಜಕೀಯವಾಗಿ ಆರ್ಥಿಕವಾಗಿ ಸೇವೆ ಸಲ್ಲಿಸಿದ ಇವರನ್ನು ಗುರುತಿಸಿ ಕರ್ನಾಟಕ ವಿಶ್ವವಿದ್ಯಾಲಯವು ಗೌರವ ಡಾಕ್ಟರೇಟ ಪ್ರಶಸ್ತಿ, ಕರ್ನಾಟಕ ಸಂಘ, ವಿಶಿಷ್ಟ ಕನ್ನಡಿಗ ಹೀಗೆ ಅನೇಕ ಸಂಘ ಸಂಸ್ಥೆಗಳು ಕೂಡಾ ಗೌರವಾನ್ವಿತವಾಗಿ ಗಣ್ಯರ ಅಮೃತ ಹಸ್ತದಿಂದ ಸನ್ಮಾನಿಸಲಾಯಿತು. ಸುಪ್ರೀಂ ಕೋರ್ಟಿನ ನ್ಯಾಯಾಧೀಶರು ಹಿರಿಯ ವಕಿಲರು ಸಂಸತ್ ಸದಸ್ಯರು, ದೆಹಲಿಯ ಅನೇಕ ಸಂಘ ಸಂಸ್ಥೆಗಳು ಹಾಗು ಬಸವ ಇಂಟರ್‌ನ್ಯಾಷನಲ್ ಸೆಂಟರಿನ ಪದಾಧಿಕಾರಿಗಳು ಸದಸ್ಯರು ಸಂತಾಪ ವ್ಯಕ್ತಪಡಿಸಿದ್ದಾರೆ. ಅವರ ಅಗಲಿಕೆಯಿಂದ ವೈಯಕ್ತಿಕವಾಗಿ ಅಲ್ಲದೆ ನಾಡಿಗೆ ರಾಷ್ಟ್ರಕ್ಕೆ ತುಂಬಲಾರದ ನಷ್ಟ ಉಂಟಾಗಿದೆ. ಅವರು ತಮ್ಮ ಧರ್ಮ ಪತ್ನಿ ಶ್ರೀಮತಿ ಶಾಲಿನಿ ಪ್ರೀತಿಯ ಪುತ್ರ, ಕಿರೀಟ ಪುತ್ರಿ ಅನುಪಮಾ ಹಾಗು ಅಪಾರ ಬಂಧು ಬಳಗವನ್ನು ಬಿಟ್ಟು ಅಗಲಿದ್ದಾರೆ. ಮೃತರ ಆತ್ಮಕ್ಕೆ ಶಾಂತಿವನ್ನೀಯಲಿ ಹಾಗು ಅವರ ಬಂಧು ಮಿತ್ರರಿಗೆ, ಅಭಿಮಾನಿಗಳಿಗೆ ದುಃಖವನ್ನು ಸಹಿಸುವ ಶಕ್ತಿಯನ್ನು ಕೊಟ್ಟು ಕಾಪಾಡಲಿ ಎಂದು ದೇವರಲ್ಲಿ ಪ್ರಾರ್ಥನೆ ಸಲ್ಲಿಸುತ್ತೇನೆ.

**ವಿ ವಿ ಬಿರಾದಾರ**

ಬಸವ ಇಂಟರ್‌ನ್ಯಾಷನಲ್ ಸೆಂಟರ್ ಅಧ್ಯಕ್ಷರು ಕಾರ್ಯದರ್ಶಿ ಪದಾಧಿಕಾರಿಗಳು ಸದಸ್ಯರು, ನವದೆಹಲಿ

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,A/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

ಏಪ್ರಿಲ್ 19 2025, ಶನಿವಾರ

## ಒಳಪುಟಗಳಲ್ಲಿ



ರಾಷ್ಟ್ರಪತಿಗೆ ನಿರ್ದೇಶನ ಸಲ್ಲ: ಸುಪ್ರೀಂ ವಿರುದ್ಧ ಧನಕರ್ ವಾಗ್ದಾಳಿ- - ಪು.4

# ಪ್ರಧಾನಿ ಮೋದಿ–ಎಲಾನ್ ಮಸ್ಕ್ ಸಂಭಾಷಣೆ: ತಂತ್ರಜ್ಞಾನ–ಆವಿಷ್ಕಾರ ಕ್ಷೇತ್ರದಲ್ಲಿ ಸಹಕಾರದ ಚರ್ಚೆ

**ನವದೆಹಲಿ, ಏ.18:** ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಟೆಸ್ಲಾ ಮತ್ತು ಸ್ಪೇಸ್‌ಎಕ್ಸ್‌ನ ಮುಖ್ಯ ಕಾರ್ಯನಿರ್ವಾಹಕ ಎಲಾನ್ ಮಸ್ಕ್ ಅವರೊಂದಿಗೆ ದೂರವಾಣಿ ಸಂಭಾಷಣೆ ನಡೆಸಿದ್ದಾರೆ. ಈ ಸಂಭಾಷಣೆಯಲ್ಲಿ ತಂತ್ರಜ್ಞಾನ ಮತ್ತು ಆವಿಷ್ಕಾರ ಕ್ಷೇತ್ರಗಳಲ್ಲಿ ಭಾರತ ಮತ್ತು ಅಮೆರಿಕ ಒಡಗೂಡಿಸುವ ಬಗ್ಗೆ ಚರ್ಚೆ ನಡೆದಿದೆ.



ಪ್ರಧಾನಮಂತ್ರಿ ಮೋದಿ ಅವರು ತಮ್ಮ ಎಕ್ಸ್ ಖಾತೆಯಲ್ಲಿ ಈ ಸಂಭಾಷಣೆಯ ವಿವರಗಳನ್ನು ಹಂಚಿಕೊಂಡಿದ್ದು, ಈ ವರ್ಷದ ಆರಂಭದಲ್ಲಿ ವಾಷಿಂಗ್ಟನ್ ಡಿ.ಸಿ.ಯಲ್ಲಿ ಎಲಾನ್ ಮಸ್ಕ್ ಅವರೊಂದಿಗೆ ನಡೆದ ಭೇಟಿಯ ಸಂದರ್ಭದಲ್ಲಿ ಚರ್ಚಿಸಿದ ವಿಷಯಗಳನ್ನು ಮತ್ತೆ ಪರಿಶೀಲಿಸಿದ್ದೇವೆ ಎಂದು ತಿಳಿಸಿದ್ದಾರೆ. ತಂತ್ರಜ್ಞಾನ ಮತ್ತು ಆವಿಷ್ಕಾರ ಕ್ಷೇತ್ರಗಳಲ್ಲಿ ಸಹಕಾರಕ್ಕೆ ಅಪಾರ ಸಾಧ್ಯತೆಗಳಿವೆ.

ಭಾರತವು ಅಮೆರಿಕದೊಂದಿಗಿನ ಈ ಕ್ಷೇತ್ರದ ಸಹಭಾಗಿತ್ವವನ್ನು ಮತ್ತಷ್ಟು ಬಲಪಡಿಸಲು ಬದ್ಧವಾಗಿದೆ, ಈ ಕ್ಷೇತ್ರಗಳಲ್ಲಿ ಅಮೆರಿಕದೊಂದಿಗೆ ಪಾಲುದಾರಿಕೆಯನ್ನು ಮುಂದುವರಿಸಲು ಭಾರತ ಬದ್ಧವಾಗಿದೆ ಎಂದು ಪ್ರಧಾನಿ ಮೋದಿ ಹೇಳಿದ್ದಾರೆ.

ಈ ಸಂಭಾಷಣೆಯಲ್ಲಿ ಟೆಸ್ಲಾ ಮತ್ತು ಸ್ಟಾರ್ಲಿಂಕ್‌ನಂತಹ ಎಲಾನ್ ಮಸ್ಕ್ ಅವರ ಕಂಪನಿಗಳು ಭಾರತದಲ್ಲಿ ಹೂಡಿಕೆ ಮಾಡುವ ಸಾಧ್ಯತೆಯ ಬಗ್ಗೆಯೂ ಚರ್ಚೆ ನಡೆದಿದೆ ಎಂದು ವರದಿಗಳು ತಿಳಿಸಿವೆ. ಈ ಚರ್ಚೆಯು ಭಾರತ–ಅಮೆರಿಕ ಸಂಬಂಧಗಳನ್ನು ಮತ್ತಷ್ಟು ಗಟ್ಟಿಗೊಳಿಸುವ ದಿಕ್ಕಿನಲ್ಲಿ ಒಂದು ಪ್ರಮುಖ ಹೆಜ್ಜೆ ಎಂದು ಪರಿಗಣಿಸಲಾಗಿದೆ.

ಎರಡೂ ದೇಶಗಳ ನಡುವಿನ ಸಹಕಾರವು ಕೃತಕ ಬುದ್ಧಿಮತ್ತೆ, ಬಾಹ್ಯಾಕಾಶ ಸಂಶೋಧನೆ, ಮತ್ತು ಸುಸ್ಥಿರ ಅಭಿವೃದ್ಧಿಯಂತಹ ಕ್ಷೇತ್ರಗಳಲ್ಲಿ ಭವಿಷ್ಯದ ಯೋಜನೆಗಳಿಗೆ ದಾರಿ ಮಾಡಿಕೊಡಬಹುದು.

# ಕೆಂಗೇರಿಯಲ್ಲಿ ಕಲಿದೇವ ಕನ್ವೆನ್ಷನ್ ಹಾಲ್ ಉದ್ಘಾಟನೆ



**ಬೆಂಗಳೂರು, ಏ.18:** "ನಿನ್ನೆ ನಡೆದ ವಿಶೇಷ ಸಚಿವ ಸಂಪುಟ ಸಭೆಯಲ್ಲಿ ಜಾತಿ ಗಣತಿಗೆ (ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷೆ) ಯಾರೂ ವಿರೋಧ ಮಾಡಿಲ್ಲ" ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ. ಕೆಂಗೇರಿಯಲ್ಲಿಂದು ನಡೆದ ಕಾರ್ಯಕ್ರಮವೊಂದರಲ್ಲಿ ಭಾಗಿಯಾಗಿ ಮಾತನಾಡುತ್ತಾ, "ವಿಶೇಷ ಸಂಪುಟ ಸಭೆಯಲ್ಲಿ ಜಾತಿ ಗಣತಿ ಕುರಿತು ಸುದೀರ್ಘ ಚರ್ಚೆ ನಡೆಯಿತು. ಆದರೆ ಚರ್ಚೆ ಅಪೂರ್ಣವಾಗಿದೆ. ಹಾಗಾಗಿ, ಅದನ್ನು ಮುಂದಿನ ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಲು ತೀರ್ಮಾನಿಸಲಾಗಿದೆ" ಎಂದರು.

ಯಾರೂ ಜಾತಿ ಗಣತಿಗೆ ವಿರೋಧ ಮಾಡಿಲ್ಲ. ಸಚಿವರು ಒಬ್ಬರಿಗೊಬ್ಬರು ಜೋರಾಗಿ, ಏರು ಧ್ವನಿಯಲ್ಲಿ ಮಾತನಾಡಿದ್ದಾರೆ ಎಂಬುದು ಸುದ್ದಿ ಸುಳ್ಳು" ಎಂದು ಇದೇ ವೇಳೆ ಸ್ಪಷ್ಟಪಡಿಸಿದರು. ಶಿವಮೊಗ್ಗದಲ್ಲಿ ಸಿಇಟಿ ಪರೀಕ್ಷೆ ಪ್ರವೇಶಕ್ಕಾಗಿ ವಿದ್ಯಾರ್ಥಿಯ ಜನಿವಾರ ತೆಗೆಸಿದ ಪ್ರಕರಣ ಸಂಬಂಧ ಪ್ರತಿಕ್ರಿಯಿಸುತ್ತಾ, "ಆ ಬಗ್ಗೆ ಪರಿಶೀಲಿಸುತ್ತೇನೆ" ಎಂದು ತಿಳಿಸಿದರು.

**ವಿದ್ಯಾಸಿರಿ ಯೋಜನೆ– 2 ಸಾವಿರ ರೂಪಾಯಿಗೆ ಹೆಚ್ಚಳ:** ಕೆಂಗೇರಿಯಲ್ಲಿ ಕಲಿದೇವ ಕನ್ವೆನ್ಶನ್ ಹಾಲ್ ಲೋಕಾರ್ಪಣೆಗೊಳಿಸಿ ಮಾತನಾಡುತ್ತಾ ಸಿಎಂ, ಮಡಿವಾಳ ಸಮುದಾಯದ ಪ್ರಗತಿಗೆ ಕಾಂಗ್ರೆಸ್ ಸರ್ಕಾರ ಬದ್ಧ. ಮುಖ್ಯವಾಹಿನಿಗೆ ಬರುವ ಪ್ರಯತ್ನ ನಿಮ್ಮಿಂದ ಹೆಚ್ಚೆಚ್ಚು ಆಗಬೇಕು.

ಈ ಕಾರಣಕ್ಕೆ ವಿದ್ಯಾಸಿರಿ ಯೋಜನೆಯ ಮೊತ್ತವನ್ನು ಎರಡು ಸಾವಿರ ರೂಪಾಯಿಗೆ ಹೆಚ್ಚಿಸುತ್ತೇನೆ" ಎಂದು ಸಿದ್ದರಾಮಯ್ಯ ಘೋಷಣೆ ಮಾಡಿದರು. "ಮಡಿವಾಳ ಸಮಾಜದಲ್ಲಿ ಯಾರೂ ಶಾಸಕರಿಲ್ಲ. ಒಬ್ಬರು ಮಾತ್ರ ಐಎಎಸ್ ಅಧಿಕಾರಿ ಇದ್ದಾರೆ. ಮಡಿವಾಳ ಸಮಾಜ ಇಷ್ಟು ಹಿಂದುಳಿಯಲು ಮನುಸ್ಮೃತಿ ಕಾರಣ. ಈ ಅಸಮಾನತೆಯ ಕಾರಣಕ್ಕೆ ಮನುಸ್ಮೃತಿಯನ್ನು ಅಂಬೇಡ್ಕರ್ ಬೆಂಕಿ ಹಾಕಿ ಸುಟ್ಟರು.

ಮನುಸ್ಮೃತಿಯೇ ಜಾತಿ ವ್ಯವಸ್ಥೆಯ ಮೂಲ" ಎಂದರು. "ಮಡಿವಾಳ ಸಮುದಾಯದ ಮಕ್ಕಳು ಹೆಚ್ಚೆಚ್ಚು ಶಿಕ್ಷಣ ಪಡೆಯಬೇಕು ಎನ್ನುವ ಉದ್ದೇಶದಿಂದಲೇ ನಾವು ವಿದ್ಯಾಸಿರಿ ಯೋಜನೆಯನ್ನು ಜಾರಿಗೆ ತಂದೆವು. ಈಗ ವಿದ್ಯಾಸಿರಿ ಯೋಜನೆಯ ಮೊತ್ತವನ್ನು ಪ್ರತಿ ವಿದ್ಯಾರ್ಥಿಗೆ ಎರಡು ಸಾವಿರಕ್ಕೆ ಹೆಚ್ಚಿಸಲಾಗುವುದು. ಜೊತೆಗೆ ಮಡಿವಾಳ ಸಮುದಾಯದ ಹಾಸ್ಟೆಲ್ಗೆ ಅಗತ್ಯ ಸವಲತ್ತು ಒದಗಿಸಲಾಗುವುದು" ಎಂದು ಭರವಸೆ ನೀಡಿದರು.

# ಭಾರತಕ್ಕೆ ಬೇಕಾಗಿದ್ದ ಮೋಸ್ಟ್ ವಾಂಟೆಡ್ ಉಗ್ರನ ಬಂಧನ




**ನವದೆಹಲಿ, ಏ.18:** ಪಂಜಾಬ್‌ನಾದ್ಯಾಂತ ನಡೆದ 14ಕ್ಕೂ ಹೆಚ್ಚು ಗ್ರೇನೆಡ್ ದಾಳಿಗಳಲ್ಲಿ ಭಾಗಿಯಾದ ಹ್ಯಾಪಿ ಪ್ಯಾಸಿಯಾ ಅಲಿಯಾಸ್ ಹರ್ಪ್ರೀತ್ ಸಿಂಗ್ನನ್ನು ಅಮೆರಿಕದಲ್ಲಿ ಎಫ್‌ಬಿಐ ಬಂಧಿಸಿದೆ. ಪ್ಯಾಸಿಯಾ ಅನೇಕ ಭಯೋತ್ಪಾದಕ ದಾಳಿಗಳಲ್ಲಿ ಭಾಗಿಯಾಗಿದ್ದು, ಎನ್ಐಎ ನ್ಯಾಯಾಲಯದ ಮುಂದೆ ಸಲ್ಲಿಸಿದ್ದ ಚಾರ್ಜ್‌ಶೀಟ್‌ನಲ್ಲಿ ಮತ್ತೊಬ್ಬ ಪಾತಕಿ ಹರ್ವಿಂದರ್ ಸಿಂಗ್ ಸಂಧು ಅಲಿಯಾಸ್ ರಿಂಡಾ ಜೊತೆಗೆ ಈತನ ಹೆಸರು ಕೂಡ ಇದೆ.

ಈಗ ಅಮೆರಿಕಾದಲ್ಲಿ ಬಂಧಿತನಾಗಿರುವ ಹರ್ಪೀತ್ ಸಿಂಗ್ ಪಂಜಾಬ್‌ನ ಅಮೃತಸರ ಜಿಲ್ಲೆಯ ಪ್ಯಾಸಿಯಾ ಗ್ರಾಮದವನಾಗಿದ್ದು, ಹಲವಾರು ವರ್ಷಗಳಿಂದ ಅಪರಾಧ ಚಟುವಟಿಕೆಗಳಲ್ಲಿ ಭಾಗಿಯಾಗಿದ್ದಾರೆ. ಕಾನೂನು ಬಾಹಿರ ಚಟುವಟಿಕೆಗಳ ನಿರ್ಮೂಲನಾ ಕಾಯ್ದೆ (ಯುಎಪಿಎ), ಶಸ್ತ್ರಾಸ್ತ್ರ ಕಾಯ್ದೆ ಮತ್ತು ಮಾದಕ ದ್ರವ್ಯಗಳು ಮತ್ತು ಮನೋವಿಕೃತ ವಸ್ತುಗಳ (ಎನ್‌ಡಿಪಿಎಸ್) ಕಾಯ್ದೆಯೂ ಸೇರಿದಂತೆ ಹಲವು ಪ್ರಕರಣಗಳಲ್ಲಿ ಆತ ಪೊಲೀಸರಿಗೆ ಬೇಕಾಗಿದ್ದಾನೆ.

ಪ್ಯಾಸಿಯಾ ಭಾರತಕ್ಕೆ ಬೇಕಾಗಿರುವ ಅಪರಾಧಿಗಳಲ್ಲಿ ಒಬ್ಬನಾಗಿದ್ದು, ಈತನ ತಲೆಗೆ ಭಾರತ ಸರ್ಕಾರ 5ಲಕ್ಷ ಬಹುಮಾನವನ್ನು ಘೋಷಿಸಿದೆ. ಈ ವರ್ಷದ ಜನವರಿಯಲ್ಲಿ, ಹಲವಾರು ಗ್ರೇನೇಡ್ ದಾಳಿಗಳಲ್ಲಿ ಅವನು ಭಾಗಿಯಾಗಿದ್ದಾನೆ ಎಂಬ ಆರೋಪದ ಮೇಲೆ ಎನ್ಐಎ ಆತನ ಸುಳಿವು ನೀಡಿದವರಿಗೆ 5 ಲಕ್ಷ ಬಹುಮಾನವನ್ನು ಘೋಷಿಸಿತು. ಭಾರತದಲ್ಲಿ ನಡೆದ ಹಲವಾರು ಇಂತಹ ದಾಳಿಗಳ ಜವಾಬ್ದಾರಿಯನ್ನು ಅವನು ವಹಿಸಿಕೊಂಡಿದ್ದಾನೆ ಎಂಬುದು ಭಾರತದ ತನಿಖಾ ಸಂಸ್ಥೆಗಳ ಆರೋಪವಾಗಿದೆ.

2024 ರ ಸೆಪ್ಟೆಂಬರ್ 11ರಂದು ಇಬ್ಬರು ಯುವಕರು ಪಂಜಾಬ್ನಲ್ಲಿ ಸೆಕ್ಟರ್ 10 ರ ಮನೆಯ ಮೇಲೆ ಹ್ಯಾಂಡ್ ಗ್ರೇನೇಡ್ ಎಸೆದಿದ್ದರು. ಹ್ಯಾಪಿ ಪಾಸಿಯಾ ಸೂಚನೆಗಳ ಮೇರೆಗೆಯೇ ಈ ಯುವಕರು ಕಾರ್ಯನಿರ್ವಹಿಸಿದರು ಎಂದು ವರದಿಯಾಗಿದೆ. ಪೊಲೀಸರ ಪ್ರಕಾರ, ನಿವೃತ್ತ ಪೊಲೀಸ್ ವರಿಷ್ಠಾಧಿಕಾರಿ ಜಸ್ಕಿರತ್ ಸಿಂಗ್ ಚಾಹಲ್ ಅವರನ್ನು ಗುರಿಯಾಗಿಸಿಕೊಂಡು ಈ ದಾಳಿ ನಡೆಸಲಾಗಿತ್ತು.

ಜಸ್ಕಿರತ್ ಸಿಂಗ್ ಚಾಹಲ್ ಅವರು 1986 ರಲ್ಲಿ ನಕೋದರ್ನಲ್ಲಿ ಸ್ಟೇಷನ್ ಹೌಸ್ ಆಫೀಸರ್ (SHO) ಆಗಿ ಸೇವೆ ಸಲ್ಲಿಸಿದ್ದರು. ಈ ಸಮಯದಲ್ಲಿ ನಾಲ್ವರು ಸಿಖ್ ಪ್ರತಿಭಟನಾಕಾರರು ಪೊಲೀಸ್ ಗುಂಡಿನ ದಾಳಿಯಲ್ಲಿ ಸಾವನ್ನಪ್ಪಿದರು. ಇದಕ್ಕೆ ಪ್ರತಿಯಾಗಿ ಸೇಡು ತೀರಿಸಿಕೊಳ್ಳಲು ಈ ದಾಳಿ ನಡೆದಿತ್ತು. ಇದಲ್ಲದೇ ಡಿಸೆಂಬರ್ 2023 ರಲ್ಲಿ ಪಂಜಾಬ್ ಪೊಲೀಸರು ಹ್ಯಾಪಿ ಪಾಸಿಯಾ ಮತ್ತು ಶಂಶೇರ್ ಅಲಿಯಾಸ್ ಹನಿ ನಿರ್ವಹಿಸುತ್ತಿದ್ದ ಭಯೋತ್ಪಾದಕ ಯೋಜನೆಯೊಂದನ್ನು ಭೇದಿಸಿದರು, ಬಟಾಲಾ ಮತ್ತು ಗುರುದಾಸ್ಪುರದಲ್ಲಿ ಪೊಲೀಸರ ಗುರಿಯಾಗಿಸಿ ರೂಪಿಸಿದ್ದ ಗ್ರೇನೇಡ್ ದಾಳಿ ಅದಾಗಿತ್ತು.

ಈ ಹ್ಯಾಪಿ ಪಾಸಿಯಾ ಪಾಕಿಸ್ತಾನಿ ಭಯೋತ್ಪಾದಕ ಹರ್ವಿಂದರ್ ಸಿಂಗ್ ಸಂಧು ಅಲಿಯಾಸ್ ರಿಂಡಾ ಜೊತೆ ಹಾಗೂ ಖಲಿಸ್ತಾನಿ ಉಗ್ರಗಾಮಿ ಗುಂಪಾದ ಬಬ್ಬರ್ ಖಾಲ್ಸಾ ಇಂಟರ್ನ್ಯಾಷನಲ್ (ಬಿಕೆಐ) ಜೊತೆಗೂ ಸಂಪರ್ಕ ಹೊಂದಿದ್ದಾನೆ. ಅವನಿಗೆ ಪಾಕಿಸ್ತಾನದ ಇಂಟರ್–ಸರ್ವೀಸಸ್ ಇಂಟೆಲಿಜೆನ್ಸ್ (ಐಎಸ್ಐ) ನಿಂದ ಬೆಂಬಲ ಸಿಗುತ್ತಿದೆ ಎಂಬ ವರದಿ ಇದೆ. ರಿಂಡಾ ಜೊತೆಗಿನ ಅವನ ಸಂಬಂಧ 2013 ರಿಗಿಂತಲೂ ಹಿಂದಿನದ್ದಾಗಿದೆ. ಇವರಿಬ್ಬರು ಪಂಜಾಬ್ನಲ್ಲಿ ಭಯೋತ್ಪಾದಕ ಚಟುವಟಿಕೆ ನಡೆಸುವಲ್ಲಿ ತಮ್ಮನ್ನು ತೊಡಗಿಸಿಕೊಂಡಿದ್ದಾರೆ.

ಅಕ್ರಮವಾಗಿ ಅಮೆರಿಕ ಪ್ರವೇಶಿಸಿದ್ದ ಹ್ಯಾಪಿ2021 ರಲ್ಲಿ, ಪ್ಯಾಸಿಯಾ ಮಾನವ ಕಳ್ಳಸಾಗಣೆ ಜಾಲದ ಸಹಾಯದಿಂದ ಮೆಕ್ಸಿಕೋ ಗಡಿಯ ಮೂಲಕ ಅಮೆರಿಕಕ್ಕೆ ಅಕ್ರಮವಾಗಿ ಪ್ರವೇಶಿಸಿದ್ದ.ಕೆಲ ದಿನಗಳ ಹಿಂದಷ್ಟೇ ಅಮೆರಿಕಾದ ತನಿಖಾ ಸಂಸ್ಥೆಗಳು ಭಾರತಕ್ಕೆ ಬೇಕಾಗಿದ್ದ ಮೋಸ್ಟ್ ವಾಂಟೆಂಡ್ ಉಗ್ರ, 26/11 ಮುಂಬೈ ದಾಳಿಯ ಆರೋಪಿ ತಹಾವೂರ್ ರಾಣಾನನ್ನು ಭಾರತಕ್ಕೆ ಹಸ್ತಾಂತರ ಮಾಡಿದ್ದು, ಪ್ರಸ್ತುತ ಭಾರತದ ರಾಷ್ಟ್ರೀಯ ತನಿಖಾ ಸಂಸ್ಥೆ ಆತನ ವಿಚಾರಣೆ ನಡೆಸುತ್ತಿದೆ.

# ಜಾತಿಗಣತಿ ಅವೈಜ್ಞಾನಿಕ: ಸಿದ್ದರಾಮಯ್ಯನವರ ಗ್ಯಾಂಗ್ ಎಲ್ಲೋ ಕುಳಿತು ರೂಪಿಸಿದ ವರದಿ

## 10 ವರ್ಷದಲ್ಲಿ ಒಂದು ಕೋಟಿ ಮಕ್ಕಳು ಜನಿಸಿದ್ದಾರೆ, ಅವರ ಭವಿಷ್ಯವೇನು: ಪ್ರತಿಪಕ್ಷ ನಾಯಕ ಅಶೋಕ್ ಪ್ರಶ್ನೆ



ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಸೇರಿದಂತೆ ಬಿಜೆಪಿ ಮುಖಂಡರು ಶುಕ್ರವಾರ ಕಲಬುರಗಿಯಲ್ಲಿ ಜನಾಕ್ರೋಶ ಯಾತ್ರೆ ಕೈಗೊಂಡಿದ್ದಾರೆ.

**ಬೆಂಗಳೂರು, ಏ.18:** ರಾಜ್ಯ ಕಾಂಗ್ರೆಸ್ ಸರ್ಕಾರಕ್ಕೆ ಜಾತಿಗಣತಿ ವರದಿ ಜಾರಿ ವಿಚಾರವು ದೊಡ್ಡ ತಲೆನೋವಾಗಿ ಪರಿಣಮಿಸಿದೆ. ಎಲ್ಲೆಡೆ ಇದಕ್ಕೆ ತೀವ್ರ ವಿರೋಧ ವ್ಯಕ್ತವಾಗುತ್ತಿರುವುದರಿಂದ ಸದ್ಯಕ್ಕೆ ಈ ವರದಿ ಜಾರಿಗೆ ಮೀನಮೇಷ ಎಣಿಸುತ್ತಿದೆ. ಅಲ್ಲದೆ ಮುಂದಿನ ಸಚಿವ ಸಂಪುಟ ಸಭೆಯಲ್ಲಿ ಈ ವರದಿ ಜಾರಿ ಬಗ್ಗೆ ನಿರ್ಣಯ ತೆಗೆದುಕೊಳ್ಳುವುದಾಗಿ ಮುಂದೂಡಿದೆ.ಈ ಸಂಬಂಧ ವಿಪಕ್ಷ ನಾಯಕ ಆರ್.ಅಶೋಕ್ ಅವರು ಅನುಮಾನ ವ್ಯಕ್ತಪಡಿಸಿದ್ದು, ಕೆಲ ಪ್ರಶ್ನೆಗಳನ್ನು ಸಿದ್ದರಾಮಯ್ಯ ಸರ್ಕಾರದ ಮುಂದಿಟ್ಟಿದ್ದಾರೆ. 10 ವರ್ಷಗಳ ಹಿಂದೆ ಆರಂಭವಾದ ಸಿಎಂ ಸಿದ್ದರಾಮಯ್ಯ ಅವರ ಜಾತಿ ಜನಗಣತಿ ಎಂಬ ಬೃಹನ್ನಾಟಕ ಮೆಗಾ ಸೀರಿಯಲ್ ರೀತಿ ಇನ್ನೂ ಮುಂದುವರೆಯುತ್ತಲೇ ಇದೆ ಎಂದು ವಾಗ್ದಾಳಿ ನಡೆಸಿದ್ದಾರೆ. ಬೆಲೆ ಏರಿಕೆ, ಕುಸಿದಿರುವ ಕಾನೂನು ಸುವ್ಯವಸ್ಥೆ, ಅಭಿವೃದ್ಧಿ ಶೂನ್ಯತೆ ಬಗ್ಗೆ ರಾಜ್ಯಾದ್ಯಂತ ಕಾಡ್ಗಿಚ್ಚಿನಂತೆ ಹಬ್ಬಿರುವ ಜನಾಕ್ರೋಶದ ಕಿಚ್ಚಿನಿಂದ ತಪ್ಪಿಸಿಕೊಳ್ಳಲು ಜಾತಿ ಜನಗಣತಿ ವರದಿಯನ್ನ ಮುನ್ನೆಲೆಗೆ ತಂದಿರುವ ಸಿಎಂ ಸಿದ್ದರಾಮಯ್ಯನವರು ತಮ್ಮ ಸರ್ಕಾರದ ವಿರುದ್ಧ ಎದ್ದಿರುವ ಜನಾಕ್ರೋಶದ ಜ್ವಾಲೆ ಕಡಿಮೆಯಾಗುವ ತನಕ ಜಾತಿ ಜನಗಣತಿ ಜಪ ಮಾಡುತ್ತಲೇ ಇರುವ ನಿರ್ಧಾರ ಮಾಡಿದಂತಿದೆ ಎಂದು ದೂರಿದ್ದಾರೆ.ಅಸಲಿಗೆ ವಿಶೇಷ ಸಚಿವ ಸಂಪುಟ ಸಭೆಯಿಂದ ನೀವು ಸಾಧಿಸಿದ್ದಾದರೂ ಏನು? ಜಾತಿ ಜನಗಣತಿ ವರದಿ ಬಗ್ಗೆ ಯಾವುದೇ ತೀರ್ಮಾನಕ್ಕೆ ಬರಲು ಸಾಧ್ಯವಾಗಿಲ್ಲ ಅಂದರೆ ಹಾಗಾದರೆ ಸಚಿವ ಸಂಪುಟದಲ್ಲಿ ಪರಸ್ಪರ ವಿಶ್ವಾಸದ ಕೊರತೆ ಇದೆಯೇ? ಎಂದು ಪ್ರಶ್ನೆಗಳ ಸುರಿಮಳೆ ಹರಿಸಿದ್ದಾರೆ. ಜಾತಿ ಜನಗಣತಿಯನ್ನು ಮತ್ತೊಮ್ಮೆ ವೈಜ್ಞಾನಿಕವಾಗಿ ನಡೆಸುವುದರ ಬಗ್ಗೆ ಚರ್ಚೆ ನಡೆಯಿತೇ ಎಂದು ಆರ್.ಅಶೋಕ್ ಕೇಳಿದ್ದಾರೆ.

ವರದಿಯಲ್ಲಿ ಸಹಿ ಹಾಕದೆ ಕಾಂತರಾಜು ಓಡಿಹೋಗಿದ್ದಾರೆ. ಜಯಪ್ರಕಾಶ್ ಹೆಗ್ಡೆ ವರದಿಯನ್ನು ತೆಗೆದು ನೋಡಿದಾಗ ಅದು ಅಸಲಿ ಅಲ್ಲ, ಕೇವಲ ಒಂದು ಪ್ರತಿ ಎಂದು ತಿಳಿದುಬಂದಿದೆ. ಈ ಬಗ್ಗೆ ಹೆಗ್ಡೆ ಪತ್ರ ಬರೆದಿದ್ದಾರೆ. ಸಿದ್ದರಾಮಯ್ಯನವರ ಗ್ಯಾಂಗ್ ಎಲ್ಲೋ ಕುಳಿತು ಸಿದ್ಧಪಡಿಸಿದ ವರದಿಯನ್ನು ಯಾರೂ ಒಪ್ಪಬೇಕಿಲ್ಲ. 10 ವರ್ಷದಲ್ಲಿ ಒಂದು ಕೋಟಿ ಮಕ್ಕಳು ಹುಟ್ಟಿದ್ದಾರೆ ಎಂದುಕೊಂಡರೆ, ಅದಕ್ಕೆ ಕಾರಣವೇನು? ಜಾತಿ ಜನಗಣತಿ ವರದಿ ಬಗ್ಗೆ ಎಲ್ಲ ಸಚಿವರಿಗೂ ಲಿಖಿತ ರೂಪದಲ್ಲಿ ಉತ್ತರ ನೀಡುವಂತೆ ಮುಖ್ಯಮಂತ್ರಿಗಳು ಸೂಚನೆ ನೀಡಿದ್ದಾರೆ ಎಂಬ ಸುದ್ದಿ ಇದೆ. ಇವರನ್ನು ಯಾವ ವರ್ಗಕ್ಕೆ ಸೇರಿಸುತ್ತಾರೆ? ಹೊಸ ಪೀಳಿಗೆಯ ಭವಿಷ್ಯವೇನು? ಮೀಸಲಾತಿಯ ಮಾನದಂಡವೇನು? ಎಂದು ಪ್ರಶ್ನಿಸಿದರು.

ಭಂಡ ಹಾಗೂ ಭ್ರಷ್ಟ ಸಿಎಂ ಸಿದ್ದರಾಮಯ್ಯ ಅವರು ಸಮಾಜವನ್ನು ವಿಭಜಿಸಲು ಸದಾ ಸಿದ್ದರು. ಸಿಎಂ ಸಿದ್ದರಾಮಯ್ಯ ಅವರು ಮಾಡಿಸಿದ ಜಾತಿಗಣತಿ ವೈಜ್ಞಾನಿಕವಲ್ಲ, ಇದೊಂದು ಸಿದ್ದರಾಮಯ್ಯ ಮತ್ತವರ ಪಟಾಲಂ ತಯಾರಿಸಿದ ಬೋಗಸ್ ಅಂಶಗಳನ್ನೊಳಗೊಂಡ ವರದಿ ಎಂಬುದು ಸಾಬೀತಾಗುತ್ತಿದೆ. ಸಿದ್ದರಾಮಯ್ಯ ಅವರ ಸರ್ಕಾರ ಸದ್ಯ ಬಿಡುಗಡೆಗೊಳಿಸಿರುವ ಈ ಬೋಗಸ್ ಜಾತಿಗಣತಿ ವರದಿಯನ್ನು ಕೇವಲ ಮುಸ್ಲಿಂ ಸಮುದಾಯ ಸ್ವಾಗತಿಸಿದೆಯೇ, ಹೊರತು ಉಳಿದೆಲ್ಲ ಸಮುದಾಯಗಳು ಅತ್ಯಂತ ಕಟುವಾದ ಶಬ್ದದಲ್ಲಿ ಖಂಡಿಸಿವೆ.

ಇನ್ನೂ ಮುಂದುವರೆದು ಒಂದು ವೇಳೆ ಜಾತಿಗಣತಿಯನ್ನು ಅನುಷ್ಠಾನಕ್ಕೆ ತಂದರೆ ರಕ್ತಕ್ರಾಂತಿಯಾಗುತ್ತದೆ ಎಂಬ ಎಚ್ಚರಿಕೆ ಸಹ ನೀಡಿವೆ ಎಂದು ಬಿಜೆಪಿ ಹೇಳಿದೆ.ಕರ್ನಾಟಕದಲ್ಲಿ ಮುಸ್ಲಿಂ ಸಮುದಾಯ ಅತ್ಯಂತ ದೊಡ್ಡ ಸಮುದಾಯ ಎಂಬುದನ್ನು ಬಿಂಬಿಸುವ ಸಲುವಾಗಿ ಸಿದ್ದರಾಮಯ್ಯ ಅವರು ಈ ಜಾತಿಗಣತಿ ಎಂಬ ವರದಿಯನ್ನು ತಯಾರಿಸಿ, ಕರ್ನಾಟಕದ ಉಳಿದೆಲ್ಲಾ ಸಮುದಾಯಗಳಿಗೆ ಮಹಾದ್ರೋಹವೆಸಗಿರುವುದು ಎದ್ದು ಕಾಣುತ್ತಿದೆ. ಸಂಪೂರ್ಣ ಅವೈಜ್ಞಾನಿಕವಾಗಿ ತಯಾರಿಸಿರುವ ಈ ಅವೈಜ್ಞಾನಿಕ ಜಾತಿಗಣತಿ ವರದಿಯನ್ನು ಯಾವುದೇ ಕಾರಣಕ್ಕೂ ಅಂಗೀಕರಿಸಬಾರದು ಎಂದು ಬಿಜೆಪಿ ಆಗ್ರಹಿಸಿದೆ.

**ಜಾತಿಗಣತಿ ವಿಚಾರಕ್ಕೆ ಪ್ರತಿಕ್ರಿಯಿಸಿ, ಮುಖ್ಯಮಂತ್ರಿ ಸಿದ್ದರಾಮಯ್ಯಗೆ ಜಾತಿ ಗಣತಿ ಬಗ್ಗೆ ಕಾಳಜಿ ಇಲ್ಲ. ಚುನಾವಣೆ ಗೆಲ್ಲಬೇಕು ಎನ್ನುವುದಕ್ಕಾಗಿ ಈ ತರಹ ಬೂಟಾಟಿಕೆ ಮಾಡುತ್ತಾರೆ. ನಾಲ್ಕು ಗಂಟೆ ಅಲ್ಲ ನಾಲ್ಕು ವರ್ಷ ಆದರೂ ಜಾತಿ ಗಣತಿ ಮಾಡಲು ಸಾಧ್ಯವಿಲ್ಲ – ಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ**

# ಪಿಎಂಎಫ್‌ಬಿವೈ ಅತ್ಯುತ್ತಮ ಅನುಷ್ಠಾನ: ರಾಷ್ಟ್ರೀಯ ಪ್ರಶಸ್ತಿಗೆ ಹಾವೇರಿ ಜಿಲ್ಲೆ ಭಾಜನ

**ಹಾವೇರಿ, ಏ.18:** ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆಯನ್ನು (ಪಿಎಂಎಫ್‌ಬಿವೈ) ಅತ್ಯುತ್ತಮ ರೀತಿಯಲ್ಲಿ ಅನುಷ್ಠಾನಗೊಳಿಸಿದ್ದಕ್ಕಾಗಿ ಹಾವೇರಿ ಜಿಲ್ಲೆಗೆ ರಾಷ್ಟ್ರೀಯ ಪ್ರಶಸ್ತಿ ಲಭ್ಯವಾಗಿದ್ದು, ಜಿಲ್ಲಾಧಿಕಾರಿ ಡಾ. ವಿಜಯ ಮಹಾಂತೇಶ ದಾನಮ್ಮನವರ ಅವರು ಶುಕ್ರವಾರ ಪ್ರಶಸ್ತಿ ಸ್ವೀಕರಿಸಿದ್ದರು.2023–24ನೇ ಸಾಲಿನ ಬೆಳೆ ಸಬ್ಸಿಡಿ ವಿಮಾ ಯೋಜನೆಯಾದ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯ ಅತ್ಯುತ್ತಮ ಅನುಷ್ಠಾನ ಹಾಗೂ ಪರಿಣಾಮಕಾರಿ ಆವಿಷ್ಕಾರ ಮತ್ತು ಉಪಕ್ರಮಗಳನ್ನು ಅಳವಡಿಸಿಕೊಂಡಿರುವುದನ್ನು ಗುರುತಿಸಿ ಹಾವೇರಿ ಮತ್ತು ಹೊಸಪೇಟೆ ಜಿಲ್ಲೆಗಳನ್ನು ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.ಪಿಎಂಎಫ್‌ಬಿವೈ ರೈತರನ್ನು ರಕ್ಷಿಸುವ ಗುರಿಯನ್ನು ಹೊಂದಿರುವ ಬೆಳೆ ಸಬ್ಸಿಡಿ ವಿಮಾ ಯೋಜನೆಯಾಗಿದೆ.



ಈ ಯೋಜನೆಯು 2016ರಲ್ಲಿ ಕರ್ನಾಟಕದಲ್ಲಿ ಜಾರಿಗೊಳಿಸಲಾಗಿದೆ. ಕೃಷಿ ಸಚಿವಾಲಯದ ಅಡಿಯಲ್ಲಿ ಕೃಷಿ, ಸಹಕಾರ ಮತ್ತು ರೈತರ ಕಲ್ಯಾಣ ಇಲಾಖೆಯು ವಿವಿಧ ವಿಮಾ ಕಂಪನಿಗಳ ಜೊತೆ ಯೋಜನೆ ಜಾರಿಗೊಳಿಸಲಾಗುತ್ತಿದೆ.ನವದೆಹಲಿಯಲ್ಲಿ ಶುಕ್ರವಾರ ಜರುಗಿದ ಸಮಾರಂಭದಲ್ಲಿ ಹಾವೇರಿ ಜಿಲ್ಲಾಧಿಕಾರಿ ಡಾ. ವಿಜಯ ಮಹಾಂತೇಶ್ ದಾನಮ್ಮನವರ ಹಾಗೂ ಕೃಷಿ ಇಲಾಖೆ ಜಂಟಿ ನಿರ್ದೇಶಕ ಮಲ್ಲಿಕಾರ್ಜುನ ಪ್ರಶಸ್ತಿ ಸ್ವೀಕರಿಸಿದರು. ಜಿಲ್ಲಾಧಿಕಾರಿ ವಿಜಯ ಮಹಾಂತೇಶ, 'ಜಿಲ್ಲೆಯ ಪ್ರತಿಯೊಬ್ಬ ಅಧಿಕಾರಿ ಹಾಗೂ ಸಿಬ್ಬಂದಿ ಕೆಲಸದ ಶ್ರಮದಿಂದ ಪ್ರಶಸ್ತಿ ಬಂದಿದೆ' ಎಂದರು.'ಕೃಷಿ ಇಲಾಖೆ, ತೋಟಗಾರಿಕೆ, ಅಂಕಿ–ಸಂಖ್ಯಾ ವಿಭಾಗ, ಆರ್‌ಡಿಪಿಆರ್ ಇಲಾಖೆ, ಸಂಸದ, ಶಾಸಕರು, ರೈತರ ಸಹಕಾರದಿಂದ ಯೋಜನೆ ಅನುಷ್ಠಾನ ಅತ್ಯುತ್ತಮವಾಗಿದೆ. ಜಿಲ್ಲಾಡಳಿತದ ಪರವಾಗಿ ಪ್ರಶಸ್ತಿ ಸ್ವೀಕರಿಸಿದ್ದೇವೆ' ಎಂದು ಹೇಳಿದರು.

# ರೋಹಿತ್ ವೇಮುಲ ಕಾಯ್ದೆ ಜಾರಿ ಸಿಎಂ ಸಿದ್ದರಾಮಯ್ಯಗೆ ರಾಹುಲ್ ಪತ್ರ

**ನವದೆಹಲಿ, ಏ.18:** ಶಿಕ್ಷಣ ವ್ಯವಸ್ಥೆಯಲ್ಲಿ ಜಾತಿ ಆಧಾರಿತ ತಾರತಮ್ಯವನ್ನು ತಡೆಯಲು ರಾಜ್ಯ ಸರಕಾರ ರೋಹಿತ್ ವೇಮುಲ ಕಾಯ್ದೆಯನ್ನು ಜಾರಿಗೊಳಿಸಬೇಕು ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಕರ್ನಾಟಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದಿದ್ದಾರೆ ಎಂದು ವರದಿಯಾಗಿದೆ. ಕರ್ನಾಟಕ ಸಿಎಂಗೆ ಬರೆದ ಪತ್ರದಲ್ಲಿ ಬಿ.ಆರ್.ಅಂಬೇಡ್ಕರ್ ಅವರು ತಮ್ಮ ಜೀವಿತಾವಧಿಯಲ್ಲಿ ಎದುರಿಸಿದ ತಾರತಮ್ಯದ ಬಗ್ಗೆ ಉಲ್ಲೇಖಿಸಿದ್ದಾರೆ ಎಂದು ಹೇಳಲಾಗಿದೆ.



ಅಂಬೇಡ್ಕರ್ ಅವರು ಎತ್ತಿನಗಾಡಿ ಪ್ರಯಾಣದ ಸಂದರ್ಭದಲ್ಲಿ ಅನುಭವಿಸಿದ ಘಟನೆಯೊಂದನ್ನು ಅವರು ಪತ್ರದಲ್ಲಿ ವಿವರಿಸಿದ್ದಾರೆ. ನಮ್ಮೊಂದಿಗೆ ಸಾಕಷ್ಟು ಆಹಾರವಿತ್ತು. ನಾವು ಹಸಿವಿನಿಂದ ಬಳಲುತ್ತಿದ್ದೆವು. ಆದರೂ, ನಾವು ಆಹಾರವಿಲ್ಲದೆ ಮಲಗಿದ್ದೇವೆ, ಮತ್ತು ನಾವು ಅಸ್ಪೃಶ್ಯರಾಗಿದ್ದರಿಂದ ನಮಗೆ ನೀರು ಸಿಗಲಿಲ್ಲ? ಎಂದು ಅಂಬೇಡ್ಕರ್ ಹೇಳಿರುವುದನ್ನು ಅವರು ಉಲ್ಲೇಖಿಸಿದ್ದಾರೆ. ಉದಾಹರಣೆಗೆ, ಶಾಲೆಯಲ್ಲಿ ನನ್ನ ಶ್ರೇಣಿಗೆ ಅನುಗುಣವಾಗಿ ನನ್ನ ಸಹಪಾಠಿಗಳ ಮಧ್ಯೆ ಕುಳಿತುಕೊಳ್ಳಲು ಸಾಧ್ಯವಿಲ್ಲ ಎಂದು ನನಗೆ ತಿಳಿದಿತ್ತು, ನಾನು ಒಂದು ಮೂಲೆಯಲ್ಲಿ ಕುಳಿತುಕೊಳ್ಳಬೇಕಿತ್ತು? ಎಂದು ಅಂಬೇಡ್ಕರ್ ಹೇಳಿದರು ಎಂಬ ವಿಚಾರವನ್ನು ಅವರು ಪತ್ರದಲ್ಲಿ ಉಲ್ಲೇಖಿಸಿದ್ದಾರೆ. ಅಂಬೇಡ್ಕರ್ ಎದುರಿಸಿದ್ದ ನಾಚಿಕೆಗೇಡಿನ ಸಂಗತಿ ಮತ್ತು ಭಾರತದಲ್ಲಿ ಯಾವುದೇ ಮಗು ಇದನ್ನು ಅನುಭವಿಸಬಾರದು ಎಂಬುದನ್ನು ಸಿದ್ದರಾಮಯ್ಯ ಒಪ್ಪಿಕೊಳ್ಳುತ್ತಾರೆ ಎಂದು ನಾನು ಭಾವಿಸುತ್ತೇನೆ. ಇಂದಿಗೂ ದಲಿತ, ಆದಿವಾಸಿ ಮತ್ತು ಒಬಿಸಿ ಸಮುದಾಯಗಳ ಲಕ್ಷಾಂತರ ವಿದ್ಯಾರ್ಥಿಗಳು ಇಂತಹ ಕ್ರೂರ ತಾರತಮ್ಯವನ್ನು ಎದುರಿಸಬೇಕಾಗಿರುವುದು ನಾಚಿಕೆಗೇಡಿನ ಸಂಗತಿ ಎಂದು ರಾಹುಲ್ ಗಾಂಧಿ ಹೇಳಿದರು.ರೋಹಿತ್ ವೇಮುಲ, ಪಾಯಲ್ ತದ್ವಿ ಮತ್ತು ದರ್ಶನ್ ಸೋಲಂಕಿಯಂತಹ ಧೀಮಂತ ಯುವಕರ ಹತ್ಯೆಯನ್ನು ಒಪ್ಪಲಾಗದು. ಇದಕ್ಕೆ ಕಡಿವಾಣ ಹಾಕುವ ಸಮಯ ಬಂದಿದೆ ಎಂದು ಹೇಳಿದ್ದಾರೆ.ಈ ಕುರಿತು ಎಕ್ಸ್‌ನಲ್ಲಿ ಪತ್ರವನ್ನು ಹಂಚಿಕೊಂಡ ರಾಹುಲ್ ಗಾಂಧಿ, ಇತ್ತೀಚೆಗೆ, ನಾನು ಸಂಸತ್ತಿನಲ್ಲಿ ದಲಿತ, ಆದಿವಾಸಿ ಮತ್ತು OBC ಸಮುದಾಯಗಳ ವಿದ್ಯಾರ್ಥಿಗಳು ಮತ್ತು ಶಿಕ್ಷಕರನ್ನು ಭೇಟಿ ಮಾಡಿದ್ದೇನೆ. ಸಂಭಾಷಣೆಯ ಸಮಯದಲ್ಲಿ, ಅವರು ಕಾಲೇಜುಗಳು ಮತ್ತು ವಿಶ್ವವಿದ್ಯಾನಿಲಯಗಳಲ್ಲಿ ಜಾತಿ ಆಧಾರಿತ ತಾರತಮ್ಯವನ್ನು ಹೇಗೆ ಎದುರಿಸುತ್ತಿದ್ದಾರೆ ಎಂದು ವಿವರಿಸಿದರು. ವಂಚಿತರು ಸಬಲರಾಗಲು ಮತ್ತು ಜಾತಿ ವ್ಯವಸ್ಥೆಯನ್ನು ಮುರಿಯಲು ಶಿಕ್ಷಣವೊಂದೇ ಮಾರ್ಗ ಎಂದು ಅಂಬೇಡ್ಕರ್ ಅವರು ತೋರಿಸಿಕೊಟ್ಟಿದ್ದಾರೆ. ಆದರೆ ದಶಕಗಳ ನಂತರವೂ ಲಕ್ಷಾಂತರ ವಿದ್ಯಾರ್ಥಿಗಳು ನಮ್ಮ ಶಿಕ್ಷಣ ವ್ಯವಸ್ಥೆಯಲ್ಲಿ ಜಾತಿ ತಾರತಮ್ಯವನ್ನು ಎದುರಿಸುತ್ತಿರುವುದು ಅತ್ಯಂತ ವಿಷಾದನೀಯ ಎಂದು ಹೇಳಿದರು.

## ರಾಹುಲ್‌ಗಾಂಧಿ ಮನವಿಗೆ ಸಿಎಂ ಸಿದ್ದರಾಮಯ್ಯ ಗ್ರೀನ್ ಸಿಗ್ನಲ್

ಇನ್ನೂ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಕರ್ನಾಟಕದಲ್ಲಿ ರೋಹಿತ್ ವೇಮುಲ ಕಾಯ್ದೆಯನ್ನು ಜಾರಿಗೆ ತರಲು ಮನವಿ ಮಾಡಿದ ನಂತರ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರತಿಕ್ರಿಯಿಸಿದ್ದು, ರಾಜ್ಯ ಸರ್ಕಾರವು ರಾಜ್ಯದಲ್ಲಿ ಈ ಕಾಯ್ದೆಯನ್ನು ಜಾರಿಗೆ ತರುವ ನಿರ್ಧಾರದಲ್ಲಿ ದೃಢವಾಗಿ ನಿಂತಿದೆ ಮತ್ತು ಆದಷ್ಟು ಬೇಗ ಕಾನೂನು ತರಲಿದೆ ಎಂದು ಹೇಳಿದ್ದಾರೆ. ರಾಹುಲ್ ಗಾಂಧಿಯವರ ಪತ್ರ ಮತ್ತು ಸಾಮಾಜಿಕ ನ್ಯಾಯಕ್ಕೆ ಅಚಲವಾದ ಬದ್ಧತೆಗಾಗಿ ನಾನು ಧನ್ಯವಾದ ಹೇಳುತ್ತೇನೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ.

ನಮ್ಮ ಸರ್ಕಾರವು ಕರ್ನಾಟಕದಲ್ಲಿ ರೋಹಿತ್ ಗ್ರಮುಲಾ ಕಾಯ್ದೆಯನ್ನು ಜಾರಿಗೆ ತರುವ ನಿರ್ಧಾರದಲ್ಲಿ ದೃಢವಾಗಿ ನಿಂತಿದೆ. ಯಾವುದೇ ವಿದ್ಯಾರ್ಥಿ ಜಾತಿ, ವರ್ಗ ಅಥವಾ ಧರ್ಮದ ಆಧಾರದ ಮೇಲೆ ತಾರತಮ್ಯವನ್ನು ಎದುರಿಸದಂತೆ ನೋಡಿಕೊಳ್ಳಲು ಈ ಶಾಸನವನ್ನು ಆದಷ್ಟು ಬೇಗ ತರುತ್ತೇವೆ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದ್ದಾರೆ.

# ರಾಷ್ಟ್ರಪತಿಗೆ ನಿರ್ದೇಶನ ಸಲ್ಲ: ಸುಪ್ರೀಂ ವಿರುದ್ಧ ಧನಕರ್ ವಾಗ್ದಾಳಿ



**ನವದೆಹಲಿ, ಏ.18:** ರಾಜ್ಯಪಾಲರುಗಳು ಪರಿಗಣನೆಗಾಗಿ ಕಳುಹಿಸುವ ಮಸೂದೆಗಳನ್ನು ನಿರ್ದಿಷ್ಟ ಸಮಯದೊಳಗೆ ಕಾರ್ಯನಿರ್ವಹಿಸುವಂತೆ ರಾಷ್ಟ್ರಪತಿಗಳಿಗೆ ನಿರ್ದೇಶಿಸುವ ಸುಪ್ರೀಂಕೋರ್ಟ್ ಆದೇಶವನ್ನು ಉಪಾಧ್ಯಕ್ಷ ಜಗದೀಪ್ ಧಂಖರ್ ತೀವ್ರವಾಗಿ ಟೀಕಿಸಿದ್ದಾರೆ. ಇದನ್ನು ಕಳವಳಕಾರಿ ಬೆಳವಣಿಗೆ ಎಂದು ಕರೆದ ಅವರು, ಶಾಸಕರು, ಕಾರ್ಯಾಂಗಕ್ಕೆ ನ್ಯಾಯಾಧೀಶರು ಸೂಪರ್ ಪಾರ್ಲಿಮೆಂಟ್ ಆಗಿ ಕಾರ್ಯನಿರ್ವಹಿಸುವ ಪ್ರಜಾಪ್ರಭುತ್ವವಾಗಿ ಭಾರತ ಎಂದಿಗೂ ಆಗಬಾರದು ಎಂದು ಹೇಳಿದ್ದಾರೆ. ರಾಷ್ಟ್ರಪತಿಗೆ ನಿರ್ದೇಶನ

ಇತ್ತೀಚಿನ ತೀರ್ಪಿನ ಮೂಲಕ ರಾಷ್ಟ್ರಪತಿಗಳಿಗೆ ನಿರ್ದೇಶನ ನೀಡಲಾಗುತ್ತಿದೆ. ನಾವು ಎಲ್ಲಿಗೆ ಹೋಗುತ್ತಿದ್ದೇವೆ ದೇಶದಲ್ಲಿ ಏನಾಗುತ್ತಿದೆ ಎಂದು ಅವರು ರಾಜ್ಯಸಭಾ ಇಂಟರ್ನ್‌ಗಳ ಗುಂಪನ್ನು ಉದ್ದೇಶಿಸಿ ಕೇಳಿದ್ದಾರೆ. ಕಳೆದ ವಾರ, ಸಂವಿಧಾನದ 201 ನೇ ವಿಧಿಯ ಅಡಿಯಲ್ಲಿ ರಾಜ್ಯಪಾಲರು ಮಸೂದೆಯನ್ನು ರಾಷ್ಟ್ರಪತಿಗಳಿಗೆ ಕಾಯ್ದಿರಿಸಿದಾಗ, ಮೂರು ತಿಂಗಳೊಳಗೆ ನಿರ್ಧಾರ ತೆಗೆದುಕೊಳ್ಳಬೇಕು ಎಂದು ಸುಪ್ರೀಂ ಕೋರ್ಟ್ ತೀರ್ಪು ನೀಡಿತ್ತು. ತಮಿಳುನಾಡು ರಾಜ್ಯಪಾಲರ ದೀರ್ಘಕಾಲದ ನಿಷ್ಕ್ರಿಯತೆ ಮತ್ತು ರಾಜ್ಯದ ಮಸೂದೆಗಳಿಗೆ ಒಪ್ಪಿಗೆಯನ್ನು ತಡೆಹಿಡಿಯುವುದನ್ನು ಟೀಕಿಸಿದ ತೀರ್ಪಿನ ಭಾಗವಾಗಿ ಈ ಆದೇಶ ನೀಡಲಾಗಿತ್ತು. ರಾಷ್ಟ್ರಪತಿಗಳಿಗೆ ಪಾಕೆಟ್ ವೀಟೋ ಇಲ್ಲ ಮತ್ತು ಸಕಾಲಿಕವಾಗಿ ಒಪ್ಪಿಗೆಯನ್ನು ನೀಡಬೇಕು ಅಥವಾ ನಿರಾಕರಿಸಬೇಕು ಎಂದು ನ್ಯಾಯಾಲಯ ಈ ತೀರ್ಪಿನಲ್ಲಿ ಒತ್ತಿ ಹೇಳಿತ್ತು.

ಈ ಬೆಳವಣಿಗೆಯನ್ನು ನ್ಯಾಯಾಂಗದ ಅತಿಕ್ರಮಣ ಎಂದು ಬಣ್ಣಿಸಿದ ಅವರು, ಅದರ ವಿರುದ್ಧ ಎಚ್ಚರಿಸಿದ್ದಾರೆ. ನಮ್ಮಲ್ಲಿ ಶಾಸನ ರಚಿಸುವ, ಕಾರ್ಯನಿರ್ವಾಹಕ ಕಾರ್ಯಗಳನ್ನು ನಿರ್ವಹಿಸುವ, ಸೂಪರ್ ಪಾರ್ಲಿಮೆಂಟ್ ಆಗಿ ಕಾರ್ಯನಿರ್ವಹಿಸುವ ನ್ಯಾಯಾಧೀಶರು ಇದ್ದಾರೆ. ನೆಲದ ಕಾನೂನು ಅವರಿಗೆ ಅನ್ವಯಿಸದ ಕಾರಣ ಅವರಿಗೆ ಯಾವುದೇ ಹೊಣೆಗಾರಿಕೆ ಇರುವುದಿಲ್ಲ ಎಂದು ಅವರು ಹೇಳಿದ್ದಾರೆ.

ನೀವು ಭಾರತದ ರಾಷ್ಟ್ರಪತಿಗೆ ನಿರ್ದೇಶಿಸುವ ಸ್ಥಿತಿಗೆ ತಲುಪಲು ಸಾಧ್ಯವಿಲ್ಲ. ಇದನ್ನು ಯಾವ ಆಧಾರದ ಮೇಲೆ ಮಾಡಲಾಗುತ್ತದೆ ಎಂದು ಅವರು ಕೇಳಿದ್ದಾರೆ. ಸಾಂವಿಧಾನಿಕ ನಿಬಂಧನೆಗಳನ್ನು ಉಲ್ಲೇಖಿಸಿ, ಅಂತಹ ವಿಷಯಗಳಲ್ಲಿ ನ್ಯಾಯಾಂಗವು ಹೊಂದಿರುವ ಏಕೈಕ ಅಧಿಕಾರವೆಂದರೆ 145(3) ನೇ ವಿಧಿಯ ಅಡಿಯಲ್ಲಿ ಸಂವಿಧಾನವನ್ನು ವ್ಯಾಖ್ಯಾನಿಸುವುದು ಮತ್ತು ಅದನ್ನು ಐದು ಅಥವಾ ಹೆಚ್ಚಿನ ನ್ಯಾಯಾಧೀಶರ ಪೀಠದಿಂದ ಮಾಡಬೇಕು ಎಂದು ಅವರು ಹೇಳಿದ್ದಾರೆ.

ರಾಜ್ಯಪಾಲರು ಮಸೂದೆಗಳನ್ನು ಅಂಗೀಕರಿಸದೆ ವಿಳಂಬ ಮಾಡುತ್ತಿರುವುದಕ್ಕೆ ತಮಿಳುನಾಡು ಸರ್ಕಾರ ಸಲ್ಲಿಸಿದ ಅರ್ಜಿಗಳ ಬಗ್ಗೆ ಪರಿಗಣಿಸುವಾಗ ಸುಪ್ರೀಂ ಕೋರ್ಟ್, ಕಾನೂನಿನಲ್ಲಿ ಯಾವುದೇ ನಿರ್ದಿಷ್ಟ ಸಮಯವನ್ನು ಉಲ್ಲೇಖಿಸದಿದ್ದರೂ ಸಹ, ಸಾಂವಿಧಾನಿಕ ಅಧಿಕಾರಿಗಳು ಸಮಂಜಸವಾದ ಸಮಯದೊಳಗೆ ಕಾರ್ಯನಿರ್ವಹಿಸಬೇಕು ಎಂದು ಹೇಳಿದೆ. ಕಾನೂನಿನ ಅಡಿಯಲ್ಲಿ ಯಾವುದೇ ಅಧಿಕಾರವನ್ನು ಚಲಾಯಿಸಲು ಯಾವುದೇ ಸಮಯದ ಮಿತಿಯನ್ನು ನಿಗದಿಪಡಿಸದಿದ್ದರೂ ಸಹ, ಅದನ್ನು ಸಮಂಜಸವಾದ ಸಮಯದೊಳಗೆ ಚಲಾಯಿಸಬೇಕು ಎಂದು ಕಾನೂನಿನ ನಿಲುವಾವಾಗಿದೆ ಎಂದು ನ್ಯಾಯಾಲಯ ಹೇಳಿತ್ತು.

ನ್ಯಾಯಮೂರ್ತಿಗಳಾದ ಜೆ.ಬಿ. ಪಾರ್ದಿವಾಲಾ ಮತ್ತು ಆರ್. ಮಹಾದೇವನ್ ಅವರ ಪೀಠವು, ಅಂತಹ ಮಸೂದೆಗಳಿಗೆ ಪ್ರತಿಕ್ರಿಯಿಸುವಲ್ಲಿ ರಾಷ್ಟ್ರಪತಿ ವಿಳಂಬ ಮಾಡಿದರೆ, ನ್ಯಾಯಾಂಗ ಅದನ್ನು ಪರಿಶೀಲನೆ ನಡೆಸಲು ಮುಕ್ತವಾಗಿದೆ ಎಂದು ಹೇಳಿದೆ.

ಮೂರು ತಿಂಗಳೊಳಗೆ ಕ್ರಮ ಕೈಗೊಳ್ಳದಿದ್ದರೆ, ಮಾನ್ಯ ಕಾರಣಗಳನ್ನು ದಾಖಲಿಸಬೇಕು ಮತ್ತು ಸಂಬಂಧಪಟ್ಟ ರಾಜ್ಯಕ್ಕೆ ತಿಳಿಸಬೇಕು ಎಂದು ನ್ಯಾಯಾಲಯ ಹೇಳಿದೆ. ಮಸೂದೆಯ ಸಾಂವಿಧಾನಿಕ ಸಿಂಧುತ್ವದ ಪ್ರಶ್ನೆಗಳು ಉದ್ಭವಿಸಿದಾಗ, ಕಾರ್ಯಾಂಗವು ನಿರ್ಧಾರ ತೆಗೆದುಕೊಳ್ಳಲು ಮಧ್ಯಪ್ರವೇಶಿಸಬಾರದು ಎಂದು ತೀರ್ಪು ಸ್ಪಷ್ಟಪಡಿಸಿದೆ. ಸಾಂವಿಧಾನಿಕ ನ್ಯಾಯಾಲಯಗಳು ಮಾತ್ರ ಅಧ್ಯಯನ ಮಾಡುವ ಮತ್ತು ಶಿಫಾರಸುಗಳನ್ನು ನೀಡುವ ಅಧಿಕಾರವನ್ನು ಹೊಂದಿವೆ ಎಂದು ನ್ಯಾಯಾಲಯ ಹೇಳಿತ್ತು.

# ಬಿಹಾರ ಚುನಾವಣೆ: ತೇಜಸ್ವಿಗೆ ಇಂಡಿಯಾ ನೇತೃತ್ವ



ಪಾಟ್ನಾ, ಏ.18: ಈ ವರ್ಷದ ಕೊನೆಯಲ್ಲಿ ನಡೆಯಲಿರುವ ವಿಧಾನಸಭಾ ಚುನಾವಣೆಗೆ ತನ್ನ ಕಾರ್ಯತಂತ್ರವನ್ನು ಚರ್ಚಿಸಲು ಪಾಟ್ನಾದಲ್ಲಿ ವಿರೋಧ ಪಕ್ಷದ ಮಹಾಘಟಬಂಧನ್ ಮೂರು ಗಂಟೆಗಳಿಗೂ ಹೆಚ್ಚು ಕಾಲ ಸಭೆ ಸೇರಿತು. ಮೈತ್ರಿಕೂಟದ ಎರಡು ದೊಡ್ಡ ಘಟಕಗಳಾದ ರಾಷ್ಟ್ರೀಯ ಜನತಾದಳ (ಆರ್‌ಜೆಡಿ) ಮತ್ತು ಕಾಂಗ್ರೆಸ್ ನಾಯಕರೊಂದಿಗೆ ಸಭೆಯ ಫಲಿತಾಂಶವನ್ನು ಗೆಲುವು-ಗೆಲುವಿನ ಪರಿಸ್ಥಿತಿ ಎಂದು ಬಣ್ಣಿಸಿದರು. ಬಿಹಾರದಲ್ಲಿ ಮಹಾಘಟ ಬಂಧನ್ ಅಥವಾ ಮಹಾಮೈತ್ರಿಕೂಟ ಎಂದು ಕರೆಯಲ್ಪಡುವ ಈ ಮೈತ್ರಿಕೂಟವು ಚುನಾವಣಾ ಯುದ್ಧಕ್ಕೆ ಸಿದ್ಧವಾಗುತ್ತಿದ್ದಂತೆ ಮೊದಲ ಹೆಜ್ಜೆಗಳನ್ನು ಇಟ್ಟಿದೆ.

ಆರ್‌ಜೆಡಿ, ಕಾಂಗ್ರೆಸ್, ಎಡಪಕ್ಷಗಳು ಮತ್ತು ಮುಖೇಶ್ ಸಹಾನಿಯವರ ವಿಕಾಸಶೀಲ ಇನ್ಸಾನ್ ಪಕ್ಷ ಸೇರಿದಂತೆ ಮೈತ್ರಿಕೂಟದ ನಾಯಕರು ಈ ವರ್ಷದ ಕೊನೆಯಲ್ಲಿ ನಡೆಯಲಿರುವ ವಿಧಾನಸಭಾ ಚುನಾವಣೆಗೆ ಸಾಮಾನ್ಯ ಕನಿಷ್ಠ ಕಾರ್ಯಕ್ರಮವನ್ನು ರೂಪಿಸಲು ವಿಧಾನಸಭೆಯಲ್ಲಿ ವಿರೋಧ ಪಕ್ಷದ ನಾಯಕ ತೇಜಸ್ವಿ ಯಾದವ್ ನೇತೃತ್ವದಲ್ಲಿ ಸಮನ್ವಯ ಸಮಿತಿಯನ್ನು ಸ್ಥಾಪಿಸಲು ಒಪ್ಪಿಕೊಂಡರು. ಆದಾಗ್ಯೂ, ಮೈತ್ರಿಕೂಟವನ್ನು ಯಾರು ಮುನ್ನಡೆಸುತ್ತಾರೆ ಮತ್ತು ಸೀಟು ಹಂಚಿಕೆಯ ಕುರಿತು ಯಾವುದೇ ಚರ್ಚೆಗಳು ನಡೆದಿಲ್ಲ ಎಂದು ಮೂಲಗಳು ತಿಳಿಸಿವೆ.

ಕಾಂಗ್ರೆಸ್ ನಾಯಕತ್ವ ಮತ್ತು ಸೀಟು ಹಂಚಿಕೆ ಕುರಿತು ಮಾತುಕತೆಗಳನ್ನು ವಿಳಂಬ ಮಾಡುವ ಮೂಲಕ ಯಶಸ್ವಿಯಾದರೂ, ಆರ್‌ಜೆಡಿ ತೇಜಸ್ವಿ ನಾಯಕತ್ವದಲ್ಲಿ ಸಮನ್ವಯ ಸಮಿತಿಯನ್ನು ಸ್ಥಾಪಿಸುವಲ್ಲಿ ಯಶಸ್ವಿಯಾಗಿದೆ ಎಂದು ಆರ್‌ಜೆಡಿ ನಾಯಕರೊಬ್ಬರು ಸಭೆಯ ಫಲಿತಾಂಶವನ್ನು ಸಂಕ್ಷಿಪ್ತವಾಗಿ ಹೇಳಿದರು.

ಮಂಗಳವಾರ ದೆಹಲಿಯಲ್ಲಿ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮತ್ತು ಲೋಕಸಭಾ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರೊಂದಿಗಿನ ಯಾದವ್ ಅವರ ಸಭೆಯು ಪಾಟ್ನಾ ಸಭೆಯ ಕಾರ್ಯಸೂಚಿಯ ಕುರಿತು ಸ್ಪಷ್ಟನೆ ನೀಡಿದೆ ಎಂದು ಹೆಸರು ಬಹಿರಂಗಪಡಿಸಲು ಬಯಸದ ಕಾಂಗ್ರೆಸ್ ನಾಯಕರೊಬ್ಬರು ಹೇಳಿದ್ದಾರೆ.

ಕಾಂಗ್ರೆಸ್ ನಾಯಕ ಕನ್ಹಯ್ಯ ಕುಮಾರ್ ಅವರ ಪಲಯನ್ ರೋಕೊ, ನೌಕ್ರಿ ದೋ ಯಾತ್ರೆಯ ಬಗ್ಗೆ ಆರ್‌ಜೆಡಿಯ ಭಿನ್ನಾಭಿಪ್ರಾಯಗಳ ವರದಿಗಳ ನಡುವೆ ಈ ಸಭೆ ನಡೆಯಿತು. ಕಾಂಗ್ರೆಸ್ ರಾಜ್ಯ ಅಧ್ಯಕ್ಷ ರಾಜೇಶ್ ಕುಮಾರ್, ಆರ್‌ಜೆಡಿ ರಾಜ್ಯಸಭಾ ಸದಸ್ಯ ಸಂಜಯ್ ಯಾದವ್, ಕಮ್ಯುನಿಸ್ಟ್ ಪಾರ್ಟಿ ಆಫ್ ಇಂಡಿಯಾ ನಾಯಕ ಅಜಯ್ ಕುಮಾರ್ ಮತ್ತು ಸಿಪಿಐ ರಾಜ್ಯ ಕಾರ್ಯದರ್ಶಿ ಕುನಾಲ್ ಕೂಡ ಉಪಸ್ಥಿತರಿದ್ದರು.

# ದಾಲ್ಮಿಯಾ ಸಿಮೆಂಟ್ಸ್: 800 ಕೋಟಿ ರೂ. ಆಸ್ತಿ ಜಪ್ತಿ

**ಅಮರಾವತಿ,ಏ.18:** ಅಕ್ರಮ ಹಣ ವರ್ಗಾವಣೆ ತಡೆ ಕಾಯ್ದೆ ಅಡಿಯಲ್ಲಿ ಜಾರಿ ನಿರ್ದೇಶನಾಲಯ ಆಂಧ್ರಪ್ರದೇಶದ ಮಾಜಿ ಮುಖ್ಯಮಂತ್ರಿ ವೈ.ಎಸ್. ಜಗನ್‌ಮೋಹನ್ ರೆಡ್ಡಿ ಮತ್ತು ದಾಲ್ಮಿಯಾ ಸಿಮೆಂಟ್ಸ್‌ಗೆ ಸಂಬಂಧಿಸಿದ 803 ಕೋಟಿ ರೂಪಾಯಿ ಮೌಲ್ಯದ ಆಸ್ತಿಗಳನ್ನು ಜಪ್ತಿ ಮಾಡಿದೆ.

ವೈ.ಎಸ್. ಜಗನ್‌ಮೋಹನ್ ರೆಡ್ಡಿ ಅವರ 27.5 ಕೋಟಿ ರೂ. ಮೌಲ್ಯದ ಷೇರುಗಳು ಮತ್ತು ದಾಲ್ಮಿಯಾ ಸಿಮೆಂಟ್ಸ್‌ನ 793.3 ಕೋಟಿ ರೂ. ಮೌಲ್ಯದ ಆಸ್ತಿ ಮತ್ತು ಭೂಮಿಯನ್ನು ತನಿಖಾ ಸಂಸ್ಥೆ ಮುಟ್ಟುಗೋಲು ಹಾಕಿಕೊಂಡಿದೆ. ಕ್ವಿಡ್‌ಪ್ರೊಕ್ವೋ ಹೂಡಿಕೆಗಳಿಗೆ ಸಂಬಂಧಿಸಿದ ಹಣ ವರ್ಗಾವಣೆ ಪ್ರಕರಣದಲ್ಲಿ ಈ ಕ್ರಮ ಕೈಗೊಳ್ಳಲಾಗಿದೆ.

ಈ ಪ್ರಕರಣವು 2011 ರಲ್ಲಿ ಸಿಬಿಐ ದಾಖಲಿಸಿದ ಎಫ್‌ಐಆರ್‌ಗೆ ಸಂಬಂಧಿಸಿದೆ, ಇದರಲ್ಲಿ ಡಿಸಿಬಿಎಲ್ ಭಾರತಿ ಸಿಮೆಂಟ್ ಕಾರ್ಪೊರೇಷನ್‌ನಲ್ಲಿ ಹೂಡಿಕೆ ಮಾಡಿದೆ. ಇಡಿ ತನಿಖೆಯ ಪ್ರಕಾರ, ಜಗನ್ ರೆಡ್ಡಿ ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ ದಾಲ್ಮಿಯಾ ಸಿಮೆಂಟ್ಸ್‌ಗೆ ರಾಜ್ಯ ಸರ್ಕಾರದಿಂದ ಅನುಕೂಲಕರ ಒಪ್ಪಂದಗಳನ್ನು ನೀಡಲಾಗಿತ್ತು.

ಇದಕ್ಕೆ ಪ್ರತಿಯಾಗಿ, ಕಂಪನಿಯಿಂದ ಗಣನೀಯ ಹಣವನ್ನು ವೈಎಸ್‌ಆರ್ ಕಾಂಗ್ರೆಸ್ ಪಕ್ಷಕ್ಕೆ ದೇಣಿಗೆಯಾಗಿ ಅಥವಾ ಇತರ ರೂಪದಲ್ಲಿ ವರ್ಗಾಯಿಸಲಾಗಿದೆ ಎಂದು ಆರೋಪಿಸಲಾಗಿದೆ.

ಈ ಹಣವನ್ನು ಆಂಧ್ರಪ್ರದೇಶ, ತಮಿಳುನಾಡು, ಮತ್ತು ದೆಹಲಿಯಲ್ಲಿ ವಿವಿಧ ಆಸ್ತಿಗಳಾದ ಜಮೀನು, ಕಟ್ಟಡಗಳು, ಮತ್ತು ಷೇರುಗಳ ರೂಪದಲ್ಲಿ ಹೂಡಿಕೆ ಮಾಡಲಾಗಿತ್ತು. ಜಪ್ತಿಯಾದ ದಾಲ್ಮಿಯಾ ಸಿಮೆಂಟ್ಸ್‌ನ ಕೆಲವು ಘಟಕಗಳು ಮತ್ತು ಆಸ್ತಿಗಳಯ ಜಗನ್ ರೆಡ್ಡಿಯ ಸಹಚರರ ಹೆಸರಿನಲ್ಲಿವೆ.

ಈ ಪ್ರಕರಣವು 2019ರಿಂದ ತನಿಖೆಯಲ್ಲಿದ್ದು, ಕೇಂದ್ರೀಯ ತನಿಖಾ ಸಂಸ್ಥೆಯಾದ ಸಿಬಿಐ ಕೂಡ ಇದೇ ಆರೋಪಗಳ ಕುರಿತು ಪ್ರತ್ಯೇಕ ತನಿಖೆ ನಡೆಸುತ್ತಿದೆ. ಇಡಿಯ ಈ ಕ್ರಮವು ರಾಜಕೀಯವಾಗಿ ಸೂಕ್ಷ್ಮವಾಗಿದ್ದು, ಆಂಧ್ರಪ್ರದೇಶದಲ್ಲಿ ತೀವ್ರ ಚರ್ಚೆಗೆ ಕಾರಣವಾಗಿದೆ. ವೈಎಸ್‌ಆರ್ ಕಾಂಗ್ರೆಸ್ ಈ ಆರೋಪಗಳನ್ನು ರಾಜಕೀಯ ಪ್ರೇರಿತ ಎಂದು ಕರೆದು ಖಂಡಿಸಿದೆ, ಆದರೆ ಇಡಿ ತನ್ನ ಕಾರ್ಯಾಚರಣೆಯನ್ನು ಕಾನೂನಿನ ಚೌಕಟ್ಟಿನಲ್ಲಿ ನಡೆಸುತ್ತಿರುವುದಾಗಿ ಸ್ಪಷ್ಟಪಡಿಸಿದೆ.




# ಪತ್ನಿ ಎದುರೇ ಪತಿಯ ಶಿರಚ್ಛೇದ ದೇವಸ್ಥಾನದ ಬಳಿ ರುಂಡ ಪತ್ತೆ

**ಚೆನ್ನೈ, ಏ.18:** ಪತ್ನಿ ಎದುರೇ ಪತಿಯ ಶಿರಚ್ಛೇದ ಮಾಡಿರುವ ಘಟನೆ ತಮಿಳುನಾಡಿನ ತೆಂಕಸಿ ಬಳಿ ನಡೆದಿದೆ. ಮನೆಯಿಂದ 8 ಕಿ.ಮೀ ದೂರದಲ್ಲಿರುವ ದೇವಸ್ಥಾನದ ಬಳಿ ರುಂಡ ಪತ್ತೆಯಾಗಿದೆ. ತೆಂಕಸಿಯಲ್ಲಿ ಭೀಕರ ಹಿಂಸಾಚಾರ ನಡೆದಿತ್ತು. ಅಪರಿಚಿತ ಗುಂಪೊಂದು ಹೆಂಡತಿಯ ಎದುರೇ ಶಿರಚ್ಛೇದ ಮಾಡಿ, ತಲೆ ತೆಗೆದುಕೊಂಡು ಪರಾರಿಯಾಗಿದ್ದರು. ಅಪರಾಧ ಸ್ಥಳದಿಂದ ಸುಮಾರು 8 ಕಿ.ಮೀ ದೂರದಲ್ಲಿ ದೇವಸ್ಥಾನದ ಬಳಿ ರುಂಡ ಪತ್ತೆಯಾಗಿದೆ. ಮೃತ ವ್ಯಕ್ತಿಯನ್ನು 35 ವರ್ಷದ ಕುಥಾಲಿಂಗಂ ಎಂದು ಗುರುತಿಸಲಾಗಿದೆ. ಅವರು ತಮ್ಮ ಪತ್ನಿಯೊಂದಿಗೆ ಕೀಳಪುಲಿಯೂರಿನಲ್ಲಿ ವಾಸಿಸುತ್ತಿದ್ದರು. ಪೊಲೀಸ್ ವರದಿಗಳ ಪ್ರಕಾರ ದಂಪತಿ ಏಪ್ರಿಲ್ 16ರಂದು ಸಂಜೆ ತಮ್ಮ ಹಳ್ಳಿಯಲ್ಲಿರುವ ಪಿಡಿಎಸ್ ಅಂಗಡಿಗೆ ಹೋಗಿದ್ದಾಗ ನಾಲ್ವರ ಗುಂಪೊಂದು ಅವರ ಮೇಲೆ ಹೊಂಚು ದಾಳಿ ನಡೆಸಿತ್ತು.

ಕುಥಾಲಿಂಗಂ ಅವರ ಮೇಲೆ ದಾಳಿ ನಡೆಸಿದಾಗ ಪತ್ನಿ ಅದನ್ನು ತಡೆಯಲು ಸಾಕಷ್ಟು ಪ್ರಯತ್ನ ಮಾಡಿದ್ದರು, ಆದರೆ ಅವರು ಆಕೆಯನ್ನು ತಳ್ಳಿ ಕುತ್ತಿಗೆಯನ್ನೇ ಕಡಿದಿದ್ದಾರೆ. ಆ ಗುಂಪು ಅವರ ಶಿರಚ್ಛೇದನ ಮಾಡಿ ತಲೆಯೊಂದಿಗೆ ಪರಾರಿಯಾಗಿತ್ತು. ಗಾಬರಿಗೊಂಡ ಮಹಿಳೆ ತಕ್ಷಣ ತೆಂಕಸಿ ಪೊಲೀಸರಿಗೆ ಮಾಹಿತಿ ನೀಡಿದ್ದು, ಪೊಲೀಸರು ಅಪರಿಚಿತ ದಾಳಿಕೋರರ ವಿರುದ್ಧ ಕೊಲೆ ಪ್ರಕರಣ ದಾಖಲಿಸಿದ್ದಾರೆ. ಸ್ವಲ್ಪ ಸಮಯದ ನಂತರ, ಕಾಸಿಮಜೋರ್ಪುರಂನ ದೇವಾಲಯವೊಂದರ ಬಳಿ ಕತ್ತರಿಸಿದ ತಲೆ ಪತ್ತೆಯಾಗಿದೆ ಎಂದು ಅಧಿಕಾರಿಗಳಿಗೆ ಮಾಹಿತಿ ನೀಡಲಾಯಿತು.

ಪೊಲೀಸರು ತಕ್ಷಣ ಸ್ಥಳಕ್ಕೆ ತಲುಪಿ ಮೃತದೇಹ ಮತ್ತು ತಲೆಯನ್ನು ಮರಣೋತ್ತರ ಪರೀಕ್ಷೆಗಾಗಿ ತೆಂಕಾಸಿ ಸರ್ಕಾರಿ ಆಸ್ಪತ್ರೆಗೆ ಸಾಗಿಸಿದರು. ಇದು ಸೇಡಿಗಾಗಿ ಮಾಡಿದ ಕೊಲೆಯಾಗಿರಬಹುದು, 2023ರಲ್ಲಿ ದೇವಸ್ಥಾನದ ಬಳಿ ಒಂದು ಕೊಲೆ ನಡೆದಿತ್ತು, ಈ ವ್ಯಕ್ತಿ ಆ ಕೊಲೆಯಲ್ಲಿ ಪ್ರಮುಖ ಆರೋಪಿ ಎಂದು ಪೊಲೀಸರು ಹೇಳಿದ್ದಾರೆ. ನಿಖರ ಕಾರಣವನ್ನು ತಿಳಿಯಬೇಕಾದರೆ ಆರೋಪಿಗಳು ಸಿಕ್ಕಿಬೀಳಬೇಕಿದೆ.

# ಡಿಜೆ ಲೇಸರ್‌ಲೈಟ್‌ನಿಂದ ವಿಮಾನಕ್ಕೆ ಆಪತ್ತು





**ಪಟಣ, ಏ.18:** ಡಿಜೆಯ ಲೇಸರ್ ಲೈಟ್ ವಿಮಾನಕ್ಕೆ ಆಪತ್ತು ತಂದಿರುವ ಘಟನೆ ಬಿಹಾರದಲ್ಲಿ ನಡೆದಿದೆ. ವಿಮಾನ ಪಾಟ್ನಾ ವಿಮಾನ ನಿಲ್ದಾಣದಲ್ಲಿ ಇಳಿಯುವ ಹಂತದಲ್ಲಿದ್ದಾಗ ಈ ಘಟನೆ ಸಂಭವಿಸಿದೆ. ಪೈಲಟ್ ಬಹಳ ತಾಳ್ಮೆ ಮತ್ತು ತಿಳಿವಳಿಕೆಯಿಂದ ವಿಮಾನವನ್ನು ಸುರಕ್ಷಿತವಾಗಿ ಇಳಿಸಿದ್ದಾರೆ.

ಈ ಘಟನೆ ಗುರುವಾರ ಸಂಜೆ ನಡೆದಿದೆ ಎನ್ನುವ ಮಾಹಿತಿ ಲಭ್ಯವಾಗಿದೆ. ಇಂಡಿಗೋ ವಿಮಾನವು ಪುಣೆಯಿಂದ ಪಾಟ್ನಾಗೆ ಹೊರಟಿತ್ತು. ಪಾಟ್ನಾ ವಿಮಾನ ನಿಲ್ದಾಣದಲ್ಲಿ ಇಳಿಯಬೇಕಾಗಿತ್ತು. ವಿಮಾನ ಕೆಳಗೆ ಬರಲು ಪ್ರಾರಂಭಿಸುತ್ತಿದ್ದಂತೆ, ನಿಲ್ದಾಣದ ಸ್ವಲ್ಪ ದೂರದಲ್ಲಿ ಮದುವೆ ಕಾರ್ಯಕ್ರಮವೊಂದರಲ್ಲಿ ಹಾಕಿದ್ದ ಡಿಜೆ ಲೇಸರ್ ಲೈಟ್ಗಳಿಂದಾಗಿ ವಿಮಾನ ಸಮತೋಲನ ಕಳೆದುಕೊಳ್ಳುವ ಸಾಧ್ಯತೆಹೆಚ್ಚಿತ್ತು. ಬಳಿಕ ಪೈಲಟ್ ವಿಮಾನವನ್ನು ಅಹಮದಾಬಾದ್‌ಗೆ ಕೊಂಡೊಯ್ದಿದ್ದು ಅಲ್ಲಿ ಲ್ಯಾಂಡಿಂಗ್ ಮಾಡಿದ್ದರು. ಆ ಸಮಯದಲ್ಲಿ ವಿಮಾನದಲ್ಲಿ 172 ಪ್ರಯಾಣಿಕರು ಇದ್ದರು , ಪೈಲಟ್ ಹೇಗೋ ಮಾಡಿ ವಿಮಾನವನ್ನು ಸುರಕ್ಷಿತವಾಗಿ ಕೆಳಗಿಳಿಸಿದ್ದಾರೆ. ವಿಮಾನವನ್ನು ಇಳಿಸಿದ ನಂತರ, ಪೈಲಟ್ ತಕ್ಷಣವೇ ವಿಮಾನ ನಿಲ್ದಾಣದ ಆಡಳಿತ ಮಂಡಳಿಗೆ ದೂರು ನೀಡಿದರು, ನಂತರ ವಿಮಾನ ನಿಲ್ದಾಣದ ಆಡಳಿತ ಮಂಡಳಿಯು ಕಾರ್ಯ ಪ್ರವೃತ್ತವಾಯಿತು.

ವಿಮಾನ ನಿಲ್ದಾಣದ ಆಡಳಿತ ಮಂಡಳಿಯು ಘಟನೆಯ ಬಗ್ಗೆ ತಕ್ಷಣ ವಿಮಾನ ನಿಲ್ದಾಣ ಪೊಲೀಸ್ ಠಾಣೆಗೆ ಮಾಹಿತಿ ನೀಡಿತು. ಆದರೆ, ಪೊಲೀಸರು ಕಾರ್ಯಪ್ರವೃತ್ತರಾಗುವ ಹೊತ್ತಿಗೆ, ಮೆರವಣಿಗೆ ತುಂಬಾ ಮುಂದೆ ಹೋಗಿತ್ತು.

ಡಿಜೆಯ ದೀಪಗಳು ಎಟಿಸಿಯ ದೀಪಗಳಂತೆಯೇ ಇದ್ದವು ಎಂದು ಹೇಳಲಾಗುತ್ತಿದೆ. ಇಳಿಯುವಾಗ ಂಖಿಅ ತನ್ನ ದೀಪಗಳನ್ನು ಆನ್ ಮಾಡಿದ ಅದೇ ಸಮಯಕ್ಕೆ ಆಎಯ ದೀಪಗಳು ಉರಿಯುತ್ತಿದ್ದವು. ಪೈಲಟ್‌ಗೆ ಒಮ್ಮೆ ಗೊಂದಲ ಉಂಟಾದರೂ ಬಳಿಕ ಬುದ್ಧಿ ಉಪಯೋಗಿಸಿ ಸರಿಯಾದ ಜಾಗದಲ್ಲಿ ಇಳಿಸಿದ್ದಾರೆ.

ಸಂಜೆ 6.30ರ ಸುಮಾರಿಗೆ ಘಟನೆ ನಡೆದಿದೆ. ವಿಮಾನ ನಿಲ್ದಾಣದ ಆಸುಪಾಸಿನಲ್ಲಿ ಲೇಸರ್ ಲೈಟ್ ಬಳಸುವ ವ್ಯಕ್ತಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ವಿಮಾನ ನಿಲ್ದಾಣದ ಅಧಿಕಾರಿಗಳು ಸ್ಥಳೀಯ ಪೊಲೀಸರನ್ನು ಒತ್ತಾಯಿಸಿದ್ದಾರೆ.

# ಛತ್ತೀಸ್‌ಗಢದ ಸುಕ್ಮಾದಲ್ಲಿ 33 ಮಾವೋವಾದಿಗಳ ಶರಣು




**ರಾಯಪುರ್,ಏ.18:** ಛತ್ತೀಸ್‌ಗಢದ ಸುಕ್ಮಾ ಜಿಲ್ಲೆಯಲ್ಲಿ 33 ಮಾವೋವಾದಿಗಳು ಶರಣಾಗಿದ್ದಾರೆ, ಇವರಲ್ಲಿ 17 ಜನರ ಮೇಲೆ ಒಟ್ಟು 49 ಲಕ್ಷ ರೂಪಾಯಿ ಬಹುಮಾನ ಘೋಷಿಸಲಾಗಿತ್ತು. ಶುಕ್ರವಾರ ನಡೆದ ಈ ಶರಣಾಗತಿಯಲ್ಲಿ ಮೊದಲಿಗೆ 9 ಮಹಿಳೆಯರು ಸೇರಿ 22 ಮಂದಿ ಪೊಲೀಸ್ ಮತ್ತು ಅಖಕಈ ಅಧಿಕಾರಿಗಳಿಗೆ ಶರಣಾದರು. ಎರಡನೇ ಹಂತದಲ್ಲಿ ಇಬ್ಬರು ಮಹಿಳೆಯರು ಸೇರಿ 11 ಜನ ಶರಣಾದರು.

ಸುಕ್ಮಾ ಎಸ್ಪಿ ಕಿರಣ್ ಚವಾಣ್ ಪ್ರಕಾರ, ಮಾವೋವಾದಿಗಳು ತಮ್ಮ ಸಂಘಟನೆಯ ನಿಷ್ಪ್ರಯೋಜಕ ಮತ್ತು ಮಾನವೀಯತೆಗೆ ವಿರುದ್ಧವಾದ ತತ್ವಗಳಿಂದ ಬೇಸತ್ತು, ಆದಿವಾಸಿಗಳ ಮೇಲಿನ ದೌರ್ಜನ್ಯದಿಂದ ಶರಣಾಗತರಾದರು.

ಶರಣಾದ 33 ಜನರಲ್ಲಿ 22 ಮಂದಿ ಛತ್ತೀಸ್ಗಢದ ಮಾಡ್ ವಿಭಾಗ ಮತ್ತು ಒಡಿಶಾದ ನುವಾಪಡ ವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಿದ್ದರು.

ಇವರಲ್ಲಿ ಮುಚಾಕಿ ಜೋಗ (33), ಎಂ.ಎ.ಡಿ. ವಿಭಾಗದ ಪಿಎಲ್ಜಿಎ ಕಂಪನಿ ನಂ. 1 ರ ಉಪ ಕಮಾಂಡರ್, ಮತ್ತು ಅವರ ಪತ್ನಿ ಮುಚಾಕಿ ಜೋಗಿ (28), ಅದೇ ತಂಡದ ಸದಸ್ಯೆ, ತಲಾ 8 ಲಕ್ಷ ರೂ. ಬಹುಮಾನ ಹೊಂದಿದ್ದರು.

ಕಿಕಿದ್ ದೇವೆ (30) ಮತ್ತು ಮನೋಜ್ ಅಲಿಯಾಸ್ ದುಧಿ ಬುಧ್ರಾ (28), ಏರಿಯಾ ಕಮಿಟಿ ಸದಸ್ಯರು, ತಲಾ 5 ಲಕ್ಷ ರೂ. ಬಹುಮಾನ ಹೊಂದಿದ್ದರು.

ಏಳು ಜನ ತಲಾ 2 ಲಕ್ಷ ರೂ. ಮತ್ತು ಒಬ್ಬರು 50,000 ರೂ. ಬಹುಮಾನವನ್ನು ಹೊಂದಿದ್ದರು. ಬಡೇಸಟ್ಟಿ ಗ್ರಾಮ ಪಂಚಾಯತ್ನಲ್ಲಿ ಕಾರ್ಯನಿರ್ವಹಿಸುತ್ತಿದ್ದ 11 ಮಾವೋವಾದಿಗಳ ಶರಣಾಗತಿಯಿಂದ ಆ ಪಂಚಾಯತ್ ಈಗ ಮಾವೋವಾದಿಗಳಿಂದ ಮುಕ್ತವಾಗಿದೆ.

ಶರಣಾದವರಿಗೆ ತಲಾ 50,000 ರೂ. ಆರ್ಥಿಕ ನೆರವು ನೀಡಲಾಗಿದ್ದು, ಸರ್ಕಾರಿ ನೀತಿಯಂತೆ ಪುನರ್ವಸತಿ ಕಲ್ಪಿಸಲಾಗುವುದು. ಕಳೆದ ವರ್ಷ, ಬಸ್ತರ್ ಪ್ರದೇಶದ ಏಳು ಜಿಲ್ಲೆಗಳಲ್ಲಿ 792 ಮಾವೋವಾದಿಗಳು ಶರಣಾಗಿದ್ದರು.

# ಯೇಸುಕ್ರಿಸ್ತಗೆ ಅಗೌರವ: ಜಾಟ್ ಚಿತ್ರತಂಡದ ವಿರುದ್ಧ ದೂರು

**ನವದೆಹಲಿ,ಏ.18:** ಬಾಲಿವುಡ್ ನಟರಾದ ಸನ್ನಿ ಡಿಯೋಲ್, ರಣದೀಪ್ ಹೂಡಾ, ವಿನೀತ್ ಕುಮಾರ್ ಸಿಂಗ್, ನಿರ್ದೇಶಕ ಗೋಪಿಚಂದ್ ಮಲಿನೇನಿ ಮತ್ತು ನಿರ್ಮಾಪಕ ನವೀನ್ ಯೆರ್ನೇನಿ ವಿರುದ್ಧ ಪಂಜಾಬ್ನಲ್ಲಿ ಪ್ರಕರಣ ದಾಖಲಿಸಲಾಗಿದೆ. ಚಿತ್ರದಲ್ಲಿನ ಒಂದು ದೃಶ್ಯದ ವಿರುದ್ಧ ಕ್ರಿಶ್ಚಿಯನ್ ಸಮುದಾಯದ ಸದಸ್ಯರು ಪ್ರತಿಭಟನೆ ನಡೆಸಿದ ನಂತರ ಜಲಂಧರ್ ಪೊಲೀಸರು ಸಲ್ಲಿಸಿದ ಎಫ್‌ಐಆರ್ ಅನ್ನು ಭಾರತೀಯ ನ್ಯಾಯ ಸಂಹಿತಾ (ಬಿಎನ್‌ಎಸ್) ಸೆಕ್ಷನ್ 299 (ಧಾರ್ಮಿಕ ಭಾವನೆಗಳನ್ನು ಕೆರಳಿಸುವ ಉದ್ದೇಶದಿಂದ ಉದ್ದೇಶಪೂರ್ವಕ ಮತ್ತು ದುರುದ್ದೇಶಪೂರಿತ ಕೃತ್ಯಗಳು) ಅಡಿಯಲ್ಲಿ ದಾಖಲಿಸಲಾಗಿದೆ.

ಚಿತ್ರದ ಒಂದು ದೃಶ್ಯವು ಇಡೀ ಕ್ರಿಶ್ಚಿಯನ್ ಸಮುದಾಯದ ಧಾರ್ಮಿಕ ಭಾವನೆಗಳನ್ನು ತೀವ್ರವಾಗಿ ನೋಯಿಸಿದೆ ಎಂದು ದೂರಿನಲ್ಲಿ ದಾಖಲಾಗಿದೆ. ವಿವಾದಾತ್ಮಕ ದೃಶ್ಯವು ರಣದೀಪ್ ಹೂಡಾ ಅವರ ಪಾತ್ರವು ಜನರು ಚರ್ಚ್‌ನಲ್ಲಿ ಪ್ರಾರ್ಥಿಸುತ್ತಿರುವಾಗಲೇ ಶಿಲುಬೆಯ ಕೆಳಗೆ ನಿಂತಿರುವುದನ್ನು ತೋರಿಸುತ್ತದೆ.

ಈ ಚಿತ್ರೀಕರಣದಲ್ಲಿ ಬೆದರಿಕೆ ಮತ್ತು ಅಶಿಸ್ತಿನ ವರ್ತನೆಯ ದೃಶ್ಯಗಳಿವೆ ಎಂದು ವರದಿಯಾಗಿದೆ. ಇದು ಕ್ರಿಶ್ಚಿಯನ್ ನಾಯಕರು ಮತ್ತು ಧಾರ್ಮಿಕ ಸಮುದಾಯಗಳನ್ನು ಕೆರಳಿಸಿದೆ. ಯೇಸುಕ್ರಿಸ್ತನ ಬಗ್ಗೆ ಅಗೌರವ ತೋರಿಸಲಾಗಿದೆ ಮತ್ತು ಈ ದೃಶ್ಯವು ಕ್ರಿಶ್ಚಿಯನ್ ನಂಬಿಕೆಯನ್ನು ಕೆಣಕುವ ಉದ್ದೇಶಪೂರ್ವಕ ಪ್ರಯತ್ನದ ಭಾಗವಾಗಿದೆ ಎಂದು ದೂರಿನಲ್ಲಿ ಆರೋಪಿಸಲಾಗಿದೆ.

ನಿರ್ದೇಶಕ, ಬರಹಗಾರ ಮತ್ತು ನಿರ್ಮಾಪಕರು ಪವಿತ್ರ ಗುಡ್ ಫ್ರೈಡೇ ಮತ್ತು ಈಸ್ಟರ್ ತಿಂಗಳಲ್ಲಿ ಈ ಚಿತ್ರವನ್ನು ಉದ್ದೇಶಪೂರ್ವಕವಾಗಿ ಬಿಡುಗಡೆ ಮಾಡಿದ್ದಾರೆ, ಇದರಿಂದಾಗಿ ಕ್ರಿಶ್ಚಿಯನ್ನರು ಆಕ್ರೋಶಗೊಂಡಿದ್ದಾರೆ ಮತ್ತು ಇಡೀ ದೇಶದಲ್ಲಿ ಪ್ರತಿಭಟನೆಗಳು ಭುಗಿಲೇಳುತ್ತವೆ ಮತ್ತು ಅಶಾಂತಿ ಹರಡುತ್ತದೆ ಎಂದು ದೂರುದಾರರು ಆರೋಪಿಸಿದ್ದಾರೆ. ಧಾರ್ಮಿಕ ಭಾವನೆಗಳನ್ನು ರಕ್ಷಿಸುವ ಕಾನೂನುಗಳ ಅಡಿಯಲ್ಲಿ ಚಿತ್ರದ ಮೇಲೆ ನಿಷೇಧ ಹೇರಲು ಮತ್ತು ಚಿತ್ರದ ಪಾತ್ರವರ್ಗ ಮತ್ತು ಸಿಬ್ಬಂದಿಯ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲು ಸಮುದಾಯವು ಒತ್ತಾಯಿಸಿದೆ ಎಂದು ವರದಿಯಾಗಿದೆ. ಯಾವುದೇ ಕ್ರಮಗಳನ್ನು ತೆಗೆದುಕೊಳ್ಳದಿದ್ದರೆ ಪ್ರತಿಭಟಿಸುವುದಾಗಿ ಎಚ್ಚರಿಕೆಯೊಂದಿಗೆ ಅವರು ಎರಡು ದಿನಗಳ ಗಡುವನ್ನು ನೀಡಿದ್ದಾರೆ ಎಂದು ವರದಿಯಾಗಿದೆ.

ಸನ್ನಿ ದೇವಲ್ ಅವರ ಇತ್ತೀಚಿನ ಆಕ್ಷನ್ ಚಿತ್ರ ಜಾಟ್ ಏ.10ರಂದು ಬಿಡುಗಡೆಯಾಗಿದೆ. ರಣದೀಪ್ ಹೂಡಾ ಪ್ರಮುಖ ಪ್ರತಿನಾಯಕನಾಗಿ ನಟಿಸಿದ್ದಾರೆ, ವಿನೀತ್ ಕುಮಾರ್ ಸಿಂಗ್, ಸಯಾಮಿ ಖೇರ್, ರೆಜಿನಾ ಕಸ್ಸಂದ್ರ, ಪ್ರಶಾಂತ್ ಬಜಾಜ್, ಜರೀನಾ ವಹಾಬ್ ಮತ್ತು ಜಗಪತಿ ಬಾಬು ಸೇರಿದಂತೆ ಪೋಷಕ ಪಾತ್ರವರ್ಗವು ಗಮನಾರ್ಹ ಪಾತ್ರಗಳಲ್ಲಿ ನಟಿಸಿದೆ. ಡಾನ್ ಸೀನು, ಬಾಡಿಗಾರ್ಡ್ ಮತ್ತು ವೀರ ಸಿಂಹ ರೆಡ್ಡಿ ನಂತಹ ತೆಲುಗು ಚಿತ್ರಗಳಿಗೆ ಹೆಸರುವಾಸಿಯಾಗಿರುವ ನಿರ್ದೇಶಕ ಗೋಪಿಚಂದ್ ಮಲಿನೇನಿ ಅವರ ಹಿಂದಿ ನಿರ್ದೇಶನದ ಚೊಚ್ಚಲ ಚಿತ್ರವಾಗಿದೆ.

ಮೈತ್ರಿ ಮೂವಿ ಮೇಕರ್ಸ್ ಮತ್ತು ಪೀಪಲ್ ಮೀಡಿಯಾ ಫ್ಯಾಕ್ಟರಿ ಈ ಚಿತ್ರವನ್ನು ನಿರ್ಮಿಸಿದ್ದು, ಹಿಂದಿ, ತಮಿಳು ಮತ್ತು ತೆಲುಗು ಭಾಷೆಗಳಲ್ಲಿ ಬಿಡುಗಡೆಯಾಗಿದೆ. ಈ ಆಕ್ಷನ್ ಚಿತ್ರವು ಬಾಕ್ಸ್ ಆಫೀಸ್‌ನಲ್ಲಿ ಉತ್ತಮ ಕಲೆಕ್ಷನ್ ಆಗುತ್ತಿದೆ. ಇದು ತನ್ನ ಮೊದಲ ವಾರಾಂತ್ಯದಲ್ಲಿ ಬಾಕ್ಸ್ ಆಫೀಸ್‌ನಲ್ಲಿ 32 ಕೋಟಿ ರೂ.ಗಳಿಗೂ ಹೆಚ್ಚು ಗಳಿಸಿದೆ.

# 4ನೇ ಹಂತದ ಪಿಎಸ್‌ಎಲ್‌ವಿ ಎಂಜಿನ್ ಪರೀಕ್ಷೆ ಯಶಸ್ಸು: ಇಸ್ರೋ

ಚೆನ್ನೈ, ಏ.18 (ಯುಎನ್‌ಐ) ಸ್ಟೆಲ್ಲೈಟ್ ನಳಿಕೆ ಡೈವರ್ಜೆಂಟ್ (ಕೋಬಾಲ್ಟ್ ಆಧಾರಿತ ಮಿಶ್ರಲೋಹ) ನೊಂದಿಗೆ ನಾಲ್ಕನೇ ಹಂತದ ಪಿಎಸ್‌ಎಲ್ವಿ ಎಂಜಿನ್ ಪರೀಕ್ಷೆ ಯಶಸ್ವಿಯಾಗಿದೆ ಮತ್ತು ಇದು ಶೇಕಡಾ 90 ರಷ್ಟು ವೆಚ್ಚವನ್ನು ಉಳಿಸಲು ಸಹಾಯ ಮಾಡುತ್ತದೆ ಎಂದು ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ (ಇಸ್ರೋ) ಶುಕ್ರವಾರ ತಿಳಿಸಿದೆ. ನವೀಕರಣದಲ್ಲಿ, ಪಿಎಸ್‌ಎಲ್‌ವಿ(ಪಿಎಸ್ 4) ನ ನಾಲ್ಕನೇ ಹಂತದಲ್ಲಿ ಹಾರಿಸಲಾದ ದ್ರವ ಎಂಜಿನ್‌ಗಳು ಆಮದು ಮಾಡಿಕೊಂಡ ಕೊಲಂಬಿಯಂ (ಸಿ 103) ವಸ್ತುವಿನಿಂದ ಮಾಡಲ್ಪಟ್ಟ ನಳಿಕೆ ಡೈವರ್ಜೆಂಟ್ ಅನ್ನು ಬಳಸುತ್ತವೆ. ಸಂಬಂಧಿತ ವೆಚ್ಚ ಉಳಿತಾಂಌಏದ್ೊಂದಿಗೆ ಆತ್ಮನಿರ್ಭರತೆಯನ್ನು ಸಾಧಿಸಲು ನಳಿಕೆ ಡೈವರ್ಜೆಂಟ್ ಸಾಕ್ಷಾತ್ಕಾರಕ್ಕಾಗಿ ಪರ್ಯಾಯ ವಸ್ತುವಾದ ಸ್ಟೆಲ್ಲೈಟ್ (ಕೆಸಿ 20 ಡಬ್ಲ್ಯೂಎನ್) ಅನ್ನು ಪ್ರಸ್ತಾಪಿಸಲಾಯಿತು. ಸ್ಟೆಲ್ಲೈಟ್ ಕ್ರೋಮಿಯಂ, ನಿಕಲ್, ಟಂಗ್ಸ್ಟನ್ ಮತ್ತು ಕಬ್ಬಿಣದ ಸೇರ್ಪಡೆಗಳೊಂದಿಗೆ ಕೋಬಾಲ್ಟ್ ಆಧಾರಿತ ಮಿಶ್ರಲೋಹವಾಗಿದೆ. ಇದು 11500 ಸಿ ವರೆಗಿನ ಹೆಚ್ಚಿನ ತಾಪಮಾನದಲ್ಲಿ ಉತ್ತಮ ಶಕ್ತಿಯನ್ನು ಉಳಿಸಿಕೊಳ್ಳುವ ವಸ್ತುವಾಗಿದೆ ಮತ್ತು ಆದ್ದರಿಂದ ಹೆಚ್ಚಿನ ತಾಪಮಾನದ ಅನ್ವಯಿಕೆಗಳಿಗೆ ಸೂಕ್ತವಾದ ವಸ್ತುವಾಗುತ್ತದೆ. ಅರ್ಹತಾ ಕಾರ್ಯಕ್ರಮದ ಭಾಗವಾಗಿ, ಮೊದಲ ಹಂತದಲ್ಲಿ ಎರಡು ಹಾರ್ಡ್‌ವೇರ್‌ಗಳಲ್ಲಿ ಮೂರು ಬಿಸಿ ಪರೀಕ್ಷೆಗಳು ಈಗಾಗಲೇ ಪೂರ್ಣಗೊಂಡಿವೆ ಎಂದು ಅದು ಹೇಳಿದೆ. "ಏಪ್ರಿಲ್ 08, 2025 ರಂದು, ಮಹೇಂದ್ರಗಿರಿಯ ಇಸ್ರೋ ಪ್ರೊಪಲ್ಷನ್ ಕಾಂಪ್ಲೆಕ್ಸ್‌ನಲ್ಲಿರುವ ಪರೀಕ್ಷಾ ಸೌಲಭ್ಯದಲ್ಲಿ 665 ಸೆಕೆಂಡುಗಳ ದೀರ್ಘಾವಧಿಯ ಬಿಸಿ ಪರೀಕ್ಷೆಯ ಮೂಲಕ ಅರ್ಹತಾ ಕಾರ್ಯಕ್ರಮದ ಅಂತಿಮ ಪರೀಕ್ಷೆಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಲಾಯಿತು" ಎಂದು ಇಸ್ರೋ ತಿಳಿಸಿದೆ. ಈ ಮಿಶ್ರಲೋಹದ ಬಳಕೆಯು ಶೇಕಡಾ 90 ರಷ್ಟು ವೆಚ್ಚ ಉಳಿತಾಯಕ್ಕೆ ಕಾರಣವಾಗಿದೆ ಎಂದು ಅದು ಹೇಳಿದೆ.





ನವದೆಹಲಿಯ ಶುಕ್ರವಾರ WHO ಕಟ್ಟಡದ ಬಳಿಯ ರಿಂಗ್ ರಸ್ತೆಯಲ್ಲಿರುವ ನೀರು ನಿಲ್ಲುವ ಸ್ಥಳವನ್ನು ಮುಖ್ಯಮಂತ್ರಿ ರೇಖಾ ಗುಪ್ತಾ ಮತ್ತು ಲೋಕೋಪಯೋಗಿ ಸಚಿವ ಪರ್ವೇಶ್ ವರ್ಮಾ ಪರಿಶೀಲಿಸಿದರು.

# ವಿದ್ಯಾರ್ಥಿ ಜನಿವಾರ ಪ್ರಕರಣ: ಪರೀಕ್ಷೆಯಿಂದ ವಂಚಿತರಿಗೆ ಮರುಪರೀಕ್ಷೆ ಬರೆಯಲು ಅವಕಾಶಕ್ಕೆ ಚರ್ಚೆ: ಮಧು ಬಂಗಾರಪ್ಪ

**ಬೆಂಗಳೂರು, ಏ.18–** ಸಿಇಟಿ ಪರೀಕ್ಷೆ ವೇಳೆ ವಿದ್ಯಾರ್ಥಿಗಳು ಹಾಕಿದ್ದ ಜನಿವಾರ ತೆಗೆಸಿದ ಘಟನೆಯನ್ನು ರಾಜ್ಯ ಸರ್ಕಾರ ಖಂಡಿಸಿದ್ದು, ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವ ಭರವಸೆ ನೀಡಿದೆ.ವಿವಾದ ಕುರಿತು ಪ್ರತಿಕ್ರಿಯೆ ನೀಡಿರುವ ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರು, ಯಾವ ಇಲಾಖೆಯೂ ಇಂತಹ ನಿರ್ದೇಶನ ಕೊಟ್ಟಿಲ್ಲ. ಘಟನೆಗೆ ಕಾರಣರಾದವರ ವಿರುದ್ಧ ಕ್ರಮ ಆಗಬೇಕು. ಪರೀಕ್ಷೆಯಿಂದ ವಂಚಿತರಾದವರಿಗೆ ಮರುಪರೀಕ್ಷೆ ಕೊಡುವ ಬಗ್ಗೆ ಚರ್ಚೆ ಮಾಡಲಾಗುತ್ತದೆ ಎಂದು ಹೇಳಿದರು.

ಪ್ರಕರಣದ ಕುರಿತು ನಿಖರ ಮಾಹಿತಿ ಪಡೆಯುತ್ತೇನೆ. ಜನಿವಾರ ತೆಗೆಯುವ ನಿಯಮ ಇಲ್ಲ. ಜಾತಿ ಧರ್ಮಗಳಿಗೆ ಗೌರವ ಕೊಡಬೇಕಾಗುತ್ತದೆ. ಘಟನೆಗೆ ಕಾರಣರಾದವರ ವಿರುದ್ಧ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಭರವಸೆ ನೀಡಿದರು. ಉನ್ನತ ಶಿಕ್ಷಣ ಸಚಿವ ಡಾ. ಎಂಸಿ ಸುಧಾಕರ್ ಅವರು ಪ್ರತಿಕ್ರಿಯೆ ನೀಡಿ, ಸಿಇಟಿ ಅಭ್ಯರ್ಥಿಯ ಜನಿವಾರ ತೆಗೆಸಿದ್ದು ನಿಜವೇ ಆಗಿದ್ದರೆ ಅದು ಅತಿರೇಕದ ವರ್ತನೆ. ತಪ್ಪಿತಸ್ಥರ ವಿರುದ್ಧ ಕಠಿಣ



ಕಾನೂನು ಕ್ರಮ ಕೈಗೊಳ್ಳುತ್ತೇವೆ. ಇದನ್ನು ಗಂಭೀರವಾಗಿ ಪರಿಗಣಿಸುತ್ತೇವೆ. ಎಲ್ಲಾ ಜಾತಿ, ಧರ್ಮಗಳ ಆಚರಣೆ ಸಂಪ್ರದಾಯಕ್ಕೆ ಗೌರವ ಕೊಡಬೇಕು. ನಾನು ಈ ರೀತಿಯ ಘಟನೆಗಳಿಗೆಲ್ಲ ಪ್ರೋತ್ಸಾಹ ಕೊಡುವುದಿಲ್ಲ. ಘಟನೆ ಸಂಬಂಧ ಅಧಿಕಾರಿಗಳ ಬಳಿ ವರದಿ ಪಡೆದು, ಮುಂದೆ ಏನು ಮಾಡಬಹುದು ಎಂದು ಯೋಚಿಸುತ್ತೇನೆ. ಆ ರೀತಿ ಆಗಿದ್ದು ಸತ್ಯವೇ ಆದರೆ ಇನ್ನೊಮ್ಮೆ ಪರಿಶೀಲನೆ ಮಾಡುತ್ತೇನೆ. ಆಯ್ದ ವಿಚಾರ ಎತ್ತಿಕೊಂಡು ರಾಜಕೀಯ ಲಾಭ ಮಾಡುವುದಲ್ಲ. ಯಾವುದೇ ಸಮುದಾಯವನ್ನು ನೋವಿಸುವ ಉದ್ದೇಶ ನಮ್ಮದಲ್ಲ ಎಂದು ತಿಳಿಸಿದ್ದಾರೆ.

ಶಿವಮೊಗ್ಗದ ಆದಿಚುಂಚನಗಿರಿ ಕಾಲೇಜಿನ ಪರೀಕ್ಷಾ ಕೇಂದ್ರದಲ್ಲಿ ವಿದ್ಯಾರ್ಥಿಯೊಬ್ಬನ ಜನಿವಾರ ಕತ್ತರಿಸಿ ಪರೀಕ್ಷೆ ಬರೆಯಲು ಅನುಮತಿ ನೀಡಲಾಗಿದೆ. ವಿದ್ಯಾರ್ಥಿ ಜನಿವಾರ ತೆಗೆಯಲ್ಲ ಎಂದಿದ್ದಕ್ಕೆ ಪರೀಕ್ಷಾ ಸಿಬ್ಬಂದಿ ಅದನ್ನು ಕತ್ತರಿಸಿರುವ ಆರೋಪ ಕೇಳಿಬಂದಿದೆ. ಎರಡೂ ಪ್ರಕರಣದ ಬಗ್ಗೆ ರಾಜ್ಯ ಬಿಜೆಪಿ ತೀವ್ರ ಖಂಡನೆ ವ್ಯಕ್ತಪಡಿಸಿದ್ದು, ಬೇಷರತ್ ಕ್ಷಮೆಯಾಚಿಸಬೇಕೆಂದು ಸರ್ಕಾರಕ್ಕೆ ಆಗ್ರಹಿಸಿದೆ.

ಪಿಯುಸಿ ಪರೀಕ್ಷೆ ಬೆನ್ನಲ್ಲೇ ವೃತ್ತಿಪರ ಕೋರ್ಸ್‌ಗಳ ಪ್ರವೇಶಾತಿಗಾಗಿ ರಾಜ್ಯಾದ್ಯಂತ ಏಪ್ರಿಲ್ 15, 16, 17 ಸಿಇಟಿ ಪರೀಕ್ಷೆ ನಡೆದಿದ್ದು, ಕೊನೆಯ ದಿನವಾದ ಗುರುವಾರ ಶಿವಮೊಗ್ಗ ಮತ್ತು ಬೀದರ್‌ನಲ್ಲಿ ಪರೀಕ್ಷಾರ್ಥಿಗೆ ತಪಾಸಣೆ ವೇಳೆ ಜನಿವಾರ ತೆಗೆದುಹಾಕುವಂತೆ ಅಧಿಕಾರಿಗಳು ಸೂಚನೆ ನೀಡಿರುವುದು ಭಾರೀ ವಿವಾದಕ್ಕೆ ಕಾರಣವಾಗಿದೆ. ಬೀದರ್‌ನ ಸಾಯಿ ಸ್ಫೂರ್ತಿ ಪರೀಕ್ಷಾ ಕೇಂದ್ರದಲ್ಲಿ ವಿದ್ಯಾರ್ಥಿಯೊಬ್ಬ ಜನಿವಾರ ತೆಗೆಯಲು ಒಪ್ಪದೇ ಗಣಿತ ಪರೀಕ್ಷೆಯಿಂದ ಹೊರ ಗುಳಿದಿದ್ದಾನೆ. ಇದರಿಂದ ಆತನ ಎಂಜಿನಿಯರಿಂಗ್ ಭವಿಷ್ಯ ಅತಂತ್ರ ಗೊಂಡಿದೆ. ಬೀದರ್‌ನ ವಿದ್ಯಾರ್ಥಿ ಕಳೆದ ಬುಧವಾರ ಜನಿವಾರ ಧರಿಸಿ ಭೌತಶಾಸ್ತ್ರ, ರಸಾಯನ ಶಾಸ್ತ್ರ ಪರೀಕ್ಷೆ ಬರೆದಿದ್ದ. ಗುರುವಾರ ಗಣಿತ ಪರೀಕ್ಷೆಗೆ ಬಂದಾಗ ಜನಿವಾರ ನೋಡಿದ ಪರೀಕ್ಷಾ ಸಿಬ್ಬಂದಿ ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ಜನರಿವಾರ ತೆಗೆಯಲ್ಲ, ಪರೀಕ್ಷೆ ಬರೆಯಲು ಅನುಮತಿ ನೀಡುವಂತೆ ಬೇಡಿಕೊಂಡಿದ್ದಾನೆ. ಕೊನೆಗೆ ಪರೀಕ್ಷೆಯಿಂದಲೇ ಆತ ದೂರ ಉಳಿದಿದ್ದಾನೆ ಎಂದು ವರದಿಗಳು ತಿಳಿಸಿವೆ.ಇದೇ ರೀತಿ ಶಿವಮೊಗ್ಗದ ಆದಿಚುಂಚನಗಿರಿ ಕಾಲೇಜಿನ ಪರೀಕ್ಷಾ ಕೇಂದ್ರದಲ್ಲಿ ವಿದ್ಯಾರ್ಥಿಯೊಬ್ಬನ ಜನಿವಾರ ಕತ್ತರಿಸಿ ಪರೀಕ್ಷೆ ಬರೆಯಲು ಅನುಮತಿ ನೀಡಲಾಗಿದೆ. ವಿದ್ಯಾರ್ಥಿ ಜನಿವಾರ ತೆಗೆಯಲ್ಲ ಎಂದಿದ್ದಕ್ಕೆ ಪರೀಕ್ಷಾ ಸಿಬ್ಬಂದಿ ಅದನ್ನು ಕತ್ತರಿಸಿರುವ ಆರೋಪ ಕೇಳಿಬಂದಿದೆ. ಎರಡೂ ಪ್ರಕರಣದ ಬಗ್ಗೆ ರಾಜ್ಯ ಬಿಜೆಪಿ ತೀವ್ರ ಖಂಡನೆ ವ್ಯಕ್ತಪಡಿಸಿದ್ದು, ಬೇಷರತ್ ಕ್ಷಮೆಯಾಚಿಸಬೇಕೆಂದು ಸರ್ಕಾರಕ್ಕೆ ಆಗ್ರಹಿಸಿದೆ.ಇನ್ನು ಪ್ರಕರಣದ ಕುರಿತು ಮಾತನಾಡಿದ ಬೀದರ್ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, 'ಘಟನೆಯ ಬಗ್ಗೆ ತಿಳಿದ ನಂತರ, ಕೇಂದ್ರದ ಪರೀಕ್ಷಕ ಚಂದ್ರಶೇಖರ್ ಬಿರಾದಾರ್ ಅವರಿಗೆ ಶೋಕಾಸ್ ನೋಟಿಸ್ ಜಾರಿ ಮಾಡಲಾಗಿದೆ ಎಂದರು. ಅಂತೆಯೇ ಅಭ್ಯರ್ಥಿ ಸುಚಿವೃತ್‌ಗೆ ವಿಶೇಷ ಪರೀಕ್ಷೆ ನಡೆಸುವ ಅವಕಾಶವಿದೆಯೇ ಎಂದು ಕೇಳಿದಾಗ, ಕೆಆರ್‌ಎ ಮತ್ತು ಸರ್ಕಾರವು ಆ ವಿಷಯದ ಬಗ್ಗೆ ನಿರ್ಧಾರ ತೆಗೆದುಕೊಳ್ಳಬೇಕು ಎಂದು ಸ್ಪಷ್ಟಪಡಿಸಿದರು.

ಘಟನೆಯ ಹಿಂದಿನ ದಿನ, ಅಂದರೆ ಏಪ್ರಿಲ್ 16 ರಂದು, ಅಧಿಕಾರಿಗಳು ಸುಚಿವ್ರತ್ಗೆ ಬುಧವಾರ ಜನಿವಾರ ಧರಿಸಿ ಭೌತಶಾಸ್ತ್ರ ಮತ್ತು ರಸಾಯನಶಾಸ್ತ್ರ ಪತ್ರಿಕೆಗಳನ್ನು ಬರೆಯಲು ಅವಕಾಶ ನೀಡಿದ್ದರು, ಆದರೆ ಗುರುವಾರ ಬೆಳಿಗ್ಗೆ ಗಣಿತ ಪತ್ರಿಕೆ ಬರೆಯಲು ಅವರು ಅವಕಾಶ ನೀಡಲಿಲ್ಲ. ಅಭ್ಯರ್ಥಿಯು ಈ ಕುರಿತು ಪೋಷಕರನ್ನು ಸಂಪರ್ಕಿಸಿದಾಗ ಅವರು ಜನಿವಾರ ತೆಗೆಯದಂತೆ ಸೂಚಿಸಿದರು. ಆದಾಗ್ಯೂ, ಗುರುವಾರ ಜನಿವಾರ ಧರಿಸಿ ಕೊನೆಯ ಪತ್ರಿಕೆ ಜೀವಶಾಸ್ತ್ರಕ್ಕೆ ಅಭ್ಯರ್ಥಿಗೆ ಅವಕಾಶ ನೀಡಲಾಯಿತು.

# ಮುಖ್ಯಮಂತ್ರಿಗೆ ಇಚ್ಛಾಶಕ್ತಿ ಇಲ್ಲ ಬಿ.ವೈ.ವಿಜಯೇಂದ್ರ ಕಟು ಟೀಕೆ

**ಬೆಂಗಳೂರು, ಏ.18–**ಕರ್ನಾಟಕದ ಮುಖ್ಯಮಂತ್ರಿಗಳಿಗೆ ಇಚ್ಛಾಶಕ್ತಿ ಇಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರು ಟೀಕಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು ನಿನ್ನೆ ವಿಶೇಷ ಸಂಪುಟ ಸಭೆ ನಡೆದಿದೆ. ಮುಖ್ಯಮಂತ್ರಿಗಳ ಬಹಳ ಪ್ರೀತಿಯ ವಿಷಯವಾದ ಜಾತಿ ಗಣತಿ ಕುರಿತು ತೀರ್ಮಾನ ಮಾಡಲು ಇದನ್ನು ಕರೆದಿದ್ದರು. ಆದರೆ, ಇಚ್ಛಾಶಕ್ತಿ ಇಲ್ಲದ ಕಾರಣ ಯಾವುದೇ ನಿರ್ಧಾರಕ್ಕೆ ಬರಲಿಲ್ಲ ಎಂದು ತಿಳಿಸಿದರು. ಹಿಂದುಳಿದ ವರ್ಗಗಳು, ಪರಿಶಿಷ್ಟ ಜಾತಿ, ಪಂಗಡಗಳಿಗೆ ನ್ಯಾಯ ಕೊಡುವ ಇಚ್ಛಾಶಕ್ತಿ ಇದ್ದಿದ್ದೇ ಆದರೆ, ಎಸ್ಸಿ ಅಭಿವೃದ್ಧಿ ನಿಗಮದಲ್ಲಿ ಇಷ್ಟು ದೊಡ್ಡ ಹಗರಣಕ್ಕೆ ಅವಕಾಶ ಕೊಡುತ್ತಿರಲಿಲ್ಲ ಎಂದು ನುಡಿದರು.

ವಾಲ್ಮೀಕಿ ಅಭಿವೃದ್ಧಿ ನಿಗಮದ 150 ಕೋಟಿಯನ್ನು ಹೊರರಾಜ್ಯಕ್ಕೆ ಕಳುಹಿಸಿ ಹಗರಣ ನಡೆಯಲು ಮುಖ್ಯಮಂತ್ರಿಗಳು ಅವಕಾಶ ಕೊಡುತ್ತಿರಲಿಲ್ಲ. ದಲಿತರ ಅಭ್ಯುದಯಕ್ಕೆ ಮೀಸಲಿಟ್ಟ 38,500 ಕೋಟಿ



ಅನುದಾನದ ದುರ್ಬಳಕೆಗೆ ಅವಕಾಶ ಆಗುತ್ತಿರಲಿಲ್ಲ ಎಂದು ತಿಳಿಸಿದರು.

**ಬೆಂಕಿ ಹಚ್ಚುವ ಕೆಲಸ ಮಾಡಿದ್ದ ಮುಖ್ಯಮಂತ್ರಿ:** ತಮ್ಮ ಅಧಿಕಾರದ ಅವಧಿಯಲ್ಲಿ ಹೊಸ ಅನುಭವ ಮಂಟಪ ಪೂರ್ಣಗೊಳಿಸುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಹೇಳಿದ್ದಾರೆ. ಸಿದ್ದರಾಮಯ್ಯನವರು 12ನೇ ಶತಮಾನದ ಅಣ್ಣ ಬಸವಣ್ಣನವರ ಕುರಿತು ಮಾತನಾಡುವ ಮೊದಲು ಸ್ವಲ್ಪ ಹಿಂದೆ ಮುಂದೆ ಅರ್ಥ ಮಾಡಿಕೊಂಡು ಮಾತನಾಡಬೇಕು. ಅಣ್ಣ ಬಸವಣ್ಣನವರು ಸಮ ಸಮಾಜದ ಕನಸು ಕಂಡವರು. ಅದಕ್ಕಾಗಿ ಕೈಂಕರ್ಯ ತೊಟ್ಟು ನುಡಿದಂತೆ ನಡೆದವರು. ತಾವುಗಳು ವೀರಶೈವ –ಲಿಂಗಾಯತ ಪ್ರತ್ಯೇಕ ಧರ್ಮ ಎಂದು ಬೆಂಕಿ ಹಚ್ಚುವ ಕೆಲಸ ಮಾಡಿದ್ದೀರಿ ಎಂದು ಬಿ.ವೈ.ವಿಜಯೇಂದ್ರ ಅವರು ಆಕ್ಷೇಪಿಸಿದರು.

ವೀರಶೈವ–ಲಿಂಗಾಯುತ ಪ್ರತ್ಯೇಕ ಧರ್ಮ ಎಂದು ಒಡೆಯಲು ಕೈ ಹಾಕಬಾರದಿತ್ತು ಎಂದು ಸ್ವತಃ ಡಿ.ಕೆ.ಶಿವಕುಮಾರ್ ಅವರು ಹೇಳಿ ಕ್ಷಮೆ ಕೇಳಿದ್ದರು. ಪಾಪ ಜನ ಮತ್ತೆ ಮತ ಕೊಟ್ಟರು. ಈಗ ಅಲ್ಪಸಂಖ್ಯಾತರಿಗೆ ಓಲೈಕೆ ಮಾಡುವ ದೃಷ್ಟಿಯಿಂದ ಹಿಂದೂಗಳಿಗೆ ಅಪಮಾನ ಮಾಡುತ್ತಿದ್ದಾರೆಂದು ಆರೋಪಿಸಿದರು.


ಮುಖ್ಯಮಂತ್ರಿಗಳ ನಡೆಯನ್ನು ರಾಜ್ಯದ ಪ್ರತಿಯೊಂದು ಸಮುದಾಯವೂ ಗಮನಿಸುತ್ತಿದೆ. ಮುಖ್ಯಮಂತ್ರಿಗಳ ನಡೆ ಮತ್ತು ನುಡಿಗೆ ಅಜಗಜಾಂತರ ವ್ಯತ್ಯಾಸ ಇದೆ ಎಂದು ದೂರಿದರು. ಅನುಭವ ಮಂಟಪ ಮುಗಿಸಲು ನಿಮ್ಮ ಡಿ.ಕೆ.ಶಿವಕುಮಾರ್ ಬಿಡುತ್ತಾರೋ ಇಲ್ಲವೋ ನನಗೆ ಗೊತ್ತಿಲ್ಲ. ಆದರೆ, ರಾಜ್ಯದ ಮುಖ್ಯಮಂತ್ರಿಗಳ ಸ್ಥಾನದ ಗೌರವ ಕಳೆಯದಿರಿ ಎಂದು ತಿಳಿಸಿದರು. ಮೈಸೂರಿನಿಂದ ಹೊರಟ

# ಅಂತರ್ಜಲ ಅಭಿವೃದ್ಧಿ ಇಲಾಖೆ ಕಾಮಗಾರಿ ಗುತ್ತಿಗೆದಾರರಿಗೆ ಪಾರದರ್ಶಕವಾಗಿ ಹಣ ಬಿಡುಗಡೆ: ಬೋಸರಾಜು

**ಬೆಂಗಳೂರು, ಏ.18–** ಸಣ್ಣ ನೀರಾವರಿ ಹಾಗೂ ಅಂತರ್ಜಲ ಅಭಿವೃದ್ಧಿ ಇಲಾಖೆಯಲ್ಲಿನ ಕಾಮಗಾರಿಗಳಿಗೆ ಹಾಗೂ ಗುತ್ತಿಗೆದಾರರಿಗೆ ಪಾರದರ್ಶಕವಾಗಿ ಹಣ ಬಿಡುಗಡೆ ಮಾಡಲಾಗಿದೆ ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ತಿಳಿಸಿದರು. ಗುರುವಾರ ರಾಜ್ಯ ಗುತ್ತಿಗೆದಾರರ ಸಂಘದ ಪದಾಧಿಕಾರಿಗಳೊಂದಿಗೆ ಸಭೆ ನಡೆಸಿದರ ಬಗ್ಗೆ ಇಂದು ಪತ್ರಿಕಾಗೋಷ್ಠಿಯಲ್ಲಿ ಅವರು ವಿವರ ನೀಡಿದರು.

ಅನುದಾನ ಬಿಡುಗಡೆಗೆ ಮೊದಲ ಬಾರಿಗೆ ಹೊಸ ಪ್ರಯತ್ನ ಮಾಡಲಾಗಿದ್ದು, ಕಳೆದ ಎರಡು ಆರ್ಥಿಕ ವರ್ಷದಲ್ಲಿ 1566 ಕಾಮಗಾರಿಗಳಿಗೆ ಸಂಪೂರ್ಣ ಬಾಕಿ ಹಣವನ್ನು ಬಿಡುಗಡೆ ಮಾಡಲಾಗಿದೆ. ಇಲಾಖೆ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಎಲ್ಲಾ ಕಾಮಗಾರಿ/ಗುತ್ತಿಗೆದಾರರಿಗೂ ಹಣ ಬಿಡುಗಡೆ ಮಾಡಲಾಗಿದ್ದು, ಇದರಲ್ಲಿ ತಾರತಮ್ಯ ಹಾಗೂ ಹಸ್ತಕ್ಷೇಪ ಹೇಗೆ ಸಾಧ್ಯ? ಈ ನಿಟ್ಟಿನಲ್ಲಿ ರಾಜ್ಯ ಗುತ್ತಿಗೆದಾರರ ಸಂಘದ ಅಧ್ಯಕ್ಷರು ಆಧಾರ ರಹಿತ ಆರೋಪ ಮಾಡಿದ್ದಾರೆ. ನಿನ್ನೆ ನಡೆದ ಸಭೆಯಲ್ಲಿ, ರಾಜ್ಯ ಗುತ್ತಿಗೆದಾರರಲ್ಲಿ ಉಂಟಾಗಿದ್ದ ಗೊಂದಲಗಳನ್ನು ಪರಿಹರಿಸಲಾಗಿದೆ ಎಂದು ಮಾಹಿತಿ ನೀಡಿದರು. 2023–24ನೇ ಆರ್ಥಿಕ ವರ್ಷದಲ್ಲಿ ಬಿಜೆಪಿ ಸರಕಾರ, ಹಣಕಾಸಿನ ಲಭ್ಯತೆ ಇಲ್ಲದೇ ಇದ್ದರೂ ಪ್ರಾರಂಭಿಸಿದ್ದ, 12,693 ಕೋಟಿ ರೂಪಾಯಿ ಮೌಲ್ಯದ 15,549 ಕಾಮಾಗಾರಿಗಳನ್ನು ನಾವು ಮುಂದುವರೆಸಿದ್ದೇವೆ. ಈ ವರ್ಷದಲ್ಲಿ ಕಾಮಗಾರಿಗಳನ್ನು ಪ್ರಾರಂಭಿಸದೆ, ಹಳೆಯ ಕಾಮಗಾರಿಗಳಿಗೆ ಅನುದಾನ ಬಿಡುಗಡೆ ಮಾಡಿದ್ದೇವೆ ಎಂದರು.

ಬಿಜೆಪಿ ಸರಕಾರ ಬಿಟ್ಟು ಹೋಗಿದ್ದ ಅಗಾಧ ಪ್ರಮಾಣದ ಕಾಮಗಾರಿಗಳನ್ನು ನಿಭಾಯಿಸಲು ಹಾಗೂ ಹಣಕಾಸಿನ ಲಭ್ಯತೆ ಇಲ್ಲದೇ ತೊಂದರೆ ಅನುಭವಿಸುತ್ತಿದ್ದ ಗುತ್ತಿಗೆದಾರರಿಗೆ ಅನುಕೂಲ ಮಾಡಿಕೊಡುವ ನಿಟ್ಟಿನಲ್ಲಿ, ಮುಖ್ಯಮಂತ್ರಿಗಳಿಗೆ ಮಾಡಿಕೊಂಡ ಮನವಿಯ ಮೇರೆಗೆ ನಮ್ಮ ಇಲಾಖೆಗೆ ಹೆಚ್ಚಿನ ಅನುದಾನ ಮಂಜೂರು ಮಾಡಲಾಯಿತು. ಹಿಂದಿನ ಸರಕಾರ ಹಣಕಾಸಿನ ಲಭ್ಯತೆಯನ್ನು ತೋರಿಸದೇ, ಅವೈಜ್ಞಾನಿಕವಾಗಿ ಅನುಮತಿ ನೀಡಲಾಗಿದ್ದ ಕಾಮಗಾರಿಗಳನ್ನು ಮುಂದುವರೆಸಲು ಹಾಗೂ ತೊಂದರೆಯಲ್ಲಿದ್ದ ಗುತ್ತಿಗೆದಾರರನ್ನು ಕಾಪಾಡುವ ನಿಟ್ಟಿನಲ್ಲಿ 2000 ಗುತ್ತಿಗೆದಾರರಲ್ಲಿ, 639 ಗುತ್ತಿಗೆದಾರರಿಗೆ ಬಾಕಿ ಇದ್ದ ಸಂಪೂರ್ಣ ಹಣವನ್ನು ಬಿಡುಗೆಡೆ ಮಾಡಲಾಗಿದೆ. ಉಳಿದ 1361 ಗುತ್ತಿಗೆದಾರರಿಗೆ ಭಾಗಶಃ ಹಣವನ್ನು ಬಿಡುಗಡೆ ಮಾಡಲಾಗಿದೆ ಎಂದು ತಿಳಿಸಿದರು.2024–25 ನೇ ಆರ್ಥಿಕ ವರ್ಷದಲ್ಲಿ 9,974.34 ಕೋಟಿ ರೂಪಾಯಿ ಮೌಲ್ಯದ 13,913 ಸ್ಪಿಲ್ ಓವರ್ (ಮುಂದುವರೆದ) ಕಾಮಗಾರಿಗಳು ಚಾಲ್ತಿಯಲ್ಲಿದ್ದವು. ಕಾಮಗಾರಿಗಳ ಅಗಾಧದತೆ ಹಾಗೂ ಗುತ್ತಿಗೆದಾರರ ಹಿತಾಸಕ್ತಿಯನ್ನು ಕಾಪಾಡುವ ಉದ್ದೇಶದಿಂದ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು. ಇದಕ್ಕೆ ಸಕಾರಾತ್ಮಕವಾಗಿ ಸ್ಪಂದಿಸಿ ಹೆಚ್ಚುವರಿ ಅನುದಾನ ಮಂಜೂರಾಯಿತು. ಫೆಬ್ರವರಿ 2025 ಕ್ಕೆ ಬಾಕಿಯಿದ್ದ ಬಿಲ್ ಹಣ 3,352.06 ಕೋಟಿ ರೂಪಾಯಿಗಳು. ಒಟ್ಟಾರೆಯಾಗಿ ಕೈಗೊಳ್ಳಲಾಗಿದ್ದ ಕಾಮಗಾರಿಗಳು 3,176



ಇದರಲ್ಲಿ 267 ಗುತ್ತಿಗೆದಾರರಿಗೆ ಬಾಕಿಯಿದ್ದ ಸಂಪೂರ್ಣ ಹಣವನ್ನು ಡಿಸೆಂಬರ್ ತಿಂಗಳಲ್ಲಿ ಬಿಡುಗಡೆ ಮಾಡಲಾಯಿತು ಎಂದು ಹೇಳಿದರು.

ಲಭ್ಯವಿದ್ದ ಅನುದಾನದಲ್ಲಿ 2,909 ಕಾಮಾಗಾರಿಗಳಿಗೆ ಭಾಗಶಃ ಹಣ ಬಿಡುಗಡೆ ಮಾಡಲಾಗಿದೆ. ಒಟ್ಟಾರೆಯಾಗಿ 3,176 ಕಾಮಗಾರಿಗಳಿಗೆ ಪಾರದರ್ಶಕವಾಗಿ ಹಣ ಬಿಡುಗಡೆ ಮಾಡಲಾಗಿದೆ ಎಂದು ಮಾಹಿತಿ ನೀಡಿದರು.ಒಟ್ಟಾರೆಯಾಗಿ 2637 (211 ಗುತ್ತಿಗೆದಾರರು ಹಾಗೂ 2426 ಕಾಮಗಾರಿ) ಕೆಲಸಗಳಿಗೆ ಹಣ ಬಿಡುಗಡೆ ಮಾಡಲಾಗಿದೆ. ಇದರಲ್ಲಿ 660 (603 ಕಾಮಗಾರಿ ಹಾಗೂ 57 ಗುತ್ತಿಗೆದಾರರಿಗೆ) ಬಾಕಿಯಿದ್ದ ಸಂಪೂರ್ಣ ಹಣವನ್ನು ಬಿಡುಗಡೆ ಮಾಡಲಾಗಿದೆ. 1977 (1823 ಕಾಮಗಾರಿ ಹಾಗೂ 154 ಗುತ್ತಿಗೆದಾರರಿಗೆ) ಭಾಗಶಃ ಹಣ ಬಿಡುಗಡೆ ಮಾಡಲಾಗಿದೆ. 2637 ಕಾಮಾಗಾರಿಗಳಿಗೂ ಹಣ ಬಿಡುಗಡೆ ಮಾಡಲಾಗಿದೆ ಎಂದರು.ಸಣ್ಣ ಮತ್ತು ಮಧ್ಯಮ ಗುತ್ತಿಗೆದಾರರು ಹೆಚ್ಚಾಗಿ ಕಾಮಗಾರಿಗಳನ್ನ ಕೈಗೊಳ್ಳುವಂತಹ ಎಂಓಟಿ (ಕೆರೆಗಳ ಅಧುನಿಕರಣ) ಮತ್ತು ಏಪಿಬಿ (ಅಣೆಕಟ್ಟು ಪಿಕ್‌ಅಪ್)ಯ ಹೆಡ್ ಆಫ್ ಅಕೌಂಟ್‌ಗೆ ಹೆಚ್ಚಿನ ಆದ್ಯತೆ ನೀಡಲಾಗಿದೆ. ಎಂಓಟಿ (ಕೆರೆಗಳ ಅಧುನಿಕರಣ) ಲೆಕ್ಕಶೀರ್ಷಿಕೆಗೆ ಆಯವ್ಯದಲ್ಲಿ ಹಂಚಿಕೆ ಮಾಡಲಾದ ಹಣ 100 ಕೋಟಿ ರೂಪಾಯಿಗಳು ಹೆಚ್ಚುವರಿಯಾಗಿ 210 ಕೋಟಿ ರೂಪಾಯಿಗಳ ಹಣವನ್ನು ಬಿಡುಗಡೆ ಮಾಡಲಾಗಿದೆ. ಏಪಿಬಿ (ಅಣೆಕಟ್ಟು ಪಿಕ್‌ಅಪ್) ಲೆಕ್ಕಶೀರ್ಷಿಕೆಗೆ ಆಯವ್ಯಯದಲ್ಲಿ ಹಂಚಿಕೆ ಮಾಡಲಾದ ಹಣ 120 ಕೋಟಿ ರೂಪಾಯಿಗಳು ಹೆಚ್ಚುವರಿಯಾಗಿ 335 ಕೋಟಿ ರೂಪಾಯಿಗಳ ಹಣವನ್ನು ಬಿಡುಗಡೆ ಮಾಡಲಾಗಿದೆ ಎಂದರು.ನಮ್ಮ ಇಲಾಖೆಯಲ್ಲಿ ಹಸ್ತಕ್ಷೇಪದ ಸಾಧ್ಯತೆಯೇ ಇಲ್ಲ. ಕಾಮಗಾರಿಗಳು ಸಕಾಲದಲ್ಲಿ ಮುಗಿಯಬೇಕು ಹಾಗೂ ಗುತ್ತಿಗೆದಾರರು ಗುಣಮಟ್ಟದಲ್ಲಿ ಕಾಮಗಾರಿ ಪೂರ್ಣಗೊಳಿಸಬೇಕು ಎನ್ನುವ ಉದ್ದೇಶದಿಂದ ನಾವು ಅನುದಾನದ ಲಭ್ಯತೆಯನ್ನು ನೋಡಿಕೊಂಡು ಹಣ ಬಿಡುಗಡೆ ಮಾಡುತ್ತಿದ್ದೇವೆ ಎಂದರು.

ಬಾಕಿ ಇರುವ ಎಲ್ಲಾ ಗುತ್ತಿಗೆದಾರರಿಗೂ ಹಣ ಬಿಡುಗಡೆ ಮಾಡಿರುವ ಹಿನ್ನಲೆಯಲ್ಲಿ ಜೇಷ್ಠತೆಯ ಪ್ರಶ್ನೆಯೇ ಉದ್ಭವವಾಗುವುದಿಲ್ಲ. ಜೇಷ್ಠತೆಯ ಆಧಾರದಲ್ಲಿ ಹಣ ಬಿಡುಗಡೆ ಮಾಡಿದ್ದಲ್ಲಿ ಇದುವರೆಗೂ ಲಭ್ಯವಾದಂತಹ ಹಣಕಾಸಿನ ಲಭ್ಯತೆಯಲ್ಲಿ ಕೇವಲ ಕೆಲವೇ ಗುತ್ತಿಗೆದಾರರು/ಕಾಮಗಾರಿಗೆ ಮಾತ್ರ ಹಣ ನೀಡಲು ಸಾಧ್ಯವಾಗುತ್ತಿತ್ತು. ಯಾವುದೇ ತಾರತಮ್ಯ ವಿಲ್ಲದೇ ಪಾರದರ್ಶಕತೆಯಿಂದ, ನಮ್ಮನ್ನು ಭೇಟಿಯಾದ ಹಾಗೂ ಭೇಟಿಯಾಗದೇ ಇರುವ ಎಲ್ಲಾ ಗುತ್ತಿಗೆದಾರರಿಗೂ ಸಮಾನವಾಗಿ ಹಣ ಬಿಡುಗಡೆ ಆಗಿದೆ ಎಂದು ತಿಳಿಸಿದರು. ರಾಜ್ಯ ಗುತ್ತಿಗೆದಾರರ ಸಂಘದ ಅಧ್ಯಕ್ಷರು ಮಾಡಿರುವಂತಹ ಆರೋಪಗಳು ಸತ್ಯಕ್ಕೆ ದೂರವಾಗಿವೆ. ಅಂತಹ ಘಟನೆಗಳು ಇದ್ದಲ್ಲಿ ಸಕ್ಷಮ ಪ್ರಾಧಿಕಾರದಲ್ಲಿ ದೂರು ಸಲ್ಲಿಸುವಂತೆಯೂ ತಿಳಿಸಲಾಗಿದೆ ಎಂದರು.



ಬೆಂಗಳೂರಿನ ಜೆ.ಸಿ. ರಸ್ತೆಯ ಸೇಂಟ್ ಥೆರೆಸಾ ಚರ್ಚ್‌ನಲ್ಲಿ ಶುಕ್ರವಾರ ಶುಭ ಶುಕ್ರವಾರ ಯೇಸುವಿನ ಶಿಲುಬೆಯ ಅಂತಿಮ ಪ್ರಯಾಣವನ್ನು ಪ್ರತಿಬಿಂಬಿಸುವ ಮೆರವಣಿಗೆ ನಡೆಯಿತು.

# ದಿನಗೂಲಿ ನೌಕರನ ಸೇವೆ ಕಾಯಂಗೊಳಿಸಲು ಅರಣ್ಯ ಇಲಾಖೆಗೆ ಹೈಕೋರ್ಟ್ ಆದೇಶ

ಬೆಂಗಳೂರು, ಏ.18– ದಿನಗೂಲಿ ಆಧಾರದಲ್ಲಿ ಬರೋಬ್ಬರಿ 30 ವರ್ಷಗಳ ಕಾಲ ಅರಣ್ಯ ವೀಕ್ಷಕ/ಚಾಲಕ ಉದ್ಯೋಗದಲ್ಲಿ ಕಾರ್ಯ ನಿರ್ವಹಿಸಿದ ದಿನಗೂಲಿ ನೌಕರ ನೋರ್ವನ ಸೇವೆ ಕಾಯಂಗೊಳಿಸಲು ರಾಜ್ಯ ಸರ್ಕಾರ ಮತ್ತು ಅರಣ್ಯ ಇಲಾಖೆಗೆ ಹೈಕೋರ್ಟ್ ಆದೇಶಿಸಿದೆ.

ಅಲ್ಲದೆ, ಮಂಜೂರಾತಿ ಹುದ್ದೆಯಲ್ಲಿ 10 ವರ್ಷಗಳ ಕಾಲ ನಿರಂತರವಾಗಿ ಕೆಲಸ ಮಾಡಿದ ಉದ್ಯೋಗಿಯ ಸೇವೆ ಖಾಯಮಾತಿಗೆ ಅರ್ಹನಾಗುತ್ತಾನೆ ಎಂದು ಮತ್ತೊಮ್ಮೆ ಪೀಠ ಸ್ಪಷ್ಟಪಡಿಸಿ ಆದೇಶ ಹೊರಡಿಸಿದೆ.

ತಮ್ಮ ಸೇವೆ ಕಾಯಂಗೊಳಿಸಲು ನಿರಾಕರಿಸಿ ಅರಣ್ಯ ಇಲಾಖೆ ನೀಡಿದ್ದ ಹಿಂಬರಹವನ್ನು ಪುರಸ್ಕರಿಸಿದ ಕರ್ನಾಟಕ ಆಡಳಿತಾತ್ಮಕ ನ್ಯಾಯಾಧೀಕರಣದ ಆದೇಶ ರದ್ದು ಪಡಿಸುವಂತೆ





ಕೋರಿ ಆನೇಕಲ್ ವಲಯದಲ್ಲಿ ಅರಣ್ಯ ವೀಕ್ಷಕ ಪಿ. ಜುಂಜಪ್ಪ (53) ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಕೃಷ್ಣ ಎಸ್. ದೀಕ್ಷಿತ್ ಮತ್ತು ನ್ಯಾಯಮೂರ್ತಿ ರಾಮಚಂದ್ರ ಡಿ. ಹುದ್ದಾರ್ ಅವರ ಪೀಠ ಈ ಆದೇಶ ಮಾಡಿದೆ.

ದಿನಗೂಲಿ ನೌಕರನಾಗಿರುವ ಜುಂಜಪ್ಪ ಅವರು ಕಾಯಂ ಉದ್ಯೋಗಿಗೆ ಸರಿ ಸಮಾನವಾಗಿ 30 ವರ್ಷ ನಿರಂತರವಾಗಿ ಅರಣ್ಯ ವೀಕ್ಷಕ/ಚಾಲಕ ಉದ್ಯೋಗದಲ್ಲಿ ಸೇವೆ ಸಲ್ಲಿಸಿದ್ದಾರೆ. ಅರಣ್ಯ ಇಲಾಖೆ ಆತನ ಸೇವೆ ಕಾಯಂ ಗೊಳಿಸುವುದಕ್ಕೆ ನಿರಾಕರಿಸಿರುವ ಜೊತೆಗೆ 30 ವರ್ಷ ನಿರಂತರವಾಗಿ ಆತ ಸಲ್ಲಿಸಿ ರುವ ಸೇವೆಯನ್ನು ಪರಿಗಣಿಸಿಲ್ಲ. ಜುಂಜಪ್ಪ ಅವರ ವೇತನ, ಸೇವಾ ದಾಖಲೆಗಳು ಮತ್ತು ಅರಣ್ಯ ಇಲಾಖೆಯ ಅಧಿಕೃತ ಪತ್ರ ವ್ಯವಹಾರಗಳನ್ನು ಮೌಲ್ಯಮಾಪನ ಮಾಡುವಲ್ಲಿ ಕೆಎಟಿ ವಿಫಲವಾಗಿದೆ.

ಔಪಚಾರಿಕ ನೇಮಕ ಪತ್ರವನ್ನು ಹಾಜರುಪಡಿಸಿಲ್ಲ ಎಂಬ ಏಕೈಕ ಅಂಶವು ನಿರಂತರವಾಗಿ ಸೇವೆ ಸಲ್ಲಿಸಿರುವ ಉದ್ಯೋಗಿಯ ಸೇವಾ ಕಾಯಂಮಾತಿಯ ಕಾನೂನುಬದ್ಧ ಹಕ್ಕನ್ನು ನಿರಾಕರಿಸುವುದಕ್ಕೆ ಆಧಾರವಾಗುವುದಿಲ್ಲ ಎಂದು ಪೀಠ ತನ್ನ ಆದೇಶದಲ್ಲಿ ತಿಳಿಸಿದ್ದು, ಜುಂಜಪ್ಪ ಅವರನ್ನು ಸೇವೆಗೆ ಕಾಯಂಗೊಳಿಸುವಂತೆ ರಾಜ್ಯ ಸರ್ಕಾರ ಹಾಗೂ ಅರಣ್ಯ ಇಲಾಖೆಗೆ ನಿರ್ದೇಶಿಸಿದೆ.

# ನ್ಯಾಯದಾನ ವ್ಯವಸ್ಥೆ: ಪೊಲೀಸ್, ನ್ಯಾಯಾಂಗ, ಜೈಲು ನಿರ್ವಹಣೆ, ಕಾನೂನು ನೆರವು ವಿಚಾರ: ರಾಜ್ಯ ನಂ.1: ಇಂಡಿಯಾ ಜಸ್ಟೀಸ್ ರಿಪೋರ್ಟ್

**ಬೆಂಗಳೂರು, ಏ.18–** ನ್ಯಾಯ ದಾನ ವ್ಯವಸ್ಥೆಗಳಾದ ಪೊಲೀಸ್, ನ್ಯಾಯಾಂಗ, ಜೈಲು ನಿರ್ವಹಣೆ ಮತ್ತು ಕಾನೂನು ನೆರವುಗಳ ವಿಚಾರದಲ್ಲಿ ಕರ್ನಾಟಕವು ಅಗ್ರಗಣ್ಯ ರಾಜ್ಯವಾಗಿ ಹೊರಹೊಮ್ಮಿದೆ ಎಂದು ಭಾರತ ನ್ಯಾಯ ವರದಿ 2025 ಇಂಡಿಯಾ ಜಸ್ಟೀಸ್ ರಿಪೋರ್ಟ್ ಹೇಳಿದೆ.





ದೇಶದ 18 ದೊಡ್ಡ ಮತ್ತು ಮಧ್ಯಮ ಗಾತ್ರದ ರಾಜ್ಯಗಳ ಪಟ್ಟಿಯಲ್ಲಿ ದಕ್ಷಿಣ ಭಾರತದ ರಾಜ್ಯಗಳು ಸ್ಪಷ್ಟ ಮೇಲುಗೈ ಸಾಧಿಸಿರುವುದನ್ನು ವರದಿಯು ಬಹಿರಂಗಗೊಳಿಸಿದೆ.

ಒಟ್ಟು 10 ಅಂಕಗಳ ಪೈಕಿ 6.78 ಅಂಕ ಪಡೆದಿರುವ ಕರ್ನಾಟಕ ಪ್ರಥಮ ಸ್ಥಾನದಲ್ಲಿದ್ದು, ನಂತರದ ಸ್ಥಾನದಲ್ಲಿ ಆಂಧ್ರಪ್ರದೇಶ, ತೆಲಂಗಾಣ, ಕೇರಳ, ತಮಿಳುನಾಡು ಬಳಿಕ ಉತ್ತರ ಭಾರತದ ರಾಜ್ಯಗಳು ಸ್ಥಾನ ಪಡೆದಿವೆ. ಪೊಲೀಸ್ ವ್ಯವಸ್ಥೆ ಕರ್ನಾಟಕವು 6.19, ಕಾರಾಗೃಹ ವ್ಯವಸ್ಥೆಗೆ 6.78, ನ್ಯಾಯಾಂಗ ಸೇವೆಗೆ 6.7 ಹಾಗೂ ಕಾನೂನು ನೆರವಿಗೆ 7.52 ಅಂಕ ಪಡೆದಿದೆ. ನ್ಯಾಯಾಂಗ ಸೇವಾ ವಿಭಾಗದಲ್ಲಿ 4ನೇ ಸ್ಥಾನ ಪಡೆದಿರುವ ಕರ್ನಾಟಕವು ಕಾನೂನು ನೆರವಿನ ವಿಚಾರದಲ್ಲಿ ಅಗ್ರಸ್ಥಾನಿಯಾಗಿದೆ. 2022ಕ್ಕೆ ಹೋಲಿಕೆ ಮಾಡಿದರೆ 2025ರಲ್ಲಿ ಜಿಲ್ಲಾ ನ್ಯಾಯಾಧೀಶರ ಖಾಲಿ ಹುದ್ದೆಗಳನ್ನು ಶೇ 22ರಿಂದ ಶೇ.16ಕ್ಕೆ ಇಳಿಕೆ ಮಾಡಲಾಗಿದೆ.

ಜಿಲ್ಲಾ ನ್ಯಾಯಾಲಯಗಳಲ್ಲಿ ಮಹಿಳಾ ನ್ಯಾಯಾಧೀಶರ ಪ್ರಮಾಣವು ಶೇ. 37ರಷ್ಟಿದೆ. ಹೈಕೋರ್ಟ್‌ನಲ್ಲಿ ಖಾಲಿ ಹುದ್ದೆಗಳ ಸಂಖ್ಯೆಯನ್ನು ಶೇ. 26ರಿಂದ ಶೇ.17ಕ್ಕೆ ಇಳಿಸಲಾಗಿದೆ. ನ್ಯಾಯಾಂಗ ನೇಮಕಾತಿಯಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಇತರೆ ಹಿಂದುಳಿದ ವರ್ಗಗಳ ಮೀಸಲಾತಿ ಹುದ್ದೆಗಳನ್ನು ತುಂಬಿದ ಏಕಮಾತ್ರ ರಾಜ್ಯ ಎಂಬ ಹೆಗ್ಗಳಿಕೆಗೂ ಕರ್ನಾಟಕ ಪಾತ್ರವಾಗಿದೆ. ಕಾನೂನು ನೆರವು ನೀಡುವುದಕ್ಕಾಗಿ ರಾಜ್ಯ ಕಾನೂನು ಸೇವಾ ಪ್ರಾಧಿಕಾರವು ಅತಿ ಹೆಚ್ಚು ಪ್ಯಾನಲ್ ವಕೀಲರನ್ನು ನೇಮಿಸಿದ್ದು, ಈ ವಿಭಾಗದಲ್ಲಿ ರಾಜ್ಯ ಅಗ್ರಸ್ಥಾನ ದಲ್ಲಿದೆ. ಇಂಡಿಯಾ ಜಸ್ಟೀಸ್ ವರದಿಯನ್ನು ಟಾಟಾ ಟ್ರಸ್ಟ್ ಸಂಸ್ಥೆಯು ಬಿಡುಗಡೆಗೊಳಿಸುತ್ತದೆ. ವಿವಿಧ ಕಾನೂನು ಸೇವಾ ಹಾಗೂ ಸಾಮಾಜಿಕ ಸೇವಾ ಸಂಸ್ಥೆಗಳು ವರದಿಯನ್ನು ರೂಪಿಸುವಲ್ಲಿ ಶ್ರಮಿಸುತ್ತವೆ. ಪ್ರಸ್ತುತ ವರದಿಯ ನಾಲ್ಕನೇ ಆವೃತ್ತಿಯಾಗಿದೆ.

# ಹೊಸ ಪಕ್ಷ ಕಟ್ಟುವ ಮನಸ್ಸಿದೆ ಸಿ.ಎಂ.ಇಬ್ರಾಹಿಂ ಸ್ಪಷ್ಟನೆ

**ಬೆಂಗಳೂರು, ಏ.18–** ಜೆಡಿಎಸ್‌ನಿಂದ ಈಗಾಗಲೇ ಉಚ್ಚಾಟನೆಗೊಂಡಿರುವ ಮಾಜಿ ಸಚಿವ ಸಿ.ಎಂ. ಇಬ್ರಾಹಿಂ ಅವರು ಕಾಂಗ್ರೆಸ್‌ಗೆ ಸೇರುತ್ತಾರಾ ಇಲ್ಲವೇ ಹೊಸ ಪ್ರಾದೇಶಿಕ ಪಕ್ಷ ಕಟ್ಟುತ್ತಾರಾ ಎಂಬ ಚರ್ಚೆಗಳು ಈ ಮೊದಲು ಸದ್ದು ಮಾಡಿದ್ದು ಗೊತ್ತೇ ಇದೆ. ಈ ಕುರಿತು ಖುದ್ದು ಇಬ್ರಾಹಿಂ ಅವರು ಇದೀಗ ಮತ್ತೊಮ್ಮೆ ಸ್ಪಷ್ಟನೆ ನೀಡಿದ್ದು, ರಾಜ್ಯದಲ್ಲಿ ಈಗಾಗಲೇ ಪ್ರವಾಸವನ್ನು ಮಾಡುತ್ತಿದ್ದೇನೆ. ಮೂರನೇ ಶಕ್ತಿ ಬಗ್ಗೆ ಯೋಚನೆ ನಡೆಯುತ್ತಿದೆ. ಹೊಸ ಪಕ್ಷ ಕಟ್ಟುವ ಮನಸ್ಸಿದೆ ಎಂದರು.

ಮನಸ್ಸಿನಿಂದ ನಾನು ನಿಚ್ಚಳವಾಗಿದ್ದೇನೆ. ಸದ್ಯ ಕಾಂಗ್ರೆಸ್ ಸೇರುವ ಪ್ರಶ್ನೆಯಿಲ್ಲ. ನಾನು ಎಲ್ಲಾ ಅಧಿಕಾರವನ್ನು ನೋಡಿದ್ದೇನೆ. ನನಗೆ ಜನ ಹಿತ ಮುಖ್ಯ. ಹೀಗಾಗಿ ಹೊಸ ಪಕ್ಷ ಕಟ್ಟುವ ಮನಸ್ಸಿದೆ. ಕರ್ನಾಟಕ



ರಾಜ್ಯದಲ್ಲಿ ಮೂರನೇ ಶಕ್ತಿ ಕಟ್ಟುವ ಸಾಧ್ಯವಿದೆಯಾ ಎಂದು ಅರಿಯಲು ಪ್ರವಾಸ ಮಾಡುತ್ತಿದ್ದೇನೆ. ನಂತರ ಹೊಸ ಪಕ್ಷ ಕಟ್ಟುವ ತೀರ್ಮಾನಕ್ಕೆ ಬರುತ್ತೇನೆ ಎಂದು ಸ್ಪಷ್ಟಪಡಿಸಿದರು.

ಅತ್ತ ಜೆಡಿಎಸ್ ನವರು ಪಾಪ ಬಿಜೆಪಿಯ ಬಸ್‌ಸ್ಟ್ಯಾಂಡ್‌ನಲ್ಲಿ ಕುಳಿತಿದ್ದಾರೆ. ದಳದವರಿಗೆ ಬಿಜೆಪಿಯವರು ಬಸ್ಸಿನಲ್ಲಿ ಕರೆದುಕೊಂಡು ಹೋಗದೇ ಬಸ್‌ಸ್ಟ್ಯಾಂಡ್‌ನಲ್ಲೇ ಬಿಟ್ಟು ಹೋಗಿದ್ದಾರೆ ಎಂದು ಇಬ್ರಾಹಿಂ ವ್ಯಂಗ್ಯವಾಡಿದರು.

# ಪರವಾನಗಿ ನಿಯಮ ಉಲ್ಲಂಘನೆ: 100 ಪೇಯಿಂಗ್ ಗೆಸ್ಟ್ ಅಡುಗೆಮನೆಗೆ ಬೀಗ

**ಬೆಂಗಳೂರು, ಏ.18–** ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಹದೇವಪುರ ವಲಯದ ಆರೋಗ್ಯ ಅಧಿಕಾರಿಗಳು ಪಟ್ಟಣ ಯೋಜನೆ ಮತ್ತು ಪರವಾನಗಿ ನಿಯಮಗಳನ್ನು ಉಲ್ಲಂಘಿಸಿದ್ದಾರೆ ಎಂದು ಆರೋಪಿಸಿ, 100 ಪೇಯಿಂಗ್ ಗೆಸ್ಟ್ ವಸತಿಗೃಹಗಳ ಅಡುಗೆ ಮನೆಗಳಿಗೆ ಬೀಗ ಹಾಕಿದ್ದಾರೆ.

ಈ ಕ್ರಮದಿಂದಾಗಿ ಬೆಂಗಳೂರಿನಲ್ಲಿ ಅನೇಕ ಪಿಜಿಗಳು ಖಾಲಿಯಾಗಿವೆ. ಪಿಜಿಯನ್ನು ವಸತಿಯನ್ನು ನಂಬಿಕೊಂಡಿದ್ದವರಿಗೆ ಆಘಾತವಾಗಿದೆ. ಬಿಬಿಎಂಪಿ ಆರೋಗ್ಯ ಆಯುಕ್ತ ಸುರಲ್ಕರ್ ವಿಕಾಸ್ ಕಿಶೋರ್, ಪಿಜಿ ನಿರ್ವಾಹಕರು ಕಟ್ಟಡದ ಬೈಲಾಗಳನ್ನು ಉಲ್ಲಂಘಿಸುತ್ತಿದ್ದಾರೆ ಎಂದು ಹೇಳಿದ್ದಾರೆ. ಇದು 40 ಅಡಿಗಿಂತ ಕಡಿಮೆ ರಸ್ತೆ ಅಗಲವಿರುವ ವಸತಿ ಪ್ರದೇಶಗಳಲ್ಲಿ ವಾಣಿಜ್ಯ ಚಟುವಟಿಕೆಯನ್ನು ನಿಷೇಧಿಸುತ್ತದೆ. ಹಲವಾರು ಪಿಜಿಗಳು ಕಾರ್ಯ ನಿರ್ವಹಿಸಲು ಅಗತ್ಯವಾದ ಪರವಾನಗಿಗಳ ಕೊರತೆಯನ್ನು ಸಹ ಗಮನಿಸಿದ್ದಾರೆ. ಕೆಲವು ಪಿಜಿ ಸಂಘಗಳು ತಮ್ಮ ಕಟ್ಟಡಗಳು ವಸತಿ ಪ್ರದೇಶಗಳ ಅಡಿಯಲ್ಲಿ ಬರುತ್ತವೆ. ಆದ್ದರಿಂದ ಅವುಗಳನ್ನು ನಡೆಸಲು ಅನುಮತಿ ನೀಡಬೇಕು ಎಂದು ಹೇಳಿಕೊಂಡಿವೆ. ನಾವು ದಾಖಲೆಗಳನ್ನು ಸಹ ಪರಿ



ಶೀಲಿಸುತ್ತೇವೆ ಎಂದು ಕಿಶೋರ್ ಹೇಳಿದರು.

ಪಿಜಿಗಳಿಗೆ ಬೀಗ ಹಾಕುವ ಅಭಿಯಾನದ ನಂತರ, ಪಿಜಿಗಳು ನಗರಾಭಿವೃದ್ಧಿ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಯನ್ನು ಸಂಪರ್ಕಿಸಿ, ಅವರ ಹಸ್ತಕ್ಷೇಪವನ್ನು ಒತ್ತಾಯಿಸಿ ದರು. ಹಾಸ್ಟೆಲ್‌ಗಳು, ಅಪಾರ್ಟ್‌ಮೆಂಟ್‌ಗಳು ಮತ್ತು ಧರ್ಮಶಾಲೆಗಳನ್ನು ವಸತಿ ವರ್ಗದ ಅಡಿಯಲ್ಲಿ ವರ್ಗೀಕರಿಸುವ 2015 ರ ಗೆಜೆಟ್ ಅಧಿಸೂಚನೆಯನ್ನು ಅವರು ಉಲ್ಲೇಖಿಸಿದ್ದಾರೆ.

ವಿದ್ಯಾರ್ಥಿಗಳು, ಕೆಲಸ ಮಾಡುವ ಮಹಿಳೆಯರು ಮತ್ತು ನರ್ಸಿಂಗ್ ಸಿಬ್ಬಂದಿಗೆ ವಸತಿ ಗೃಹಗಳನ್ನು ವಸತಿ ಎಂದು ಪರಿಗಣಿಸಲಾಗುತ್ತದೆ ಎಂಬ ಜಿಎಸ್‌ಟಿ ಕೌನ್ಸಿಲ್ ಸಲ್ಲಿಸಿದ ಅರ್ಜಿ ಯನ್ನು ಸಹ ಸಂಘಗಳು ಉಲ್ಲೇಖಿಸಿವೆ. ಈ ಕ್ರಮವು ಪಿಜಿ ನಿವಾಸಿಗಳ ದೈನಂದಿನ ಜೀವನದ ಮೇಲೆ ತೀವ್ರ ಪರಿಣಾಮ ಬೀರಬಹುದು. ಈ ವಿಷಯವನ್ನು ಪರಿಶೀಲಿಸುವಂತೆ ಯುಡಿಡಿ ಬಿಬಿಎಂಪಿಗೆ ನಿರ್ದೇಶನ ನೀಡಿದೆ. ನಮ್ಮ ಪರಿಸ್ಥಿತಿಯನ್ನು ವಿವರಿಸಲು ಮತ್ತು ವಸತಿ ಪ್ರದೇಶಗಳಲ್ಲಿ ಪಿಜಿಗಳನ್ನು ಅನುಮತಿಸುವ ನಿಯಮಗಳನ್ನು ಪ್ರಸ್ತುತಪಡಿಸಲು ನಾವು ಮುಂದಿನ ಸೋಮವಾರ ಬಿಬಿಎಂಪಿ ಆರೋಗ್ಯ ಆಯುಕ್ತರನ್ನು ಭೇಟಿ ಮಾಡುತ್ತೇವೆ ಎಂದು ಬೆಂಗಳೂರಿನ ಪೇಯಿಂಗ್ ಗೆಸ್ಟ್ ಹಾಸ್ಟೆಲ್‌ಗಳ ಕಲ್ಯಾಣ ಸಂಘದ ಜಂಟಿ ಕಾರ್ಯದರ್ಶಿ ಅರ್ಜುನ್ ಬೆಲ್ಲಂ ಹೇಳುತ್ತಾರೆ.ಮಹಿಳಾ ಹಾಸ್ಟೆಲ್‌ಗಳ ಹೆಚ್ಚಿನ ನಿವಾಸಿಗಳು ಸಾರ್ವಜನಿಕ ಸಾರಿಗೆ ಅಥವಾ ಸವಾರಿ–ಹಂಚಿಕೆ ಸೇವೆ ಗಳನ್ನು ಬಳಸುತ್ತಾರೆ. ಆದ್ದರಿಂದ, ಪಾರ್ಕಿಂಗ್ ವ್ಯವಸ್ಥೆಗಳು ಕಡ್ಡಾಯವಾಗಿರಬಾರದು ಎಂದು ಸಂಘವು ವಾದಿಸಿದೆ.


ನಾವು ವಸತಿ ವ್ಯವಹಾರವನ್ನು ಮಾತ್ರ ನಡೆಸುತ್ತಿದ್ದೇವೆ. ಉಲ್ಲಂಘನೆಗಳಿಗಾಗಿ ಕಟ್ಟಡ ಮಾಲೀಕರಿಗೆ ನೋಟಿಸ್‌ಗಳನ್ನು ನೀಡಬೇಕು, ನಮಗಲ್ಲ ಎಂದು ಸಂಘದ ಸದಸ್ಯರೊಬ್ಬರು ಹೇಳುತ್ತಾರೆ. ಆಹಾರವನ್ನು ಪೂರೈಸಲು ನಾವು ಈಗ ಇತರ ಅಡುಗೆ ಮನೆಗಳಿಂದ ಆಹಾರವನ್ನು ವ್ಯವಸ್ಥೆ ಮಾಡಬೇಕಾಗಿದೆ ಎಂದು ಅವರು ಹೇಳುತ್ತಾರೆ.

# ಅಭಾಸಾಪ– ನಾಕುತಂತಿ ಷಷ್ಟಿಪೂರ್ತಿ ನಾದ–3 ವಿಶೇಷ ವ್ಯಾಖ್ಯಾನ ಕಾರ್ಯಕ್ರಮಕ್ಕೆ ಆಹ್ವಾನ

ಕನ್ನಡಕ್ಕೆ ಎಂಟು ಜ್ಞಾನಪೀಠ ಪ್ರಶಸ್ತಿಗಳು ಬಂದಿವೆ ಎಂಬುದನ್ನು ಕನ್ನಡಿಗರು ಎಲ್ಲೆಡೆ ಹೆಮ್ಮೆಯಿಂದ ಹೇಳಿಕೊಳ್ಳುತ್ತೇವೆ. 1964ರಲ್ಲಿ ಡಾ. ದತ್ತಾತ್ರೇಯ ರಾಮಚಂದ್ರ ಬೇಂದ್ರೆಯವರು ರಚಿಸಿದ "ನಾಕುತಂತಿ" ಕೃತಿಗೆ 1974ರಲ್ಲಿ ಜ್ಞಾನಪೀಠ ಲಭಿಸಿದೆ ಎನ್ನುವುದು ತಿಳಿದ ವಿಚಾರವೆ. ಈ ಕೃತಿ ರಚನೆಯಾಗಿ ಅರವತ್ತು ವರ್ಷಗಳಾಗಿದ್ದು, ಜ್ಞಾನಪೀಠ ಪುರಸ್ಕೃತಗೊಂಡು ಐವತ್ತು ವರ್ಷ ತುಂಬುತ್ತಿದೆ. ಈ ನೆನಪಿಗೆ ಅಖಿಲ ಭಾರತೀಯ ಸಾಹಿತ್ಯ ಪರಿಷದ್‌ನ ಬೆಂಗಳೂರು ಮಹಾನಗರ ಘಟಕದ ವತಿಯಿಂದ ?ನಾಕುತಂತಿ ಷಷ್ಟಿಪೂರ್ತಿ? ಸಂಭ್ರಮಾಚರಣೆಯನ್ನು ವರ್ಷವಿಡೀ ಆಚರಿಸಲು ತೀರ್ಮಾನಿಸಿದೆ. ಹೆಸರಾಂತ ಇತಿಹಾಸಕಾರರೂ ವಿಮರ್ಶಕರೂ ಆದ ಡಾ. ಜಿ. ಬಿ. ಹರೀಶರ ಉಪಸ್ಥಿತಿಯಲ್ಲಿ ಈ ಕಾರ್ಯಕ್ರಮಗಳು ನಡೆಯಲಿವೆ. ಮುಂದಿನ 12 ತಿಂಗಳು ಬೆಂಗಳೂರಿನ ವಿವಿಧೆಡೆಗಳಲ್ಲಿ ಒಂದೊಂದು ಕಾರ್ಯಕ್ರಮಗಳನ್ನು ಮಾಡಲಾಗುತ್ತದೆ.

ಡಾ.ಜಿ.ಬಿ.ಹರೀಶ ರವರು ನಾಕುತಂತಿಯ ಆಯ್ದ ಕವನಗಳ ಪರಿಚಯ ಹಾಗೂ ವಿಶ್ಲೇಷಣೆಯನ್ನು ನಡೆಸಿಕೊಡುತ್ತಾರೆ. ಪ್ರಮುಖವಾಗಿ ನಾಕುತಂತಿ ಸಾಹಿತ್ಯದಲ್ಲಿ ಸಂಸ್ಕೃತಿ, ತತ್ವಶಾಸ್ತ್ರ ಮತ್ತು ಅಧ್ಯಾತ್ಮದ ಹಿನ್ನೆಲೆ ಪರಿಚಯವನ್ನು ಈ ಸರಣಿಯ ಮುಖಾಂತರ ಮಾಡಲಾಗುತ್ತದೆ. ಇದು ಸಾಹಿತ್ಯಾಭ್ಯಾಸಿಗಳಿಗೆ ಕವನಗಳ ಒಳಗನ್ನು ತೆರೆದಿಟ್ಟು ಕಾವ್ಯಪ್ರಪಂಚಕ್ಕೆ ಆತ್ಮವಿಶ್ವಾಸದ ಪ್ರವೇಶಕ್ಕೆ ಅನುವಾಗುತ್ತದೆ. ಜತೆಗೆ ಇಂದಿನ ಪೀಳಿಗೆಗೆ ಬೇಂದ್ರೆಯವರ ಕಾವ್ಯ, ಸಂಸ್ಕೃತಿ ಮತ್ತು ಆಧ್ಯಾತ್ಮ ಪರಿಚಯಿಸುವ ಸದುದ್ದೇಶವನ್ನು ಹೊಂದಿದೆ.

ಈ ಸರಣಿಯ ಮೂರನೇ ಕಾರ್ಯಕ್ರಮವನ್ನು ದಿನಾಂಕ 18 ಏಪ್ರಿಲ್ 2025, ಶನಿವಾರದಂದು ಸಂಜೆ 4:30 ಗಂಟೆಗೆ ಬೆಂಗಳೂರಿನ ಬನಶಂಕರಿಯಲ್ಲಿರುವ ಸುಚಿತ್ರ ಫಿಲ್ಮ್ ಸೋಸೈಟಿಯ ಸಭಾಂಗಣದಲ್ಲಿ ಆಯೋಜಿಸಲಾಗಿದೆ. ಕಾರ್ಯಕ್ರಮದಲ್ಲಿ ಕವಿ, ಕಾದಂಬರಿಕಾರ ಡಾ. ಜಿ.ಬಿ. ಹರೀಶ ಅವರು ನಾಕುತಂತಿ ಕವನದ ವಿಶೇಷ ವ್ಯಾಖ್ಯಾನವನ್ನು ನಡೆಸಿಕೊಡಲಿದ್ದಾರೆ. ಖ್ಯಾತ ಹಾಸ್ಯ ಬರಹಗಾರರು ಹಾಗೂ ಅಖಿಲ ಭಾರತೀಯ ಸಾಹಿತ್ಯ ಪರಿಷದ್, ಬೆಂಗಳೂರು ಮಹಾನಗರದ ಅಧ್ಯಕ್ಷರಾದ



ಎಂ.ಎಸ್. ನರಸಿಂಹಮೂರ್ತಿಯವರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಲಿದ್ದಾರೆ. ಖ್ಯಾತ ಸುಗಮ ಸಂಗೀತ ಗಾಯಕಿ ರಮ್ಯ ವಸಿಷ್ಠ ಅವರು ಬೇಂದ್ರೆ ಗೀತಗಾಯನವನ್ನು ನಡೆಸಿಕೊಡಲಿದ್ದಾರೆ.




ವಕ್ಫ್ (ತಿದ್ದುಪಡಿ) ಕಾಯ್ದೆಯ ವಿರುದ್ಧ ಶುಕ್ರವಾರ ಅಡ್ಯಾರ್ ಮಂಗಳೂರಿನ ಕಣ್ಣೂರು ಶಾ ಗಾರ್ಡನ್‌ನಲ್ಲಿ ನಡೆದ ಪ್ರತಿಭಟನೆಯಲ್ಲಿ ದಕ್ಷಿಣ ಕನ್ನಡ ಮತ್ತು ಉಡುಪಿಯ ಜನರು ಭಾಗವಹಿಸಿದ್ದರು.

### ನೇಹಾ ಹಿರೇಮಠ್ ಕೊಲೆ ಪ್ರಕರಣ

## ವರ್ಷ ಕಳೆದರೂ ನ್ಯಾಯ ಸಿಕ್ಕಿಲ್ಲ: ಪೋಷಕರ ಕಣ್ಣೀರು

**ಹುಬ್ಬಳ್ಳಿ, ಏ.18–** ನೇಹಾ ಹಿರೇಮಠ್ ಕೊಲೆ ಪ್ರಕರಣ ನಡೆದು ಒಂದು ಏ. 18 ಕ್ಕೆ ಒಂದು ವರ್ಷ ಕಳೆದಿದೆ. 2024 ರ ಏ. 18 ರಂದು ಹತ್ಯೆ ನಡೆದು ಒಂದು ವರ್ಷ ಕಳೆದರೂ ಇನ್ನೂ ನ್ಯಾಯ ಸಿಕ್ಕಿಲ್ಲ ಎಂದು ಪೋಷಕರು ಕಣ್ಣೀರಿಟ್ಟಿದ್ದಾರೆ. ಬೇರೆ ರಾಜ್ಯಗಳಲ್ಲಿ ಕೊಲೆ ಆರೋಪಿಗಳಿಗೆ ತ್ವರಿತ ಶಿಕ್ಷೆಯಾಗುತ್ತದೆ. ಆದರೆ ನಮ್ಮಲ್ಲಿ ಮಾತ್ರ ಹತ್ಯೆ ನಡೆದು ಒಂದು ವರ್ಷ ಕಳೆದರೂ ಆರೋಪಿ ಜೈಲಿನಲ್ಲಿ ಆರಾಮಾಗಿ ಇದ್ದಾನೆ ಎಂದು ನೇಹಾ ಪೋಷಕರು



ಅಳಲು ತೋಡಿಕೊಂಡಿದ್ದಾರೆ. ಫಯಾಜ್ ಎಂಬಾತ ಕಳೆದ ಏ. 18 ರಂದು ಕಾಲೇಜು ಆವರಣದಲ್ಲಿಯೇ ನೇಹಾ ಹಿರೇಮಠ್ ಗೆ ಚಾಕುವಿನಿಂದ ಪದೇ ಪದೇ ಚುಚ್ಚಿ ಭೀಕರವಾಗಿ ಹತ್ಯೆಗೈದಿದ್ದ.ಈ ಪ್ರಕರಣದ ತನಿಖೆ ನಡೆಸಿದ ಸಿಐಡಿ ತನ್ನ ವರದಿ ಸಲ್ಲಿಸಿದೆ. ಆರೋಪ ಪಟ್ಟಿ ಕೂಡ ಸಲ್ಲಿಕೆಯಾಗಿದೆ. ಆದರೂ ಸಹ ನ್ಯಾಯಾಲಯದಲ್ಲಿ ಟ್ರಯಲ್ ನಡೆಸಲು ಶುರು ಮಾಡಿಲ್ಲ. ನಾವು ಮಗಳನ್ನು ಕಳೆದುಕೊಂಡ ದುಃಖ ದಲ್ಲಿದ್ದರೆ ಆರೋಪಿ ಜೈಲಿನಲ್ಲಿ ಆನಂದವಾಗಿ ಕಾಲ ಕಳೆಯುತ್ತಿದ್ದಾನೆಂದು ನೇಹಾ ಪೋಷಕರು ಕಿಡಿಕಾರಿದ್ದಾರೆ.

## ಏ.26ರಂದು ಈಡುಗಾಯಿ ಒಡೆಯುವ ಚಳವಳಿಗೆ ವಾಟಾಳ್ ನಾಗರಾಜ್ ಕರೆ

**ಮಂಡ್ಯ, ಏ.18–** ಇದೇ 26ರಂದು ರಾಜ್ಯಾದ್ಯಂತ ಈಡುಗಾಯಿ ಒಡೆಯುವ ಚಳವಳಿಗೆ ಕರೆ ನೀಡಲಾಗಿದ್ದು, ಈ ಹೋರಾಟವನ್ನು ಬೆಂಬಲಿಸುವಂತೆ ರಾಜ್ಯದ ಜನತೆಯಲ್ಲಿ ಕನ್ನಡಪರ ಹೋರಾಟಗಾರ ವಾಟಾಳ್ ನಾಗರಾಜ್ ಮನವಿ ಮಾಡಿದ್ದಾರೆ.

ಮಂಡ್ಯದಲ್ಲಿಂದು ಸಾಂಕೇತಿಕವಾಗಿ ಈಡುಗಾಯಿ ಒಡೆದು ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, "ಅನೇಕ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಈ ಹೋರಾಟ ಮಾಡಲಾಗುತ್ತಿದೆ. ಉತ್ತರ ಕರ್ನಾಟಕದ ಅಭಿವೃದ್ಧಿ ಬಗ್ಗೆ ನಿರಂತರವಾಗಿ ಒತ್ತಾಯಿಸಿಕೊಂಡು ಬರಲಾಗುತ್ತಿದೆ. 1956ರಲ್ಲಿ ಕರ್ನಾಟಕ ಏಕೀಕರಣ ಸಂದರ್ಭದಿಂದಲೂ ಹೋರಾಟ ಮಾಡಲಾಗಿತ್ತು. ಬಂದರುಗಳ ಬೆಳವಣಿಗೆ, ಅಭಿವೃದ್ಧಿ ಸೇರಿದಂತೆ ಹಲವು ಬೇಡಿಕೆಗಳು ಬೇಡಿಕೆಗಳಾಗಿಯೇ ಉಳಿದಿವೆ. ಬೆಳಗಾವಿಯಲ್ಲಿ ಅಧಿವೇಶನ ನಡೆದರೂ ಪ್ರಯೋಜನವಾಗಿಲ್ಲ. ಒಇಖ ನಿಷೇಧಕ್ಕೆ ಹಲವು ವರ್ಷಗಳಿಂದ ಹೋರಾಟ ಮಾಡಿಕೊಂಡು ಬರಲಾಗುತ್ತಿದೆ. MES ಗಡಿನಾಡಿಗೆ ಮಾರಕ. ಅದರ ನಿಷೇಧ ಈವರೆಗೂ ಆಗಿಲ್ಲ. ಕಳಸಾ ಬಂಡೂರಿ, ಮೇಕೆದಾಟು ಕೂಡ ಜಾರಿಯಾಗಿಲ್ಲ. ಪರಭಾಷಿಕರ ಹಾವಳಿ ಎಲ್ಲೆಡೆ ಹೆಚ್ಚಾಗಿದೆ. ಪರಭಾಷಿಕರಿಂದ ಅಪರಾಧ ಕೃತ್ಯಗಳು ಹೆಚ್ಚಳ ಹಿನ್ನೆಲೆಯಲ್ಲಿ ಸರ್ಕಾರ ಈ ಬಗ್ಗೆ ಗಂಭೀರ ಚಿಂತನೆ ಮಾಡಬೇಕು" ಎಂದು ಹೇಳಿದರು.

ಸರೋಜಿನಿ ಮಹಿಷಿ ವರದಿ ಜಾರಿಯಾಗಿಲ್ಲ, ಕನ್ನಡಿಗರಿಗೆ ಉದ್ಯೋಗದ ಬಗ್ಗೆ ಕ್ರಮ ಕೈಗೊಂಡಿಲ್ಲ, ಐಟಿ–ಬಿಟಿ ಒತ್ತಾಯಕ್ಕೆ ಮಸೂದೆ ಜಾರಿಯಾಗಿಲ್ಲ, ಕರ್ನಾಟಕದಲ್ಲಿ ಈ ಬಗ್ಗೆ ಗಂಭೀರ ಚಿಂತನೆ ಮಾಡಬೇಕಿದೆ. ಕಳೆದ 22ರಂದು ಬಂದ್ ಕರೆ ಕೊಟ್ಟಿದ್ದೆವು. ಮಂಡ್ಯದಲ್ಲಿ ಬಂದ್‌ಗೆ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಯಿತು. ಹಾಗಾಗಿ ಮಂಡ್ಯ ಜನಕ್ಕೆ ಧನ್ಯವಾದ ಹೇಳುತ್ತೇನೆ. ಇದೇ 26ಕ್ಕೆ ರಾಜ್ಯದ ಉದ್ದಗಲಕ್ಕೂ ಕನ್ನಡಿಗರ ಬೇಡಿಕೆ ಈಡೇರಿಕೆಗಾಗಿ ಈಡುಗಾಯಿ ಒಡೆಯುವ ಚಳವಳಿ ನಡೆಸಲಾಗುತ್ತಿದೆ. ಕನಿಷ್ಠ ಎರಡು ಕೋಟಿ ಈಡುಗಾಯಿ ಒಡೆಯುವ ಪ್ರಯತ್ನ ಮಾಡಿದ್ದೇವೆ" ಎಂದು ತಿಳಿಸಿದರು.

ಜಾತಿ ಗಣತಿ ಚರ್ಚೆ ವಿಚಾರವಾಗಿ ಮಾತನಾಡಿ, "ನಾನು ಇವತ್ತಿನವರೆಗೂ ಜಾತಿ ಬಗ್ಗೆ ಮಾತಾಡಿಲ್ಲ. ಅದನ್ನು ಯಾಕೆ ಮಾಡಲು ಹೊರಟಿದ್ದಾರೋ ಗೊತ್ತಿಲ್ಲ. ರಾಜ್ಯ ಉದಯವಾಗಿದ್ದು ಭಾಷೆ ಮೇಲೆ. ಮೈಸೂರಿನಲ್ಲಿ ಸಮಗ್ರ ಕರ್ನಾಟಕ ಆಗಬೇಕು ಎಂದಿದ್ದು ಕುವೆಂಪು. ಇವತ್ತು ಜಾತಿಯ ಕರ್ನಾಟಕ ಆಗ್ತಿದೆ. ನಾವು ಬಹಳ ಗಂಭೀರವಾಗಿ ಇರಬೇಕಿದೆ. ಬಸವಣ್ಣ, ಕನಕದಾಸರ ಸಂದೇಶಗಳನ್ನು ಅರ್ಥ ಮಾಡಿಕೊಳ್ಳಬೇಕು. ಒಂದು ಪಕ್ಷ ಅಲ್ಲ, ಎಲ್ಲಾ ಪಕ್ಷಗಳೂ ಜಾತಿ ಹಿಂದೆ ಬಿದ್ದಿವೆ. ಸಿದ್ದರಾಮಯ್ಯನವರೇ ಕರ್ನಾಟಕದ ಕೊನೆಯ ಕೊಂಡಿ. ಸಿದ್ದರಾಮಯ್ಯ ನಂತರ ರಾಜ್ಯದಲ್ಲಿ



ಏನಾಗುತ್ತೋ ಗೊತ್ತಿಲ್ಲ. ಮುಂದೆ ಬರುವವರು ಯಾವ ಯಾವ ಆಧಾರದಲ್ಲಿ ಅಧಿಕಾರಕ್ಕೆ ಬರುತ್ತಾರೋ ಗೊತ್ತಿಲ್ಲ" ಎಂದು ತಿಳಿಸಿದರು.

"ಸದನದಲ್ಲಿ ಹನಿಟ್ರ್ಯಾಪ್ ಬಗ್ಗೆ ಚರ್ಚೆ ಮಾಡ್ತಾರೆ. ಇದ್ದರೇ ನಿಮ್ಮ ಮನೆಯಲ್ಲಿ ಚರ್ಚೆ ಮಾಡಿ. ಶಾಸನ ಸಭೆಯಲ್ಲಿ ಈ ವಿಷಯ ಚರ್ಚೆ ಬೇಕಾ? ಶಾಸನಸಭೆಯ ಗಂಭೀರತೆ ಏನಾಗಬೇಕು ಎಂದು ಪ್ರಶ್ನಿಸಿದ ವಾಟಾಳ್ ನಾಗರಾಜ್, ವಿಧಾನಸಭೆ, ಪರಿಷತ್ತಿನ ಘನತೆ, ಗಾಂಭೀರ್ಯ ಕುಸಿಯುತ್ತಿದೆ. ಮೇಧಾವಿಗಳ ನಾಮಕರಣ ಆಗುತ್ತಿಲ್ಲ. ಎಲ್ಲರೂ ದುಡ್ಡಿನ ಮೇಲೆ ಅಧಿಕಾರಕ್ಕೆ ಬರುವವರೇ ಆಗಿದ್ದಾರೆ. ವಿಧಾನಪರಿಷತ್ತು ವ್ಯಾಪಾರೀಕರಣ ಆಗ್ತಿದೆ. ಇವಾಗ ನಾಲ್ಕು ಸ್ಥಾನಗಳಿಗೆ ನಾಮಕರಣ ಆಗಬೇಕಿದೆ. ಅವನ್ನೂ ಹಂಚಿಕೆ ಮಾಡಿಕೊಳ್ತಾರೆ. ವ್ಯಾಪಾರೀಕರಣ, ಜಾತೀಕರಣದ ಮೇಲೆ ಆಯ್ಕೆ ಆಗುತ್ತಿದೆ. ಹನಿಟ್ರ್ಯಾಪ್ ಬಗ್ಗೆ ಚರ್ಚೆ ಮಾಡ್ತೀರಲ್ಲ, ಕರ್ನಾಟಕದ ಅಭಿವೃದ್ಧಿ ಬಗ್ಗೆ ಒಂದು ದಿನವಾದ್ರೂ ಚರ್ಚೆ ಮಾಡಿದ್ರಾ ಎಂದು ವಾಟಾಳ್ ಕಿಡಿಕಾರಿದರು.

### ಅಕ್ರಮ ಮರಳು ಗಣಿಗಾರಿಕೆ ಸ್ಥಳಕ್ಕೆ ಬಿವೈವಿ ಭೇಟಿ

## ರಿಪಬ್ಲಿಕ್ ಆಫ್ ಖರ್ಗೆ ಆಗಿದೆ–ಇಲ್ಲಿ ಅವರಾಡಿದ್ದೇ ಆಟ: ಬಿ. ವೈ. ವಿಜಯೇಂದ್ರ

**ಕಲಬುರಗಿ, ಏ.18–** ಕಲಬುರಗಿ ಜಿಲ್ಲೆ ಎಂದರೆ ರಿಪಬ್ಲಿಕ್ ಆಫ್ ಖರ್ಗೆ ಎಂಬಂತಾಗಿದೆ. ಇಲ್ಲಿ ಅವರು ಆಡಿದ್ದೇ ಆಟ. ವ್ಯಾಪಕವಾಗಿ ಅಕ್ರಮ ಗಣಿಗಾರಿಕೆ ನಡೆಯುತ್ತಿದೆ. ಇದನ್ನು ಪ್ರಶ್ನಿಸಿದವರೆ ಮೇಲೆ ಎಫ್‌ಐಆರ್ ದಾಖಲಿಸುವ ಮೂಲಕ ಅಧಿಕಾರ ದುರುಪಯೋಗ ಪಡಿಸಿಕೊಂಡು ಹೋರಾಟದ ಹತ್ತಿಕ್ಕುವ ಮತ್ತು ಪೊಲೀಸ್ ಬೆದರಿಕೆ ಹಾಕುವ ಪ್ರಯತ್ನಗಳು ನಡೆಯುತ್ತಿವೆ. ಪೊಲೀಸರು ಇವರ ಕೈಗೊಂಬೆಗಳಲ್ಲ. ನ್ಯಾಯಯುತವಾದ ಕೆಲಸಗಳನ್ನು ಮಾಡಿ, ಯಾರ ಒತ್ತಡಕ್ಕೂ ಮಣಿಯಬೇಡಿ. ನಾವು ನಿಮ್ಮೊಂದಿಗಿದ್ದೇವೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹೇಳಿದರು.

ಜನಾಕ್ರೋಶ ರ್‍ಯಾಲಿಯಲ್ಲಿ ಪಾಲ್ಗೊಳ್ಳಲು ಆಗಮಿಸಿದ್ದ ಅವರು, ಸ್ಥಳೀಯ ಬಿಜೆಪಿ ಘಟಕವು ದೊಡ್ಡ ಪ್ರಮಾಣದಲ್ಲಿ ಅಕ್ರಮ ಮರಳು ಗಣಿಗಾರಿಕೆ ನಡೆಯುತ್ತಿರುವ ಸ್ಥಳಕ್ಕೆ ಬಿಜೆಪಿ ನಡೆ ಭಾಗೋಡಿ ಕಡೆ ಎಂಬ ಹೋರಾಟ ಹಮ್ಮಿಕೊಂಡಿರುವ ಹಿನ್ನೆಲೆಯಲ್ಲಿ ಜಿಲ್ಲೆಯ ಚಿತ್ತಾಪೂರ ತಾಲೂಕಿನ ಭಾಗೋಡಿ ಸೇರಿದಂತೆ ಅಕ್ರಮ ಮರಳು ಗಣಿಗಾರಿಕಾ ಸ್ಥಳಗಳಿಗೆ ಭೇಟಿ ನೀಡಿದದ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ, ಭಾಗೋಡಿ ಕಾಗಿಣಾ ನದಿ ತೀರದಲ್ಲಿ ಸಹಸ್ರಾರು ಟನ್ ಮರಳು ಗುಡ್ಡೆ



ಕಲಬುರಗಿ ಜಿಲ್ಲೆಯ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಕ್ಷೇತ್ರದ ಭಾಗೋಡಿ ಕಾಗಿಣಾ ನದಿಯಲ್ಲಿ ಅಕ್ರಮ ಮರಳು ಗಣಿಗಾರಿಕೆ ನಡೆಯುತ್ತಿರುವ ಸ್ಥಳಕ್ಕೆ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ, ಛಲವಾದಿ ನಾರಾಯಣಸ್ವಾಮಿ, ಎನ್.ರವಿಕುಮಾರ, ಮಾಜಿ ಶಾಸಕ ರಾಜಕುಮಾರ ಪಾಟೀಲ್, ಅವ್ವಣ್ಣ ಮ್ಯಾಕೇರಿ ಮುಂತಾದವರು ಭೇಟಿ ನೀಡಿದರು.

ಹಾಕಿರುವುದನ್ನು ಮತ್ತು ನೂರಾರು ಲಾರಿಗಳು ಸಾಲುಗಟ್ಟಿ ನಿಂತು ಮರಳು ತುಂಬಿ ಕೊಳ್ಳುತ್ತಿರುವುದನ್ನು ಕಂಡ ಬಿವೈವಿ, ಇದೇನು ಖರ್ಗೆ ರಿಪಬ್ಲಿಕ್ ಆಗಿದೆಯಲ್ಲ. ಇಲ್ಲಿ ಯಾರೂ ಹೇಳೋರೂ ಕೇಳೋರೂ ಇಲ್ಲವೆ? ಗಣಿ ಇಲಾಖೆಯವರು ಎಲ್ಲಿದ್ದಾರೆ? ಏನ್ಮಾಡ್ತಿದ್ದಾರೆ ಎಂದು ತರಾಟೆಗೆ ತೆಗೆದುಕೊಂಡರು.

ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಕ್ಷೇತ್ರ ಚಿತ್ತಾಪುರ ತಾಲ್ಲೂಕಿನ ಭಾಗೋಡಿ ಕಾಗಿಣಾ ನದಿಯಿಂದ ದೊಡ್ಡ ಪ್ರಮಾಣದಲ್ಲಿ ಅಕ್ರಮ ಮರಳು ಸಾಗಣೆ ನಡೆಯುತ್ತಿದ್ದರೂ ಯಾರೊಬ್ಬರೂ ಕೇಳುತ್ತಿಲ್ಲ. ಇತ್ತೀಚೆಗೆ ವ್ಯಕ್ತಿಯೊಬ್ಬ ಈ ಮರಳು ಧಕ್ಕಾದಲ್ಲಿ ಬಿದ್ದು ಮೃತಪಟ್ಟ ಘಟನೆಯೂ ನಡೆದಿದ್ದು, ಇದನ್ನು ಪ್ರಶ್ನಿಸಿದ ಬಿಜೆಪಿ ಮುಖಂಡ ಅವ್ವಣ್ಣ ಮ್ಯಾಕೇರಿ ಅವರಿಗೆ ಪೊಲೀಸ್ ಮೂಲಕ ಬೆದರಿಕೆ ಹಾಕಿದ ಘಟನೆ ನಡೆದ ಹಿನ್ನೆಲೆಯಲ್ಲಿ ಬಿಜೆಪಿ ನಡೆ ಭಾಗೋಡಿ ಕಡೆ ಹೋರಾಟ ಹಮ್ಮಿಕೊಳ್ಳಲಾಗಿತ್ತು. ವಿಜಯೇಂದ್ರ ಅವರೊಂದಿಗೆ ಛಲವಾದಿ ನಾರಾಯಣಸ್ವಾಮಿ, ಎನ್. ರವಿಕುಮಾರ್, ಶಾಸಕ ಬಸವರಾಜ್ ಮತ್ತಿಮೂಡ, ಮಾಜಿ ಶಾಸಕ ರಾಜಕುಮಾರ್ ಪಾಟೀಲ್ ತೇಲ್ಕೂರ್ ಸೇರಿದಂತೆ ಇತರ ಬಿಜೆಪಿ ಮುಖಂಡರು ಭೇಟಿ ನೀಡಿದರು. ಆದರೆ, ಭಾಗೋಡಿಯಲ್ಲಿ ವಿಜಯೇಂದ್ರ ಭೇಟಿಯ ಸಂದರ್ಭದಲ್ಲಿ ಪ್ರಿಯಾಂಕ್ ಖರ್ಗೆ ಬೆಂಬಲಿಗರು ಆಕ್ರೋಶ ವ್ಯಕ್ತಪಡಿಸಿ, ಕಿರಿಕ್ ಮಾಡಿದರು. 'ಬಿಜೆಪಿ ಅವಧಿಯಲ್ಲೇ ಮರಳು ಗಣಿಗಾರಿಕೆಗೆ ಅನುಮತಿ ನೀಡಲಾಗಿದ್ದು, ಇದೀಗ ಆರೋಪ ಮಾಡಲು ಬಿಜೆಪಿಗೆ ಯಾವ ನೈತಿಕತೆ ಇದೆ?' ಎಂದು ಖರ್ಗೆ ಬೆಂಬಲಿಗರು ಆಕ್ರೋಶ ವ್ಯಕ್ತಪಡಿಸಿ ಬಿಜೆಪಿ ವಿರುದ್ಧ ಘೋಷಣೆ ಕೂಗಿದರು.

ಪ್ರಿಯಾಂಕ್ ಖರ್ಗೆ ಪರ ಹಾಗೂ ಬಿಜೆಪಿ ವಿರುದ್ಧ ಘೋಷಣೆಗಳೊಂದಿಗೆ ಬೆಂಬಲಿಗರು ಆರ್ಭಟಿಸಿದ್ದರಿಂದ ವಿಜಯೇಂದ್ರ ಅವರು ಕಾಗಿಣಾ ನದಿಯ ಬ್ರಿಡ್ಜ್ ಮೇಲೆ ನಿಂತು ನದಿಯನ್ನು ವೀಕ್ಷಿಸಿ, ಮಾಧ್ಯಮಗಳೊಂದಿಗೆ ಮಾತನಾಡಿ, ಇಲ್ಲಿ ಅಂಧಾ ಕಾನೂನು ನಡೆಯುತ್ತಿದೆ ಎಂದು ಆರೋಪಿಸಿದರು.

### ಪರೀಕ್ಷಾ ಕೇಂದ್ರದಲ್ಲಿ ಬ್ರಾಹ್ಮಣ ವಿದ್ಯಾರ್ಥಿಯ ಜನಿವಾರ ಪ್ರಕರಣ

## ಸ್ವಯಂ ದೂರು ದಾಖಲಿಸಿಕೊಂಡ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ

**ಬೀದರ್, ಏ.18–** ಜನಿವಾರ ಹಾಕಿದನೆಂಬ ಕಾರಣದಿಂದ ಬ್ರಾಹ್ಮಣ ವಿದ್ಯಾರ್ಥಿಗೆ ಕೆ–ಸಿಇಟಿ ಪರೀಕ್ಷೆ ಬರೆಯಲು ಅವಕಶ ನೀಡದೇ ವಾಪಸು ಕಳಿಸಿದ ಘಟನೆಗೆ ಸಂಬಂಧಿಸಿದಂತೆ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಸ್ವಯಂ ದೂರು ದಾಖಲಿಸಿಕೊಂಡಿದೆ. ಜತೆಗೆ ವಿದ್ಯಾರ್ಥಿಯ ಭವಿಷ್ಯದ ದೃಷ್ಟಿಯಿಂದ ವಿಶೇಷ ಪ್ರಕರಣದಡಿ ಮತ್ತೊಮ್ಮೆ ಪರೀಕ್ಷೆ ಬರೆಯಲು ಅವಕಾಶ ನೀಡುವಂತೆ ಪರೀಕ್ಷಾ ಮಂಡಳಿಗೆ ಸೂಚನೆ ನೀಡಿದೆ. ನಗರದ ಸಾಯಿ ಸ್ಫೂರ್ತಿ ಕಾಲೇಜು ಕೇಂದ್ರದಲ್ಲಿ ಗುರುವಾರ ನಡೆದ ಕೆ–ಸಿಇಟಿ (ಗಣಿತ) ಪರೀಕ್ಷೆ ವೇಳೆ ವಿದ್ಯಾರ್ಥಿ ಸುಚಿವ್ರತ್ ಕುಲಕರ್ಣಿ ಜನಿವಾರ ಹಾಕಿಕೊಂಡು ಪರೀಕ್ಷೆಗೆ ಬಂದಿದ್ದ. ತಪಾಸಣೆ ವೇಳೆ ಜನಿವಾರ ಹಾಕಿದ್ದಕ್ಕಾಗಿ ಸಿಬ್ಬಂದಿ ತಗಾದೆ ತೆಗೆದಿದ್ದು,



ಬೀದರ್‌ನಲ್ಲಿ ಜನಿವಾರ ಹಾಕಿದ್ದಾನೆಂಬ ಕಾರಣಕ್ಕೆ ವಿದ್ಯಾರ್ಥಿಗೆ ಸಿಇಟಿ ಪರೀಕ್ಷೆಗೆ ಅವಕಾಶ ನೀಡದೇ ಹೊರಗೆ ಕಳಿಸಿರುವ ಘಟನೆಗೆ ಸಂಬಂಧಿಸಿದಂತೆ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಶಶಿಧರ ಕೋಸುಂಬೆ ಅವರು ವಿದ್ಯಾರ್ಥಿ ಮನೆಗೆ ಭೇಟಿ ನೀಡಿ, ಮತ್ತೊಮ್ಮೆ ಪರೀಕ್ಷೆಗೆ ಅವಕಶ ಕಲ್ಪಿಸುವಂತೆ ಸೂಚನೆ ನೀಡುವುದಾಗಿ ಭರವಸೆ ನೀಡಿದರು.

ಅದರೊಳಗೆ ಕ್ಯಾಮೆರಾ, ಇತರೆ ಎಲೆಕ್ಟ್ರಾನಿಕ್ ವಸ್ತುಗಳು ಇರಬಹುದು. ಅದನ್ನು ತೆಗೆದಿಟ್ಟು ಬಾ ಎಂದು ಹೀಯಾಳಿಸಿದ್ದಾರೆ. ಜನಿವಾರ ನಮ್ಮ ಧರ್ಮದ ಕುರುಹು, ಅದನ್ನು ತೆಗೆಯಲು ಬರುವುದಿಲ್ಲ. ಅಷ್ಟಕ್ಕೂ ಇಂತಹ ಯಾವುದೇ ನಿಯಮವೂ ಇಲ್ಲ ಎಂದು ವಿದ್ಯಾರ್ಥಿ ಹೇಳಿದ್ದಾನೆ. ಇದಕ್ಕೆ ಕಿವಿಗೊಡದ ಸಿಬ್ಬಂದಿ ಸುಚಿವೃತ್‌ನನ್ನು ಬೈದು ಪರೀಕ್ಷಾ ಕೋಣೆ ಪ್ರವೇಶಕ್ಕೆ ಅವಕಾಶ ಮಾಡಿ ಕೊಡದೆ ವಾಪಸ್ ಕಳುಹಿಸಿದ್ದರು. ಈ ವರ್ತನೆಯಿಂದ ಆಘಾತಗೊಂಡಿದ್ದ ವಿದ್ಯಾರ್ಥಿ ಮತ್ತು ಪಾಲಕರು ಜಿಲ್ಲಾಡಳಿತಕ್ಕೆ ದೂರು ನೀಡಿದ್ದರು.

ವಿಷಯ ತಿಳಿಯುತ್ತಿದ್ದಂತೆಯೇ ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ವೆಂಕಟ ಕುಲಕರ್ಣಿ ನೇತೃತ್ವದಲ್ಲಿ ಪ್ರತಿಭಟನೆ ಕೈಕೊಂಡು, ಇಂಥ ಯವುದೇ ನಿಯಮವಿಲ್ಲದಿದ್ದರೂ ಪರೀಕ್ಷಾ ಸಿಬ್ಬಂದಿ ಒಬ್ಬ ವಿದ್ಯಾರ್ಥಿಗೆ ಮಾನಸಿಕ ಹಿಂಸೆ ನೀಡಿ ಅವನ ಭವಿಷ್ಯ ಹಾಳು ಮಾಡುತ್ತಿದ್ದಾರೆ. ಕೂಡಲೇ ಸಂಬಂಧಿತ ಪರೀಕ್ಷಾ ಮೇಲ್ವಿಚಾರಕನನ್ನು ಸೇವೆಯಿಮದ ಅಮಾನತುಗೊಳಿಸಿ, ವಿದ್ಯಾರ್ಥಿಗೆ ಮತ್ತೊಮ್ಮೆ ಪರೀಕ್ಷೆಗೆ ಅವಕಾಶ ಕಲ್ಪಿಸಬೇಕೆಂದು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಸಿಇಟಿ ಪರೀಕ್ಷೆಗೆ ವಿದ್ಯಾರ್ಥಿಗೆ ನಿರ್ಬಂಧ ಹಾಕಿದ ಬಗ್ಗೆ ಗೊತ್ತಾಗುತ್ತಿದ್ದಂತೆ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಶಶಿಧರ ಕೋಸಂಬೆ ಶುಕ್ರವಾರ (ಏ.18) ವಿದ್ಯಾರ್ಥಿ ಸುಚಿವ್ರತ್ ಮನೆಗೆ ಭೇಟಿ ಕೊಟ್ಟು ಘಟನೆಯ ಮಾಹಿತಿ ಪಡೆದರು. ಆತನಿಗೆ ಮತ್ತು ಪಾಲಕರಿಗೆ ಧೈರ್ಯ ತುಂಬಿದ್ದಾರೆ. ಜನಿವಾರ ಹಾಕಿದನೆಂಬ ಕಾರಣಕ್ಕೆ ಸಿಇಟಿ ಬರೆಯಲು ಅವಕಾಶ ನೀಡದೆ ವಿದ್ಯಾರ್ಥಿಗೆ ಅವಮಾನ ಮಾಡಿರುವುದನ್ನು ಅಯೋಗ ಸಹಿಸುವುದಿಲ್ಲ. ಇದು ಧಾರ್ಮಿಕ ಹಕ್ಕಿನ ಉಲ್ಲಂಘನೆಯೂ ಆಗಿದೆ. ಆಯೋಗ ಸ್ವಯಂ ದೂರು ದಾಖಲಿಸಿಕೊಂಡು, ತಪ್ಪಿತಸ್ಥ ಪರೀಕ್ಷಾ ಅಧಿಕಾರಿ ಮತ್ತು ಸಿಬ್ಬಂದಿ ವಿರುದ್ಧ ಕ್ರಮ ಕೈಗೊಳ್ಳುವಂತೆ ಸರ್ಕಾರಕ್ಕೆ ಶಿಫಾರಸ್ಸು ಮಾಡಲಾಗುವುದು. ಜತೆಗೆ ವಿದ್ಯಾರ್ಥಿಗೆ ಮತ್ತೊಮ್ಮೆ ಪರೀಕ್ಷೆ ಬರೆಯಲು ಅವಕಾಶ ನೀಡುವಂತೆ ಕಾಲೇಜು ಶಿಕ್ಷಣ ಇಲಾಖೆಗೆ ಪತ್ರ ಬರೆಯಲಾಗುವುದು ಎಂದು ಹೇಳಿದ್ದಾರೆ.

## ಒಂದು ಬಲವಾದ ಸಾಕ್ಷಿ: ಇಡೀ ಪ್ರಕರಣವನ್ನೇ ಬದಲಿಸಬಲ್ಲದು: ಎಸ್. ಎಲ್. ಚವ್ಹಾಣ್

**ಕಲಬುರಗಿ, ಏ.18–** ಯಾವುದೇ ಒಂದು ನ್ಯಾಯಾಲಯದ ಪ್ರಕರಣದಲ್ಲಿ ಬಲವಾದ ಸಾಕ್ಷ್ಯವಷ್ಟೇ ಸಾಕು, ಇಡೀ ಪ್ರಕರಣವನವರ್ನೇ ಬದಲಿಸ ಬಲ್ಲದು. ಆದ್ದರಿಂದ ಯುವ ವಕೀಲರು ನ್ಯಾಯಾಲಯದಲ್ಲಿ ಕ್ರೀಯಾಶೀಲತೆಯಿಂದ ಸಾಕ್ಷ್ಯವನ್ನು ಪತ್ತೆ ಹಚ್ಚಿ, ಸಮಾಜದಲ್ಲಿ ಶಾಂತಿ ಕಾಪಾಡಲು ಸಹಕರಿಸಬೇಕು. ವಿವಿಧ ಬಗೆಯ ಸಾಕ್ಷಿಗಳ ಕುರಿತು ಪ್ರಕರಣದಲ್ಲಿ ಸಾಕ್ಷ್ಯದ ಬಳಕೆ ಹೇಗೆ ಎಂಬುದನ್ನು ಖಾಯಂ ಜನತಾ ನ್ಯಾಯಾಲಯದ ಅಧ್ಯಕ್ಷ ಎಸ್. ಎಲ್.ಚವ್ಹಾಣ ಹೇಳಿದರು.

ಭಾರತೀಯ ಸಾಕ್ಷ್ಯ ಅಧಿನಿಯಮ–2023ರ ಕುರಿತು ವಿಶೇಷ ಕಾನೂನು ಅರಿವು–ನೆರವು ಕಾರ್ಯಕ್ರಮವನ್ನು ಸಿದ್ಧಾರ್ಥ ಕಾನೂನು ಮಹಾ ವಿದ್ಯಾಲಯದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸಂಯುಕ್ತ ಆಶ್ರಯದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸಂಸ್ಥೆಯ ವಿದ್ಯಾರ್ಥಿಗಳಿಗೆ–




ಕಲಬುರಗಿಯ ಸಿದ್ಧಾರ್ಥ ಕಾನೂನು ಮಹಾವಿದ್ಯಾಲಯದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಮ್ಮಿಕೊಂಡ ಕಾನೂನು ಅರಿವು ಕಾರ್ಯಕ್ರಮವನ್ನು ಖಾಯಂ ಜನತಾ ನ್ಯಾಯಾಲಯದ ಅಧ್ಯಕ್ಷ ಎಸ್.ಎಲ್.ಚವ್ಹಣ ಉದ್ಘಾಟಿಸಿದರು. ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಶ್ರೀನಿವಾಸ ನವಲೆ ಮುಂತಾದವರಿದ್ದರು.

ಭಾರತೀಯ ಸಾಕ್ಷ್ಯ ಅಧಿನಿಯಮ–2023 ರ ಕುರಿತು ಚರ್ಚೆ ನಡೆಸಿದರು. ನ್ಯಾಯಾಲಯದಲ್ಲಿ ಸಾಕ್ಷಿಗಳ ವಿಚಾರಣೆಯ ವಿಧಾನವನ್ನು ಪಾಟೀಸವಾಲಿನ ಬಗೆ ಅದನ್ನು ಅಳವಡಿಸಿಕೊಳ್ಳು ವಚತುರತೆಯ ಬಗ್ಗೆ ವಿದ್ಯಾರ್ಥಿಗಳಿಗೆ ತಿಳಿಸಿಕೊಟ್ಟರು. ಪ್ರಕರಣವನ್ನು ನಿರ್ಧರಿಸಲು– ತಪ್ಪೊಪ್ಪಿಗೆ ಹೇಗೆ ಸಾಧನ ವಾಗಬಲ್ಲದು ಎಂಬುದನ್ನು ಸಾಕ್ಷ್ಯ ಅಧಿನಿಯಮದ ಕಲಂಗಳ ಕುರಿತಾಗಿ ಬಹಳ ಸೂಕ್ಷ್ಮವಾಗಿ ತಿಳಿಸಿಕೊಡಲಾಯಿತು. ಜೊತೆಗೆ ಕಾನೂನಿನ ಜ್ಞಾನ ಭಾಷೆಯ ಮೇಲಿನ ಹಿಡಿತ, ಪ್ರಾಮಾಣಿಕತೆ ಸಮಾಜದ ಮೇಲಿನ ಕಳಕಳಿ ನ್ಯಾಯ ಒದಗಿಸುವಲ್ಲಿ ಬಹಳ ಸಹಾಯಕವಾಗುತ್ತದೆ.

ಹಿರಿಯ ಶ್ರೇಣಿ ನ್ಯಾಯಾಧೀಶರು ಮತ್ತು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಶ್ರೀನಿವಾಸ ನವಲೆ ರವರು ಭಾರತೀಯ ಸಾಕ್ಷ್ಯ ಅಧಿನಿಯಮದ ಕುರಿತಂತೆ ಹೆಚ್ಚಿನ ಮಾಹಿತಿಯನ್ನು ವಿದ್ಯಾರ್ಥಿ ಗಳೊಂದಿಗೆ ಹಂಚಿಕೊಂಡರು.

ವಕೀಲರು ಸೂಕ್ಷ್ಮತೆಯನ್ನು ತಿಳಿದು ಸಾಕ್ಷ್ಯವನ್ನು ಗುರುತಿಸಬೇಕು. ಇದೊಂದು ಕ್ರಿಯಾ ಶೀಲಕಾರ್ಯ. ಹಾಗೆಯೆ ಬಂಗಾರವನ್ನು ಹೇಗೆ ಸೂಕ್ಷ್ಮವಾಗಿ ಅಳೆದುತೂಗಲಾಗುತ್ತದೆಯೋ ಹಾಗೆಯೇ ನ್ಯಾಯಾಲಯ ದಲ್ಲಿ ಸಾಕ್ಷಿಗಳನ್ನು ಪರೀಕ್ಷಿಸುವಾಗ, ಸತ್ಯಾಸತ್ಯತೆಯನ್ನು ಬಯಲು ಮಾಡಲಾಗುತ್ತದೆ. ವಕೀಲರು ಸರಿಯಾಗಿ ಪ್ರಕರಣವನ್ನು ಅರಿತು, ನ್ಯಾಯದಾನ ನೀಡುವಲ್ಲಿ ಪ್ರಮುಖ ಪಾತ್ರವಹಿಸಬೇಕು ಎಂದು ತಿಳಿಸಿದರು.

### ಸಚಿವರೊಂದಿಗೆ ಶಾಸಕ ನಾರಾ ಭರತ್ ರೆಡ್ಡಿ ಮಾತುಕತೆ, ಕ್ರಮದ ಭರವಸೆ

## ಬೆಂಬಲ ಬೆಲೆಯೊಂದಿಗೆ ಜೋಳ ಖರೀದಿಗೆ ನಿಗದಿಪಡಿಸಿದ್ದ ಮಿತಿ ವಿಸ್ತರಿಸುವಂತೆ ರೈತರ ಧರಣಿ



**ಬಳ್ಳಾರಿ, ಏ.18–** ಹಿಂಗಾರು ಹಂಗಾಮಿನ ಅವಧಿಯಲ್ಲಿ ಬೆಳೆದಿದ್ದ ಜೋಳವನ್ನು ಬೆಂಬಲ ಬೆಲೆಯೊಂದಿಗೆ ಖರೀದಿಸಲು ನಿಗದಿಪಡಿಸಿದ್ದ ಮಿತಿಯನ್ನು ಹೆಚ್ಚಳಗೊಳಿಸುವಂತೆ ಶಾಸಕ ನಾರಾ ಭರತ್ ರೆಡ್ಡಿ ಸಚಿವ ಕೆ.ಹೆಚ್.ಮುನಿಯಪ್ಪ ಅವರಿಗೆ ಫೋನ್ ಮೂಲಕ ಮನವಿ ಮಾಡಿದರು.

ಜಿಲ್ಲಾಧಿಕಾರಿ ಕಚೇರಿ ಎದುರು ಧರಣಿ ನಿರತ ರೈತರನ್ನು ಗುರುವಾರ ಸಂಜೆ ಭೇಟಿ ಮಾಡಿದ ಶಾಸಕ ನಾರಾ ಭರತ್ ರೆಡ್ಡಿ ರೈತರ ಮನವಿಯನ್ನು ಪುರಸ್ಕರಿಸುವಂತೆ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಸಚಿವ ಕೆ.ಎಚ್.ಮುನಿಯಪ್ಪ ಅವರಿಗೆ ಫೋನ್ ಮೂಲಕ ಮಾತಾಡಿ ಕೋರಿದರು. ಶಾಸಕರ ಮನವಿಗೆ ಸ್ಪಂದಿಸಿದ ಸಚಿವರು ತಕ್ಷಣ ಅಗತ್ಯ ಕ್ರಮ ಕೈಗೊಳ್ಳುವುದಾಗಿ ಹೇಳಿದರು.

ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ವತಿಯಿಂದ ಜಿಲ್ಲಾಧಿಕಾರಿ ಕಚೇರಿಯ ಎದುರು ಬೆಳಿಗ್ಗೆಯಿಂದ ಧರಣಿ ಕೂತಿದ್ದರು. ಧರಣಿ ನಿರತ ರೈತರನ್ನು ಭೇಟಿ ಮಾಡಿದ ಶಾಸಕ ನಾರಾ ಭರತ್ ರೆಡ್ಡಿ ಅಹವಾಲು ಸ್ವೀಕರಿಸಿ ಸಚಿವರೊಂದಿಗೆ ಮಾತನಾಡಿದರು.

ರೈತ ಮುಖಂಡರಾದ ಮಾಧವ ರೆಡ್ಡಿ, ಮಲ್ಲಿಕಾರ್ಜುನ ರೆಡ್ಡಿ, ಲೇಪಾಕ್ಷಿ, ವೀರಭದ್ರ ರೆಡ್ಡಿ ಅವರ ನೇತೃತ್ವದಲ್ಲಿ ನೂರಾರು ರೈತರು ಧರಣಿ ಕೂತಿದ್ದರು. ಶಾಸಕರ ಭರವಸೆ ಮೇರೆಗೆ ಪ್ರತಿಭಟನಾ ಧರಣಿ ಹಿಂಪಡೆಯಲಾಯಿತು.

## ಪ್ಯಾನಲ್ ವಕೀಲರ ನೇಮಕಾತಿ: ಅರ್ಜಿ ಆಹ್ವಾನ

**ವಿಜಯಪುರ, ಏ.18–** ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದ ಮೇರೆಗೆ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಮತ್ತು ಇಂಡಿ, ಸಿಂದಗಿ, ಬಸವನ ಬಾಗೇವಾಡಿ ಮತ್ತು ಮುದ್ದೇಬಿಹಾಳದ ತಾಲೂಕು ಕಾನೂನು ಸೇವಾ ಸಮಿತಿಗೆ ಹೊಸದಾಗಿ ಪ್ಯಾನಲ್ ವಕೀಲರ ನೇಮಕಾತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಪ್ಯಾನಲ್ ವಕೀಲರಾಗಿ ಕಾರ್ಯ ನಿರ್ವಹಿಸಲು ಆಸಕ್ತಿಂಯುಳ್ಳವರು https://vijayapura.dcourts.gov.in/dlsa/ ವೆಬ್ಸೈಟ್ ಮೂಲಕ ಅರ್ಜಿ ಪಡೆದುಕೊಂಡು, ಭರ್ತಿ ಮಾಡಿದ ಅರ್ಜಿಯನ್ನು ಮೇ02 ರೊಳಗಾಗಿ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಕಚೇರಿಗೆ ಹಾಗೂ ತಾಲೂಕು ಕಾನೂನು ಸೇವಾ ಸಮಿತಿಯ ಕಚೇರಿಗೆ ಸಲ್ಲಿಸ ಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಗಳಾದ ಅರವಿಂದ ಎಸ್.ಹಾಗರಗಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಬಿಎಂಸಿಆರ್‌ಸಿ ಆಸ್ಪತ್ರೆಯಲ್ಲಿ ಅನೇಕ ಅಭಿವೃದ್ಧಿ ಕಾಮಗಾರಿಗಳು

## ಶೀಘ್ರವೇ ಸಾರ್ವಜನಿಕರಿಗೆ ಸೇವೆಗಳ ಲೋಕಾರ್ಪಣೆ– ಗಂಗಾಧರ ಗೌಡ

**ಬಳ್ಳಾರಿ, ಏ.18–** ಬಳ್ಳಾರಿ ನಗರದಲ್ಲಿನ ಬಳ್ಳಾರಿ ಮೆಡಿಕಲ್ ಕಾಲೇಜ್ ಅಂಡ್ ರಿಸರ್ಚ್ ಸೆಂಟರ್ ಈ ಹಿಂದಿನ ವಿಮ್ಸ್ ಆಸ್ಪತ್ರೆಯ ಆವರಣದಲ್ಲಿ 550 ಬೆಡ್ ಗಳ ಹೊಸ ಆಸ್ಪತ್ರೆ ಕಟ್ಟಡ ಬಹುತೇಕ ಬರುವ ಜೂನ್ ನಿಂದ




ಆರಂಭಗೊಳ್ಳಲಿದೆ. ಸದ್ಯ 1300 ಹಾಸಿಗೆಗಳ ಆಸ್ಪತ್ರೆ ಇದೆ. ಈ ಹಿಂದೆ ಹಲವು ದಶಕಗಳ ಹಿಂದೆ ನಿರ್ಮಿಸಿದ್ದ ಕಟ್ಟಡ ಶಿಥಿಲ ಗೊಂಡಿತ್ತು. ಒಮ್ಮೆ ಪೋರ್ಟಿಕೋ ಕುಸಿದು ಓರ್ವ ಸಾವನ್ನಪ್ಪಿದ್ದ. ಅದನ್ನು ನೆಲಸಮ ಮಾಡಲಾಗಿದೆ.

ಈಗ ಇದೇ ಸ್ಥಳದಲ್ಲಿ ಕರ್ನಾಟಕ ಗಣಿ ಪರಿಸರ ಪುನರ್ ಸ್ಥಾಪನೆ ನಿಗಮ ಕೆ.ಎಂ.ಇ.ಆರ್.ಸಿಯ ನಿಧಿಯ 145 ಕೋಡಿ ರೂ ಅನುದಾನದಿಂದ 550 ಹಾಸಿಗೆಗಳ ಆಸ್ಪತ್ರೆ ನಿರ್ಮಿಸಲು ಉದ್ದೇಶಿಸಿದೆ. ಐದು ಅಂತಸ್ತುಗಳ ಈ ಆಸ್ಪತ್ರೆ ನಿರ್ಮಾಣಕ್ಕೆ ಟೆಂಡರ್ ಕರೆದಿದ್ದು ಮೇ 5 ಕೊನೆಯ ದಿನವಾಗಿದೆ. ಟೆಂಡರ್ ಪಡೆದವರಿಂದ ಬರುವ ಜೂನ್ ನಿಂದ ನಿರ್ಮಾಣ ಕಾಮಗಾರಿ ಆರಂಭಿಸಲಿದೆ. ಹೆರಿಗೆ, ಮಕ್ಕಳ ವಿಭಾಗಗಳಿಗೆ ಹೆಚ್ಚಿನ ಜನ ಚಿಕಿತ್ಸೆಗೆ ಬರುತ್ತಿರುವುದರಿಂದ ಈಗ ಹಲವೊಮ್ಮೆ ಬೆಡ್‌ಗಳ ಕೊರತೆ ಎದುರಾಗುತ್ತಿದೆ. ಹಾಗಾಗಿ ಕೆಲವೊಮ್ಮೆ ನೆಲದ ಮೇಲೆ ಬೆಡ್ ಹಾಕಲಾಗುತ್ತದೆ. ಈ ಸಮಸ್ಯೆ ನಿವಾರಣೆಗೆ ಹೊಸ ಆಸ್ಪತ್ರೆ ನಿರ್ಮಾಣ ಪರಿಹಾರವಾಗಲಿದೆ.

ಕೆಎಂಇಆರ್‌ಸಿ ಅನುದಾನವಿರುವುದರಿಂದ ನಮ್ಮ ಆಸ್ಪತ್ರೆ ಅಭಿವೃದ್ದಿಯ ಕಾಮಗಾರಿಗಳಿಗೆ ಅನುದನ ಕೊರತೆ ಇಲ್ಲ. ಇಲ್ಲಿ ಅನೇಕ ಅಭಿವೃದ್ಧಿ ಕಾಮಗಾರಿಗಳು ನಡೆದಿವೆ. ಸದ್ಯದಲ್ಲೇ ಅವು ಸಾರ್ವಜನಿಕರ ಸೌಲಭ್ಯಕ್ಕೆ ದೊರೆಯಲಿವೆ ಎಂದು ಡಾ.ಟಿ.ಗಂಗಾಧರಗೌಡ ನಿರ್ದೇಶಕರು, ಬಿಎಂಸಿಆರ್ಸಿ ಬಳ್ಳಾರಿ ಇವರು ತಿಳಿಸಿದ್ದಾರೆ.

## ಮುಖ್ಯಮಂತ್ರಿ ಸಿದ್ದರಾಮಯ್ಯ–ಡಿಕೆಶಿ ನಡುವೆ ಕುರ್ಚಿ ಕುಸ್ತಿ

# ಜಾತಿಗಣತಿ ವರದಿ ಕಸದ ಬುಟ್ಟಿಗೆ ಎಸೆಯಿರಿ: ಬಿ.ವೈ.ವಿಜಯೇಂದ್ರ

**ಕಲಬುರಗಿ, ಏ.18–** ಡಿಕೆಶಿ ಮತ್ತು ಸಿದ್ದರಾಮಯ್ಯ ನಡುವೆ ಕುರ್ಚಿಯ ಗುದ್ದಾಟ ನಡೆಯುತ್ತಿದೆ. ತನ್ನ ಕುರ್ಚಿ ಉಳಿಸಿಕೊಳ್ಳಲು ಅಹಿಂದ ನಾಯಕ ಸಿದ್ದರಾಮಯ್ಯ ಜಾತಿ ಗಣತಿ ಮುನ್ನೆಲೆಗೆ ತಂದಿದ್ದಾರೆ. ಅವೈಜ್ಞಾನಿಕವಾದ ಹತ್ತು ವರ್ಷ ಹಳೆಯದಾದ ಈ ಜಾತಿಗಣತಿ ವರದಿಯನ್ನು ಕಸದ ಬುಟ್ಟಿಗೆ ಎಸೆಯಿರಿ. ಇದನ್ನು ರಾಜ್ಯದ ಜನತೆ ಒಪ್ಪುವದಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹೇಳಿದರು.

ನಗರದಲ್ಲಿಂದು ನಡೆದ ಜನಕ್ರೋಶ ರ್‍ಯಾಲಿಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಸಿದ್ದರಾಮಯ್ಯ ಅವರಿಗೆ ಹಿಂದುಳಿದ ವರ್ಗದವರ ಬಗ್ಗೆ ನಿಜವಾದ ಕಾಳಜಿ ಇದ್ದರೆ, ವೈಜ್ಞಾನಿಕ ರೀತಿಯಲ್ಲಿ ಹೊಸ ಸಮೀಕ್ಷೆ ನಡೆಸಿ ಸರ್ವ ಪಕ್ಷ ಸಭೆ ಕರೆದ ನಂತರ ಅದನ್ನು ಕಾರ್ಯಗತಗೊಳಿಸಲಿ. ಈ ಜಾತಿ ಗಣತಿ ವರದಿ ಕೇವಲ ಕಾಂಗ್ರೆಸ್ ಪಕ್ಷಕ್ಕೆ ಸಂಬಂಧಿಸಿದ್ದಲ್ಲ. ಇಡೀ ರಾಜ್ಯದ ಜನತೆಗೆ ಸಂಬಂಧಿಸಿದ್ದರಿಂದ ಈ ಬಗ್ಗೆ ಯಾವುದೇ ತೀರ್ಮಾನ ಕೈಕೊಳ್ಳುವ ಮೊದಲು ಸರ್ವ ಪಕ್ಷದ ಸಭೆ ಕರೆದು ಅಭಿಪ್ರಯ ಪಡೆಯಬೇಕು ಎಂದರು.



ಕಲಬುರಗಿಯಲ್ಲಿ ಬಿಜೆಪಿ ಆಯೋಝಿಸಿರುವ ಜನಾಕೋಶ ರ್‍ಯಾಲಿಯಲ್ಲಿ ಬಿಜೆಪಿ ರಾಜ್ಯಧ್ಯಕ್ಷ ಬಿ.ವೈ.ವಿಜಯೇಂದ್ರ ಮಾತನಾಡಿದರು. ಛಲವಾದಿ ನಾರಾಯಣಸ್ವಾಮಿ, ಎನ್.ರವಿಕುಮಾರ, ಶ್ರೀರಾಮುಲು, ಬಸವರಾಜ ಮತ್ತಿಮಡು, ಶಶೀಲ್ ನಮೋಶಿ, ಬಿ.ಜಿ.ಪಾಟೀಲ್, ಚಂದೂ ಪಾಟೀಲ್ ಮುಂತಾದವರಿದ್ದರು.

ಜಾತಿ ಗಣತಿ ವರದಿಯ ಕುರಿತು ಸ್ವತಃ ಮುಖ್ಯಮಂತ್ರಿ, ಉಪಮುಖ್ಯ ಮಂತ್ರಿ ಮತ್ತು ಸಚಿವರುಗಳು ವಿಭಿನ್ನ ಹಏಳಿಕೆಗಳನ್ನು ನೀಡುತ್ತಿದ್ದಾರೆ. ಸರ್ಕಾರದೊಳಗೇ ವರದಿ ಕುರಿತು ಸ್ಪಷ್ಟತೆ ಇಲ್ಲದಿರುವಘ ಇದನ್ನು ಕಸದ ಬುಟ್ಟಿಗೆ ಎಸೆಯುವ ಬದಲು ಅನ್ಯ ಮಾರ್ಗವೇ ಇಲ. ಇನ್ನು ಕಳೆದ ಎರಡು ವರ್ಷಗಳಿಂದ ರಾಜ್ಯದ ಯಾವುದೇ ಭಗದಲ್ಲಿ ಒಂದೇ ಒಂದು ಆಬಿವೃದ್ಧಿ ಕಾರ್ಯಗಳು ನಡೆಯುತ್ತಿಲ್ಲ. ಅಭಿವೃದ್ಧಿ ಸಂಪೂರ್ಣ ಕುಸಿದು ಬಿದ್ದಿದೆ. ಗ್ಯಾರಂಟಿಯ ಆಮಿಷವೊಡ್ಡಿ ಸರ್ಕಾರ ಮುನ್ನಡೆಸಿಕೊಂಡು ಬರಲಾಗುತ್ತಿದೆಯೇ ಹೊರತು, ಕಲಬುರಗಿ ಬೀದರ ಜಿಲ್ಲೆಯಲ್ಲಿ ಎರಡು ದಿನ ಸಿಎಂ ಕಾರ್ಯಕ್ರಮಗಳು ಕೇವಲ ಘೋಷಣೆಗಳಾಗಿವೆಯೇ ಹೊರತು ಒಂದು ಪೈಸೆ ಅನುದಾನ ಬಿಡುಗಡೆ ಮಾಡಿಲ್ಲ. ಜನರಿಗೆ ವಂಚಿಸುವ ಕೆಲಸ ನಡೆಯುತ್ತಿದೆ ಎಂದೂ ಆರೋಪಿಸಿದರು.

ಇನ್ನು ಬೆಲೆ ಏರಿಕೆಯಂತೂ ಜನರಜೀವನ ದುರ್ಭರಗೊಳಿಸಿದೆ. ಹಾಲು, ವಿದ್ಯುತ್, ಬಸ್ ದರ, ಡಿಜೇಲ್ ದರ, ಮುದ್ರಾಂಕ, ವಾಹನಗಳ ರಿಜಿಸ್ಟ್ರೇಶನ್ ಎಲ್ಲ ದರಗಳನ್ನು ಹೆಚ್ಚಿಸುವ ಮೂಲಕ ಗ್ಯಾರಂಟಿ ಯೋಜನೆಗಳಿಂದ ಖಾಲಿ ಯಾದ ಖಜಾನೆ ತುಂಬಿಸಿಕೊಳ್ಳಲು ಪ್ರಯತ್ನಿಸುತ್ತಿದ್ದಾರೆ. ಇದರೊಂದಿಗೆ ಎಸ್‌ಸಿಎಸ್‌ಟಿ ನಿಗಮದ ಹಣ, ಭೋವಿ ನಿಗಮದ ಹಣ, ವಾಲ್ಮಿಕಿ ನಿಗಮದ ಹಣವನ್ನು ಗ್ಯಾರಂಟಿ ಯೋಜನೆಗಳಿಗೆ ವರ್ಗಾಯಿಸಿ ಪರಿಶಿಷ್ಟ ಜಾತಿ ಪಂಗಡದವರ ಬಾಯಿಗೆ ಮಣ್ಣು ಹಾಕುತ್ತಿದ್ದಾರೆ. ಎರಡು ವರ್ಷಗಳಿಂದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ನೀಡಿಲ್ಲ. ಸಚಿವ ಸಂಪುಟದಲ್ಲಿರುವ ದಲಿತ ಮಂತ್ರಿಗಳು ಏನ್ಮಾಡ್ತಿದ್ದಾರೆ? ಎಲ್ಲರೂ ಯಾಕೆ ಬಾಯ್ಮುಚ್ಚಿಕೊಂಡು ಕುಳಿತಿದ್ದಾರೆ?

ಕೇವಲ ಅಧಿಕರದಲ್ಲಿರಬೇಕೆಂದು ಮಾತ್ರ ಈ ಸರ್ಕಾರ ಅಧಿಕಾರ ನಡೆಸಿಕೊಂಡು ಬರುತ್ತಿದೆ. ನೀವು ಕೊಡುವ ಬಿಟ್ಟಿ ಕಾಸಿಗಾಗಿ ಯಾರೂ ಕೇಳಿರಲಿಲ್ಲ. ನಿಮ್ಮ ಅಧಿಕರದ ತೆವಲಿಗೆ ಸಾರ್ವಜನಿಕರು ಅಭಿವೃದ್ಧಿಗೆಂದು ಕೊಡುವ ತೆರಿಗೆ ಹಣವನ್ನು ಅಭಿವೃರ್ದಧಿ ಬದಿಗಿರಿಸಿ ಗ್ಯಾರಂಟಿಗಳಿಗೆ ವಿನಿಯೋಗಿಸುತ್ತಿದ್ದೀರಿ. ಬಡವರಿಗೆ, ದುರ್ಬಲರಿಗೆ ಅಗತ್ಯ ಸೌಲಭ್ಯ ಕೊಡಲು ಎಂದಿಗೂ ಯಾರೂ ವಿರೋಧಿಸುವದಿಲ್ಲ. ಆದರೆ, ನೀವು ಬೇಕಾಬಿಟ್ಟಿ ಬಿಟ್ಟಿ ಯೋಜನೆಗಳನ್ನು ಘೋಷಿಸಿ ಅವುಗಳನ್ನು ನಿಭಾಯಿಸಲಾಗದೇ ತಿಣುಕಾಡುತ್ತಿದ್ದೀರಿ. ಸಾಲದ್ದಕ್ಕೆ ಡಿಎಂ ಮತ್ತು ಡಿಸಿಎಂ ಮಧ್ಯೆ ಕುರ್ಚಿ ಜಗಳದಿಂದ ರಾಜ್ಯದ ಸಂಪೂರ್ಣ ಆಡಳಿತವೇ ಕುಸಿದು ಹೋಗಿದೆ ಎಂದು ಆರೋಪಿಸಿದರು.

ಛಲವಾದಿ ನಾರಾಯಣಸ್ವಾಮಿ, ಎನ್.ರವಿಕುಮಾರ, ಶ್ರೀರಾಮುಲು, ಬಸವರಾಜ ಮತ್ತಿಮಡು, ಶಶೀಲ್ ನಮೋಶಿ ಅವರೂ ಮಾತನಾಡಿದರು. ಬಿ.ಜಿ.ಪಾಟೀಲ್, ಚಂದೂ ಪಾಟೀಲ್ ಮುಂತಾದವರಿದ್ದರು.

# ಕಲಬುರಗಿ ನಿಲ್ದಾಣವನ್ನು ಉಡಾನ್ ಯೋಜನೆಗೆ ಸೇರಿಸಿ ದೆಹಲಿ ಮುಂಬೈ, ಮಂಗಳೂರು ಮಧ್ಯೆ ವಿಮಾನ ಸಂಚಾರಕ್ಕೆ ಮನವಿ

**ಕಲಬುರಗಿ, ಏ.18–** ಪ್ರತಿಷ್ಠಿತ ನಗರದ ವಿಮಾನ ನಿಲ್ದಾಣ ದಿಂದ ನಿತ್ಯ ವಿಮಾನ ಸಂಚಾರವು ಪುನರ್ ಸಂಚಾರ ಪ್ರಾರಂಭಗೊಂ ಡಿರುವುದಕ್ಕೆ ಸಂತಸವಾಗಿದೆ ಹಾಗೂ ಕೇಂದ್ರ ಸರ್ಕಾರವು ನಗರ ವಿಮಾನ ನಿಲ್ದಾಣವನ್ನು ಉಡಾನ್ ಯೋಜನೆ ವ್ಯಾಪ್ತಿಗೆ ಸೇರಿಸುವಂತೆ ದಕ್ಷಿಣ ಕನ್ನಡ ಸಂಘದ ಮಾಜಿ ಅಧ್ಯಕ್ಷ ಡಾ. ಸದಾನಂದ್ ಪೆರ್ಲ ಅವರು ಒತ್ತಾಯಿಸಿದ್ದಾರೆ.

ನಗರ ವಿಮಾನ ನಿಲ್ದಾಣಕ್ಕೆ ರಾಜ್ಯ ಸರ್ಕಾರವು ಮೂಲಭೂತ ಸೌಲಭ್ಯ ಅಭಿವೃದ್ಧಿ ಇಲಾಖೆಯಿಂದ ನೂರಾರು ಕೋಟಿ ವೆಚ್ಚ ಮಾಡಿ ಸುಸಜ್ಜಿತ ವಿಮಾನ ನಿಲ್ದಾಣ ನಿರ್ಮಾಣ ಮಾಡಿದ್ದು ಭಾರತೀಯ ವಿಮಾನ ನಿಲ್ದಾಣ ಪ್ರಾಧಿಕಾರವು ಸುಮಾರು 80 ಕೋಟಿ ರೂ.ಗಳನ್ನು ವೆಚ್ಚ ಮಾಡಿ 2023 ಮೇ ತಿಂಗಳಲ್ಲಿ ನೈಟ್ ಲ್ಯಾಂಡಿಂಗ್ ಹಾಗು ಇತರ ಸೌಲಭ್ಯಗಳನ್ನು ಕಲ್ಪಿಸಿದರೂ ಉಡಾನ್ ಯೋಜನೆಯಿಂದ ನಗರದ ವಿಮಾನ ನಿಲ್ದಾಣವನ್ನು ಕೈಬಿಟ್ಟಿರುವುದು ಬೇಸರದ ಸಂಗತಿ. ಪ್ರಸ್ತುತ ವಿಮಾನ ನಿಲ್ದಾಣದಲ್ಲಿ ವಿಮಾನ ಸಂಚಾರ ನಿರ್ವಹಣೆ ಮತ್ತು ವಿಮಾನ ನಿಲ್ದಾಣ ನಿರ್ವಹಣೆಗಾಗಿ ಒಟ್ಟು 350 ಮಂದಿ ಸಿಬ್ಬಂದಿಗಳು ಕಾರ್ಯ ವೆಸಗುತ್ತಿದ್ದು ನಿರೀಕ್ಷಿತ ಸಂಖ್ಯೆಯ ವಿಮಾನಗಳಿಲ್ಲದೆ ಸೊರಗುತ್ತಿದೆ ಎಂದು ಅವರು ಹೇಳಿಕೆಯಲ್ಲಿ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ವಿಮಾನ ನಿಲ್ದಾಣದಿಂದ ಪ್ರತಿನಿತ್ಯ ವಿಮಾನ ಸಂಚಾರ ನಡೆಸುತ್ತಿದ್ದು ಸ್ಟಾರ್ ಏರ್ ಲೈನ್ಸ್ ವಿಮಾನ ಬೆಂಗಳೂರಿನಿಂದ ಬೆಳಿಗ್ಗೆ 11 ಗಂಟೆಗೆ ಹೊರಟು ಕಲಬುರಗಿಗೆ 12.10ಕ್ಕೆ ಆಗಮಿಸಿ 12:40ಕ್ಕೆ ಬೆಂಗಳೂರಿಗೆ ವಾಪಸ್ ಆಗುತ್ತಿದೆ. ಇದರಿಂದ ಪ್ರಯಾಣಿಕರಿಗೆ ಅನುಕೂಲವಾದರೂ ಬೆಳಿಗ್ಗೆ ವೇಳೆ ವಿಮಾನ ಸಂಚಾರವಿದ್ದರೆ ಬೆಂಗಳೂರಿಗೆ ಹೋಗಿ ಕೆಲಸ ನಿರ್ವಹಿಸಲು ಇನ್ನಷ್ಟು ನೆರವಾಗುತ್ತಿತ್ತು. ವೇಳೆ ಬದಲಾವಣೆ ಮಾಡಿದರೆ ಮಾತ್ರ ವಿಮಾನ ಸಂಸ್ಥೆಗಳು ಲಾಭದಾಯಕವಾಗಿ ಕಾರ್ಯನಿರ್ವಹಿಸಲಿದೆ. ಇಲ್ಲವಾದರೆ ಆದಾಯ ಕುಸಿತ ಕಾರಣ ಹೇಳಿ ಮತ್ತೆ



ಸಂಚಾರವನ್ನು ಸ್ಥಗಿತಗೊಳಿಸುವ ಅಪಾಯವಿದೆ. ಬಲ್ಲ ಮೂಲಗಳ ಪ್ರಕಾರ ಮೇ ತಿಂಗಳಿನಿಂದ ಸಂಚಾರ ವೇಳೆ ಬದಲಾಗುವ ಸೂಚನೆ ಇದೆ ಎಂದು ಅವರು ತಿಳಿಸಿದ್ದಾರೆ.

ಕಲಬುರಗಿಯಿಂದ ಬೆಂಗಳೂರಿಗೆ ನಿತ್ಯ ವಿಮಾನ ಸಂಚಾರ ಪ್ರಾರಂಭವಾಗಿ ಸಾಕಷ್ಟು ಪ್ರಯಾಣಿಕರು ಸಂಚರಿಸುವ ಅನುಕೂಲ ಸಿಕ್ಕಿದ್ದು ಇನ್ನಷ್ಟು ಲಾಭ ದಾಯಕವಾಗಿ ನಡೆಯಲು ಕಲಬುರಗಿ ಯಿಂದ ದೆಹಲಿ, ಮಂಗಳೂರು ಹಾಗೂ ಮುಂಬೈ ಮಾರ್ಗದಲ್ಲಿ ಶೀಘ್ರ ವಿಮಾನ ಸಂಚಾರದ ಅಗತ್ಯವಿದೆ. ಈ ಬಗ್ಗೆ ವಿಮಾನ ನಿಲ್ದಾಣ ಪ್ರಾಧಿಕಾರವು ಸಂಬಂಧಪಟ್ಟವರಿಗೆ ಮನವಿ ಮಾಡಿದರೂ ನಿಷ್ಪಯೋಜಕವಾಗಿದ್ದು ಪ್ರಯಾಣಿಕರ ದಟ್ಟಣೆ, ಹೊಸ ಮಾರ್ಗಗಳಿಗೆ ಸಂಚರ ಆರಂಭಿಸುವ ಅಗತ್ಯ ಆದಾಯ ಗಳಿಕೆಯ ವಿವಿಧ ಮಾರ್ಗಗಳು ಈ ಬಗ್ಗೆ ವಿಸ್ತೃತ ಅಧ್ಯಯನ ವರದಿ ಸಿದ್ಧಪಡಿಸಲು ಈಗಾಗಲೇ ತಯಾರಿ ನಡೆದಿದೆ ಎನ್ನಲಾಗಿದೆ. ಬೆಂಗಳೂರಿಗೆ ಸದ್ಯ ಸಂಚರಿಸುತ್ತಿರುವ ಎಲ್ಲ ರೈಲು ಗಾಡಿಗಳು ಭರ್ತಿಯಾಗಿ ಟಿಕೆಟ್‌ಗಳು ಕೂಡಾ ಲಭ್ಯವಾಗುತ್ತಿಲ್ಲ. ಮಂಗಳೂರಿಗೆ ನಿತ್ಯ ನಾಲ್ಕರಿಂದ ಐದು ಬಸ್ಸುಗಳು ಸಂಚಾರ ಮಾಡುತ್ತಿದ್ದು ದುಬಾರಿ ಟಿಕೆಟ್ ದರ ನೀಡಬೇಕಾಗಿದೆ ಮಾತ್ರವಲ್ಲ 15 ಗಂಟೆಗಳ ಪ್ರಯಾಣದ ಕಷ್ಟ ಅನುಭವಿ ಸಬೇಕಾಗಿದೆ ಎಂದು ಅವರು ಕಳವಳ ವ್ಯಕ್ತಪಡಿಸಿದ್ದಾರೆ.

ಮುಂಬೈಗೆ ಕಲ್ಯಾಣ ಕರ್ನಾಟಕ ಭಾಗದಿಂದ ಸಾಕಷ್ಟು ಜನ ರೈಲಿನಲ್ಲಿ ಸಂಚರಿಸುತ್ತಿದ್ದು ವಿಮಾನದ ಬೇಡಿಕೆ ಹೆಚ್ಚಾಗಿದೆ. ಖಾಸಗಿ ವಿಮಾನ ಸಂಸ್ಥೆಯು ಮುಂಬೈಗೆ ಸಂಚಾರ ಪ್ರಾರಂಭ ಮಾಡಲು ಉತ್ಸುಕವಾಗಿದ್ದರೂ ಮುಂ ಬೈ ವಿಮಾನ ನಿಲ್ದಾಣದಲ್ಲಿ ವಿಮಾನ ಇಳಿಯಲು ಮುಂಬೈ ವಿಮಾನ ನಿಲ್ದಾಣ ಅಧಿಕಾರಿಗಳು ಸ್ಲಾಟ್ ನೀಡದಿರುವುದು ಸಮಸ್ಯೆ ಆಗಿದೆ ಎಂದು ಅವರು ತಿಳಿಸಿದ್ದಾರೆ.

ನೂರಾರು ಕೋಟಿ ರೂ.ಗಳು ವೆಚ್ಚ ಮಾಡಿ ನಿರ್ಮಾಣಗೊಂಡ ರಾಜ್ಯದ ಎರಡನೇ ಅತಿ ಉದ್ದದ ರನ್ ವೇ ಹೊಂದಿರುವ ವಿಮಾನ ನಿಲ್ದಾಣವೆಂದು ಕಲಬುರ್ಗಿ ಹೆಸರು ಪಡೆದಿದ್ದರೂ ಎಲ್ಲವೂ ನಿಷ್ಪ್ರಯೋಜಕ ಎಂಬಂತಾಗಿದೆ. ಕಲ್ಯಾಣ ಕರ್ನಾಟಕ ಭಾಗದಲ್ಲಿ ಕೈಗಾರಿಕಾ ಅಭಿವೃದ್ಧಿ ಮತ್ತು ಐಟಿ–ಬಿಟಿ ಸ್ಥಾಪನೆಗೆ ವಿಮಾನ ಸಂಚಾರದ ಸೌಲಭ್ಯವು ಒಂದು ಮಾನದಂಡವಾಗಿದ್ದು ಕೂಡಲೇ ರಾಜ್ಯ ಸರ್ಕಾರ ಮತ್ತು ಕೇಂದ್ರ ಸರ್ಕಾರ ಜಂಟಿಯಾಗಿ ಈ ಬಗ್ಗೆ ಮುತುವರ್ಜಿ ವಹಿಸಬೇಕು ಎಂದು ಎಂದು ಡಾ. ಪೆರ್ಲ ಅವರು ಒತ್ತಾಯಿಸಿದ್ದಾರೆ.

## ಕಬಡ್ಡಿ ಪಂದ್ಯಾವಳಿ ಉದ್ಘಾಟಿಸಿದ ಬಿಜೆಪಿ ಯುವಮೋರ್ಚ ಜಿಲ್ಲಾಧ್ಯಕ್ಷರಾದ ಎಂ.ಎಸ್.ಸಿದ್ದಪ್ಪ



**ಬಳ್ಳಾರಿ, ಏ.18–** ಸಿರುಗುಪ್ಪ ವಿಧಾನಸಭಾ ಕ್ಷೇತ್ರದ ತೆಕ್ಕಲಕೋಟೆ ಪಟ್ಟಣದಲ್ಲಿ ಕರ್ನಾಟಕ ರಾಜ್ಯ ಅಮೋಚೋರ್ ಕಬ್ಬಡ್ಡಿ ಅಸೋಸಿಯೇಷನ್ (ರಿ) ಪುರುಷರ ಪ್ರೊ ಕಬಡ್ಡಿ ಪಂದ್ಯಾವಳಿ 2025 ಸೀಸನ್ 2 ವತಿಯಿಂದ ನಡೆಸುತ್ತಿದ್ದ ಕಬಡ್ಡಿ ಪಂದ್ಯಾವಳಿ ಉದ್ಘಾಟನೆ ಸಭೆಯಲ್ಲಿ ಬಿಜೆಪಿ ಯುವಮೋರ್ಚ ಜಿಲ್ಲಾಧ್ಯಕ್ಷರಾದ ಎಂ.ಎಸ್.ಸಿದ್ದಪ್ಪನವರು ಭಾಗಿಯಾಗಿ ಯುವಕರಿಗೆ ಪ್ರೋತ್ಸಾಹಿಸಿ ಶುಭ ಕೋರಲಾಯಿತು.

ಈ ಸಂದರ್ಭದಲ್ಲಿ ಪ. ಪಂ. ಅಧ್ಯಕ್ಷರಾದ ಎಸ್. ಆನಂದ, ಎಂ. ಎಸ್.ಕೊಮರಪ್ಪ, ಮುಖಂಡರಾದ ನರೇಂದ್ರ, ಪಟ್ಟಣ ಪಂಚಾಯತ್ ಸದಸ್ಯರಾದ ರಾಘವೇಂದ್ರ, ಪಿ ತಿಮ್ಮಪ್ಪ, ಮೆಹಬೂಬ, ನಸೂರು ಶೇಖರ ಗೌಡ, ನವೀನ್ ರೆಡ್ಡಿ, ದೇವೇಂದ್ರ, ಖಾದರವಲಿ, ಶಶಿ ಮತ್ತು ದೈಹಿಕ ಶಿಕ್ಷಕರಾದ ಚೆನ್ನಪ್ಪ, ರಮೇಶ, ಅಜ್ಮೇರಿ, ಉಪೇಂದ್ರ ,ಮುಂತಾದವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.ಈ ಸಂದರ್ಭದಲ್ಲಿ ಕ್ರೀಡಾಪಟುಗಳಿಗೆ ಶುಭ ಹಾರೈಸಲಾಯಿತು.

## ಮದುವೆ ಆಮಂತ್ರಣ ಕೊಡಲು ಹೋದವನಿಗೆ ಮಕ್ಕಳ ಕಳ್ಳನೆಂಬ ಹಣೆಪಟ್ಟಿ

**ಬೀದರ್, ಏ.18–** ಮದುವೆ ಸೀಸನ್ ಆರಂಭವಾಗಿದ್ದು, ಊರೂರಿಗೆ ಅಲೆದಾಡಿ ಮದುವೆ ಕಾರ್ಡ್ ಕೊಡುವುದಕ್ಕೆ ಹೋಗುವುದು ಸಾಮಾನ್ಯ. ಅದೇ ರೀತಿ ನಗರದಲ್ಲಿ ಮದುವೆ ಆಮಂತ್ರಣ ಪತ್ರಿಕೆ ಕೊಡಲು ಹೋಗಿದ್ದ ಯುವಕ ವಿಳಾಸ ಸಿಗದೇ ಅಲ್ಲಿ ಆಟವಾಡುತ್ತಿದ್ದ ಮಕ್ಕಳ ಬಳಿ ವಿಳಾಸ ವಿಚಾರಿಸಿದ್ದಾನೆ. ಆತನನ್ನೇ ಮಕ್ಕಳ ಕಳ್ಳನೆಂದು ಸ್ಥಳೀಯ ಜನತೆ ಬಿಂಬಿಸಿ ಪೊಲೀಸ್ ಠಾಣೆಗೆ ದೂರು ಕೊಟ್ಟಿದ್ದಾರೆ.

ನಗರದಲ್ಲಿ ಹಾಡಹಗಲೇ ಮಕ್ಕಳನ್ನ ಅಪಹರಿಸಲು ಖದೀಮನೊಬ್ಬನು ಯತ್ನಿಸಿದ್ದಾರೆ. ವಿದ್ಯಾನಗರ ಬಡಾವಣೆ ಮನೆಯೊಂದಕ್ಕೆ ಅಪರಿಚಿತ ಯುವಕ ನುಗ್ಗಿದ್ದಾನೆ. ನಿನ್ನೆ ಸಂಜೆ 6 ಗಂಟೆ ಸುಮಾರಿಗೆ ಆಟ ಆಡುತ್ತಿರುವ ಮಕ್ಕಳನ್ನ ಮಾತನಾಡಿ ಸುತ್ತಾ ಮನೆಗೆ ನುಗ್ಗಿದ್ದಾನೆ. ಯುವಕನ ಅಸಭ್ಯ ವರ್ತನೆಗೆ ಕಂಡು ಪೋಷಕರ ಮಕ್ಕಳು ಗಮನಕ್ಕೆ ತಂದಿದ್ದಾರೆ. ಪೋಷಕರು ಮನೆಯಿಂದ ಹೊರಕ್ಕೆ ಬರುತ್ತಿದ್ದಂತೆ ಸ್ಥಳದಿಂದ ಯುವಕ ಓಡಿ ಹೋಗಿದ್ದಾನೆ. ಯುವಕನ ದೃಶ್ಯ ಸಿಸಿಟಿವಿಯಲ್ಲಿ ಸೆರೆಯಾಗಿದ್ದು, ಈ ಬಗ್ಗೆ ಅನು ಮಾನಗೊಂಡ ಪೋಷಕರು ನಗರದ ಗಾಂಧಿ ಗಂಜ್ ಠಾಣೆಗೆ ದೂರು ಸಲ್ಲಿಸಿದ್ದರು.

ಹುಬ್ಬಳ್ಳಿಯಲ್ಲಿ 5 ವರ್ಷದ ಬಾಲಕಿಯನ್ನು ಅಪಹರಿಸಿ, ಕೆಡಿಸಿ ಕೊಲೆ ಮಾಡಿದ ಘಟನೆ ನಡೆದಿದ್ದರಿಂದ, ಬೀದರ್ ಪೊಲೀಸರು ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದ್ದರು. ಇನ್ನು ಪೊಲೀಸರು ಶಂಕಿತ ಯುವಕನನ್ನು ಪತ್ತೆ ಹಚ್ಚಿ ವಿಚಾರಣೆ ಮಾಡಿದ್ದಾರೆ. ಆಗ, ನಗರದಲ್ಲಿ ನಡೆದ ಬಾಲಕಿಯ ಅಪಹರಣಕ್ಕೆ ಯುವಕನ ಯತ್ನ ಪ್ರಕರಣಕ್ಕೆ ಟ್ವಿಸ್ಟ್ ಸಿಕ್ಕಿದೆ. ಪ್ರಕರಣದ ಕುರಿತು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ ಅವರು ಸ್ಪಷ್ಟನೆ ನೀಡಿದ್ದಾರೆ.

ನಗರದಲ್ಲಿ ಮಕ್ಕಳ ಕಿಡ್ನಾಪ್ ಮಾಡಲು ಬಂದಿದ್ದನೆಂಬ ಅಪರಿಚಿತ ಯುವಕ ತಾಲ್ಲೂಕಿನ ಔರಾದ್ ಸಿರ್ಸಿ ಗ್ರಾಮದ ನಿವಾಸಿ ಮಲ್ಲಿಕಾರ್ಜುನ್.

ತಂಗಿಯ ಮದುವೆ ನಿಮಿತ್ತು ಮದುವೆ ಆಮಂತ್ರಣ ಪತ್ರಿಕೆ ಕೊಡಲು ವಿದ್ಯಾನಗರಕ್ಕೆ ಬಂದಿದ್ದನು. ವಿಳಾಸ ಗೊತ್ತಾಗದೇ ಆ ಕುರಿತು ಮಕ್ಕಳನ್ನು ಕೇಳಿದ್ದಾನೆ. ಆ ಮಕ್ಕಳು ಹೋಗಿ ಪೋಷಕರಿಗೆ ತಿಳಿಸಿದ್ದು, ಪೋಷಕರು ಗಾಬರಿಯಿಂದ ಓಡಿ ಬಂದಿದ್ದಾರೆ.

ಪೋಷಕರು ಜೋರಾಗಿ ಕೂಗಿಕೊಂಡು ಬಂದಿದ್ದಕ್ಕೆ ಹೆದರಿ, ಅಲ್ಲಿ ಬೇರೆ ಏನೋ ಘಟನೆ ನಡೆದಿರಬೇಕು ಎಂದು ಯುವಕ ಅಲ್ಲಿಂದ ಹೊರಟು ಹೋಗಿದ್ದಾನೆ.

# ಜೋಳದರಾಶಿ ತಿಮ್ಮಪ್ಪ ನೇತೃತ್ವದಲ್ಲಿ ವಿಜಯನಗರ ಸಾಮ್ರಾಜ್ಯ ಸಂಸ್ಥಾಪನಾ ದಿನಾಚರಣೆ

**ಬಳ್ಳಾರಿ, ಏ.18–** ಅಖಂಡ ಕರ್ನಾಟಕ ವಾಲ್ಮೀಕಿ ನಾಯಕ ಒಕ್ಕೂಟದ ರಾಜ್ಯ ಕೇಂದ್ರ ಕಚೇರಿಯಲ್ಲಿ ರಾಜ್ಯಾಧ್ಯಕ್ಷ ಜೋಳದರಾಶಿ ತಿಮ್ಮಪ್ಪ ನೇತೃತ್ವದಲ್ಲಿ ವಿಜಯನಗರ ಸಾಮ್ರಾಜ್ಯ ಸಂಸ್ಥಾಪನ ದಿನಾಚರಣೆ ಕಾರ್ಯಕ್ರಮವನ್ನು ಆಚರಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಕರ್ನಾಟಕದ ಇತಿಹಾಸದಲ್ಲಿ ಭಾರತದ ಇತಿಹಾಸದಲ್ಲಿ ವಾಲ್ಮೀಕಿ ನಾಯಕರ ರಾಷ್ಟ್ರ ನಿರ್ಮಾಣಕ್ಕಾಗಿ ಪ್ರಾಣತ್ಯಾಗ, ಬಲಿದಾನರಾಗಿ ಹುತಾತ್ಮರಾಗಿದ್ದಾರೆ. ಹಲಗಲಿ ಬೇಡರು ಸ್ವಾತಂತ್ರ್ಯಹೋರಾಟದ ಮುಂಚೂಣಿ, ಬಳ್ಳಾರಿಯ ಹಂಡೆ ಹನುಮಪ್ಪ ನಾಯಕ, ಶಿವಪ್ಪ ನಾಯಕ ಚಿತ್ರದುರ್ಗ ನಾಯಕರು, ಸುರುಪುರ ನಾಯಕರು, ಇನ್ನು



ಅನೇಕ ವಾಲ್ಮೀಕಿ ನಾಯಕ ಸಮಾಜ ನಾಡಿಗೆ ತನ್ನದೇ ಆದ ಕೊಡುಗೆ ನೀಡುತ್ತಾ ಬಂದಿದೆ. ದಕ್ಷಿಣ ಭಾರತದಲ್ಲಿ ವಿಜಯನಗರ ಸಾಮ್ರಾಜ್ಯವನ್ನು ಸ್ಥಾಪನೆ ಮಾಡುವಲ್ಲಿ ವಾಲ್ಮೀಕಿ ವಂಶಸ್ಥರಾದ ಅಕ್ಕ ಬುಕ್ಕರು ಕಾರಣರಾದರು. ಕಮ್ಮಟದುರ್ಗದ ಮುಮ್ಮಡಿ ನಾಯಕನ ಮಗನಾದ ಗಂಡುಗಲಿ ಕುಮಾರರಾಮನ ಅಕ್ಕನ ಮಕ್ಕಳಾದ ಹಕ್ಕ ಮತ್ತು ಬುಕ್ಕರು ವಿದ್ಯಾರಣ್ಯ ಮಾರ್ಗದರ್ಶನದಲ್ಲಿ ವಿಜಯನಗರ ಸಾಮ್ರಾಜ್ಯದ ಅಡಿಗಲ್ಲನ್ನು ಹಾಕಿದರು. ಅದಕ್ಕೆ ಅನೇಕ ದಾಖಲೆಗಳು ಈಗಾಗಲೇ ದೊರಕಿವೆ, ಬಳ್ಳಾರಿ ಮತ್ತು ವಿಜಯನಗರ 77 ಪಾಳೆಪಟ್ಟುಗಳು, ಪಾಳೆಗಾರರ ಆಡಳಿತ, ವಿಜಯನಗರ ಸಾಮ್ರಾಜ್ಯದಲ್ಲಿ ನಾಯಕ ಸಮು ದಾಯವು ಸಾಮಂತರಾಗಿಯೂ ಕೆಲಸ ಮಾಡಿದ್ದಾರೆ. ಆದರೆ ದೇಶಕ್ಕೆ ಸ್ವಾತಂತ್ರ ದೊರಕಿದ ನಂತರ ದೇಶದಲ್ಲಿ ಪ್ರಜಾಪ್ರಭುತ್ವವು ಮತ್ತು ಸಂವಿಧಾನವು ಜಾರಿಗೆ ಬಂದಾಗ ನಮ್ಮ ಸಮುದಾಯದ ಪರಿಸ್ಥಿತಿಯು ಹೆಚ್ಚು ಕಡಿಮೆ ಆಗಿತ್ತು, ಅಜ್ಞಾನ, ಬಡತನ,ಅನಕ್ಷರಕ್ಷತೆ, ಈ ಸಮುದಾಯವನ್ನು ಬಹುಕಾಲದಿಂದ ಪೀಡಿಸುತ್ತಾ ಬರುತ್ತಿವೆ,

ಆದರೂ ನಮ್ಮ ಸಮುದಾಯವು ಶಿಕ್ಷಣ ಉದ್ಯೋಗ ರಾಜಕೀಯ ಉದ್ಯಮದಲ್ಲಿ, ಸಾಹಿತ್ಯ ಕ್ಷೇತ್ರದಲ್ಲಿ, ಇನ್ನು ಅನೇಕ ರಂಗದಲ್ಲಿ ಅಭಿವೃದ್ಧಿಯನ್ನು ಕಾಣಬೇಕು, ಆದರೆ ಇಂದಿನ ರಾಜಕಾರಣಿಗಳ ಮಲತಾಯಿ ಧೋರಣೆಯು ಸಮಾಜದ ಅಭಿವೃದ್ಧಿ ಹಿನ್ನಡೆಗೆ ಕಾರಣವಾಗಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ವಿಶೇಷ ಉಪನ್ಯಾಸ ನೀಡಿದ ಇತಿಹಾಸ ಉಪನ್ಯಾಸಕ ಡಾ.ಸೋಮನಾಥ. ಹಾಗೂ ರಾಜ್ಯಶಾಸ್ತ್ರ ಉಪನಾಸ್ಯಕ ಬಿ.ವೀರಭದ್ರಪ್ಪರವರನ್ನು ಸನ್ಮಾನಿಸಲಾಯಿತು.



ಮಾಜಿ ಕ್ರಿಕೆಟಿಗ ಅನಿಲ್ ಕುಂಬ್ಳೆ ಅವರು ಶುಕ್ರವಾರ ಬೆಂಗಳೂರಿನಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಭೇಟಿಯಾಗಿದ್ದರು.

## ಪತ್ರಕರ್ತನ ಮೇಲೆ ಅರಣ್ಯಾಧಿಕಾರಿ ಹಲ್ಲೆ

# ಅಧಿಕಾರಿ ವಿರುದ್ಧ ಕ್ರಮಕ್ಕೆ ಪತ್ರಕರ್ತರ ಸಂಘದ ಒತ್ತಾಯ



ಬಸವಕಲ್ಯಾಣ ಕಾರ್ಯನಿರತ ಪತ್ರಕರ್ತರ ಸಂಘದ ನಿಯೋಗವು ತಹಸಿಲ್ದಾರರಿಗೆ ಮನವಿ ಸಲ್ಲಿಸಿ ಬೀದರ್ ಪತ್ರರ್ಕನ ಮೇಲೆ ಅರಣ್ಯಾಧಿಕಾರಿ ಹಲ್ಲೆ ನಡೆಸಿದ್ದನ್ನು ಖಂಡಿಸಿ ಸಂಬಂಧಿಸಿದ ಅಧಿಕಾರಿ ವಿರುದ್ಧ ಕ್ರಮಕ್ಕೆ ಅಗ್ರಹಿಸಿದರು.

**ಬಸವಕಲ್ಯಾಣ, ಏ.18–** ಬೀದರ್ ನಲ್ಲಿ ಪತ್ರಕರ್ತ ರವಿ ಬೋಸುಂಡೆ ಅವರ ಮೇಲೆ ಅಮಾನ ವೀಯವಾಗಿ ಹಲ್ಲೆ ಮಾಡಿರುವ ಅರಣ್ಯ ಇಲಾಖೆಯ ನಾಲ್ಕು ಜನ ಅಧಿಕಾರಿ ಮತ್ತು ಸಿಬ್ಬಂದಿಗಳನ್ನು ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಬಸವಕಲ್ಯಾಣ ಶಾಖೆ ಒತ್ತಾಯಿಸಿದೆ.

ಸಂಘದ ಪದಾಧಿಕಾರಿಗಳು ಹಾಗೂ ಸದಸ್ಯರ ನಿಯೋಗದಿಂದ ಗುರುವಾರ ತಾಲೂಕು ಅಡಲಿತ ಸೌಧಕ್ಕೆ ತೆರಳಲಿ ಮುಖ್ಯಮಂತ್ರಿಗಳಿಗೆ ಬರೆದ ಮನವಿ ಪತ್ರವನ್ನು ತಹಸೀಲ್ದಾರ ಡಾ.ದತ್ತಾತ್ರೇಯ ಗಾದಾ ಅವರಿಗೆ ಸಲ್ಲಿಸಲಾಗಿದ್ದು, ಹಲ್ಲೆ ನಡೆಸಿದ ಅರಣ್ಯ ಇಲಾಖೆಯ ನಾಲ್ಕು ಜನ ಅಧಿಕಾರಿ ಹಾಗೂ ಸಿಬ್ಬಂದಿಯನ್ನು ಬಂಧಿಸಿ, ಅವರನ್ನು ಸೇವೆಯಿಂದ ಅಮಾನತ್ತುಗೊಳಿಸಲು ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಲಾಗಿದೆ.

15ರಂದು ರಾತ್ರಿ ಪತ್ರಕರ್ತ ರವಿ ಬೊಸುಂಡೆ ಅವರು ಮನ್ನಾಯಿಖೆಳ್ಳಿಯಿಂದ ಚಿದ್ರಿಗೆ ಆಗಮಿಸುವ ಸಂದರ್ಭದಲ್ಲಿ ಅಲ್ಲಿಯ ಜನರ ಹಾಗೂ ಅರಣ್ಯ ಅಧಿ ಕಾರಿಗಳ ಮಧ್ಯ ವಾಗ್ವಾದ ನಡೆಯುತ್ತಿತ್ತು. ನೋಡಲು ಹೋದ ರವಿ ಅವರ ಮೇಲೆ ಅರಣ್ಯ ಇಲಾಖೆಯ ನಾಲ್ಕು ಜನ ಅಧಿಕಾರಿ ಮತ್ತು ಸಿಬ್ಬಂದಿಗಳಾದ ದಸ್ತಗಿರ್, ಶಾಂತಕುಮಾರ, ಗಜಾನಂದ ಹಾಗೂ ಸಂಗಮೇಶ ಎಂಬುವವರು ಮುಗಿಬಿದ್ದು ಹಲ್ಲೆ ಮಾಡಿದ್ದಲ್ಲದೆ ಬೀದರ್‌ನ ಎಲ್ಲಡೆ ಸುತ್ತಾಡಿಸಿದ್ದು, ಈ ಅಮಾನವೀಯ ಘಟನೆ ಖಂಡಿಸಿ ಕ್ರಮಕ್ಕೆ ಒತ್ತಾಯಿಸಲಾಗಿದೆ.

# ಪ್ರೀತಿಸಿ ಮದುವೆಯಾಗಿದ್ದ ಜೋಡಿಯನ್ನು ದೂರ ಮಾಡಿದ ಪೋಷಕರು

**ರಾಯಚೂರು, ಏ.18–** ಚೆಲುವಿನ ಚಿತ್ತಾರ ಕನ್ನಡ ಚಿತ್ರದ ದುರಂತ ಅಂತ್ಯದ ಮಾದರಿಯಲ್ಲೇ ಜಿಲ್ಲೆಯಲ್ಲಿ ಘಟನೆಯೊಂದು ನಡೆದಿದ್ದು, ಪ್ರೀತಿಸಿ ಮದುವೆಯಾಗಿ ಜೀವನ ಸಾಗಿಸುತ್ತಿದ್ದ ಜೋಡಿಯನ್ನು ಹೆತ್ತವರೇ ದೂರ ಮಾಡಿದ ಘಟನೆಯಿದು.

ಲಿಂಗಸುಗೂರ ತಾಲ್ಲೂಕಿನ ಈಚನಾಳ ಗ್ರಾಮದಲ್ಲಿ ಈ ಘಟನೆ ನಡೆದಿದ್ದು, ಗ್ರಾಮದ ರಮೇಶ್ ಮತ್ತು ಯಶೋಧ ಇಬ್ಬರೂ ಕಳೆದ 6 ವರ್ಷಗಳಿಂದ ಪರಸ್ಪರ ಪ್ರೀತಿಸುತಿದ್ದರು. ಇವರಿಬ್ಬರ ಪ್ರೀತಿಗೆ ಮನೆಯಲ್ಲಿ ವಿರೋಧವಿದ್ದರಿಂದ ರಮೇಶ್, ಯಶೋದಳೊಂದಿಗೆ ಸಿಂಧನೂರು ರಿಜಿಸ್ಟರ್ ಆಫೀಸಿನಲ್ಲಿ ಮದುವೆಯಾಗಿ, ಬೆಂಗಳೂರಿಗೆ ಕರೆತಂದಿದ್ದನು.


ಮಗಳು ಬೇರೆ ಜಾತಿಯವರನ್ನು ಮದುವೆಯಾಗಿದ್ದಾಳೆ ಎಂಬ ಕಾರಣಕ್ಕೆ ಯುವತಿಯ ಮನೆಯವರಿಗೆ ಕೋಪವಿತ್ತು. ಮಗಳು ಕಾಣೆಯಾಗಿದ್ದಾಳೆ ಎಂದು ಯಶೋಧಳ ತಂದೆ ಪೊಲೀಸ್ ಠಾಣೆಗೆ ದೂರು ನೀಡಿ, ಮಗಳನ್ನು ಹುಡುಕಿಕೊಡುವಂತೆ ಪೊಲೀಸರಿಗೆ ಮನವಿ ಮಾಡಿದ್ದರು. ದೂರು ದಾಖಲಿಸಿಕೊಂಡಿದ್ದ ಪೊಲೀಸರು ಬೆಂಗಳೂರಿಗೆ ತೆರಳಿ ರಮೇಶ್ ಮತ್ತು ಯಶೋದಳನ್ನು ಕರೆದುಕೊಂಡು ಬಂದಿದ್ದರು. ನವಜೋಡಿಗಳನ್ನು ಹುಡುಕಿ ರಾಯಚೂರಿಗೆ ಕರೆತಂದಿದ್ದ ಪೊಲೀಸರು, ಯಶೋಧಳನ್ನು ಆಕೆಯ ಕುಟುಂಬಸ್ಥರ ಜೊತೆ ಕಳುಹಿಸಿ ಕೊಟ್ಟಿದ್ದರು.

ಇದರಿಂದ ಬೇಸರಗೊಂಡ ರಮೇಶ್ ಮಾಧ್ಯಮದ ಮುಂದೆ ತನ್ನ ಅಳಲು ತೋಡಿಕೊಂಡಿದ್ದು. ಕಾನೂನು ಪ್ರಕಾರ ಮದುವೆಯಾದ ನಮ್ಮನ್ನು ದೂರ ಮಾಡಿದ್ದಾರೆ. ಹೆದರಿಸಿ ಬೆದರಿಸಿ ನನ್ನ ಹೆಂಡತಿಯನ್ನು ಅವಳ ಪೋಷಕರು ಕರೆದೊಯ್ದಿದ್ದಾರೆ.

ಅಲ್ಲದೇ ನನಗೂ ಸಹ ಜೀವ ಬೆದರಿಕೆ ಹಾಕಿದ್ದಾರೆ. ನ್ಯಾಯ ಕೊಡಿಸಬೇಕಾದ ಪೊಲೀಸರ ಕೂಡ ಅನ್ಯಾಯದ ಪರ ನಿಂತಿದ್ದಾರೆ ಎಂದು ರಮೇಶ್ ಆರೋಪಿಸಿದ್ದು, ಯಶೋಧಳ ಪೋಷಕರು ಆಕೆಗೆ ಮತ್ತೊಂದು ಮದುವೆ ಮಾಡಿಸಲು ತಯಾರಿ ನಡೆಸಿದ್ದಾರೆ ಎಂದು ರಮೇಶ್ ಕಣ್ಣೀರಾಕಿದ್ದಾನೆ. ಅಲ್ಲದೆ ಸ್ವತಃ ಯಶೋಧ ನನಗೆ ಸಂದೇಶ ಕಳುಹಿಸಿ ಪೊಲೀಸರಿಗೆ ದೂರು ನೀಡುವಂತೆ ಹೇಳಿದ್ದಾಳೆ. ನನ್ನ ಹೆಂಡತಿಯನ್ನು ನನಗೆ ಕೊಡಿಸಿ ಎಂದು ರಮೇಶ್ ಮನವಿ ಮಾಡಿದ್ದಾನೆ.

# ಬಸವ ಜಯಂತಿ: ರಾಯಚೂರಿನಲ್ಲಿ ಸಿದ್ಧತಾ ಸಭೆ

**ರಾಯಚೂರು, ಏ.18–** ಜಿಲ್ಲಾಡಳಿತದಿಂದ ಏಪ್ರಿಲ್ 30 ರಂದು ನಡೆಯಲಿರುವ ಜಗಜ್ಯೋತಿ ಬಸವ ಜಯಂತ್ಯುತ್ಸವ ಅಚರಣೆಗೆ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಬೇಕೆಂದು ಅಪರ ಜಿಲ್ಲಾಧಿಕಾರಿ ಶಿವಾನಂದ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.



ರಾಯಚೂರು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಅಪರ ಜಿಲ್ಲಾಧಿಕಾರಿ ಶಿವಾನಂದ ಅಧ್ಯಕ್ಷತೆಯಲ್ಲಿ ಬಸವ ಜಯಂತಿ ಪೂರ್ವ ಸಿದ್ಧತಾ ಸಭೆ ಜರುಗಿತು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಬಸವ ಜಯಂತಿ ಉತ್ಸವದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಪ್ರತಿ ವರ್ಷದಂತೆ ಈ ವರ್ಷವೂ ಅದ್ದೂರಿಯಾಗಿ ಹಾಗೂ ವಿಜೃಂಭಣೆಯಿಂದ ಜಯಂತಿಯನ್ನು ಆಚರಿಸಲು ಅಗತ್ಯ ಕ್ರಮಕೈಗೊಳ್ಳ ಬೇಕು. ಏಪ್ರಿಲ್ 30ರ ಬೆಳಿಗ್ಗೆ 9 ಗಂಟೆಗೆ ನಗರದ ವೀರಶೈವ ಕಲ್ಯಾಣ ಮಂಟಪದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದೆ.

ಅಂದು ಸಂಜೆ ಮೆರವಣಿಗೆ ನಡೆಯಲಿದ್ದು, ಈ ಜಯಂತಿ ಕಾರ್ಯಕ್ರಮಗಳಲ್ಲಿ ಅಧಿಕಾರಿಗಳು ಹಾಗೂ ಸಿಬ್ಬಂದಿ ತಪ್ಪದೇ ಹಾಜರಿರಬೇಕು. ಸಮಾಜದ ಮುಖಂಡರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ತಿಳಿಸಿದರು.

ಮಹಾತ್ಮರ ಭಾವಚಿತ್ರಗಳಿಗೆ ಮಾಲಾರ್ಪಣೆ, ಪೂಜಾ ಕಾರ್ಯಕ್ರಮ ಸರಿಯಾಗಿ ನಡೆಯಬೇಕು. ಹೂದಾನಿಗಳಿಂದ ವೇದಿಕೆಯನ್ನು ಅಲಂಕಾರಗೊಳಿಸಬೇಕು. ವೀರಶೈವ ಕಲ್ಯಾಣ ಮಂಟಪದಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಹಾಗೂ ಸ್ವಚ್ಛತೆ ಕಾಪಾಡಲು ಮಹಾನಗರ ಪಾಲಿಕೆಯ ಅಧಿಕಾರಿಗಳು ಮತ್ತು ಸಿಬ್ಬಂದಿ ಅಗತ್ಯ ಕ್ರಮವಹಿಸಬೇಕು. ಶಿಷ್ಟಾಚಾರ ಪ್ರಕಾರ ಆಹ್ವಾನ ಪತ್ರಿಕೆಯನ್ನು ಮುದ್ರಿಸಿ ಗಣ್ಯರಿಗೆ ತಲುಪಿಸಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಸರ್ಕಾರಿ, ಅರೆ ಸರಕಾರಿ ಕಚೇರಿಗಳಲ್ಲಿ ಕಡ್ಡಾಯವಾಗಿ ಜಯಂತಿಯನ್ನು ಆಚರಣೆ ಮಾಡಬೇಕು. ಮಹಾತ್ಮರ ವಿಚಾರಧಾರೆಗಳು, ಜೀವನ ಸಿದ್ಧಾಂತಗಳನ್ನು ಸಾರ್ವಜನಿಕರಿಗೆ ಪರಿಚಯಿಸುವ ಸಲುವಾಗಿ ಜಯಂತಿಗಳನ್ನು ಅರ್ಥಪೂರ್ಣವಾಗಿ ಆಚರಿಸಬೇಕಿದೆ. ಮಹಾತ್ಮರ ಜಯಂತಿಗಳನ್ನು ಒಂದು ಜಾತಿ, ಸಮುದಾಯಗಳಿಗೆ ಸೀಮಿತಗೊಳಿಸಬಾರದು, ಎಲ್ಲರೂ ಭಾಗಿಯಾಗಬೇಕು ಎಂದು ಅವರು ಸಭೆಯ ಮೂಲಕ ಸಾರ್ವಜನಿಕರಲ್ಲಿ ಮನವಿ ಮಾಡಿದರು.

ಇದೇ ಸಂದರ್ಭದಲ್ಲಿ ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಕೆ.ಬಿ.ಬಡಿಗೇರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ದತ್ತಪ್ಪ ಸಾಗೂರು, ರಾಯಚೂರು ಮಹಾನಗರ ಪಾಲಿಕೆಯ ಸಮುದಾಯ ಸಂಘಟನಾ ಅಧಿಕಾರಿ ಕೃಷ್ಣ ಕಟ್ಟಿಮನಿ, ವಾರ್ತಾ ಇಲಾಖೆಯ ಗವಿಸಿದ್ದಪ್ಪ ಹೊಸಮನಿ, ಸಮಾಜದ ಮುಖಂಡರಾದ ಚಂದ್ರಶೇಖರ ಪಾಟೀಲ, ಪರಮೇಶ್ವರ ಸಾಲಿಮಠ, ರಾಚನಗೌಡ, ಹರವಿ ನಾಗನಗೌಡ, ಅಶೋಕ ಪಾಟೀಲ ಅತ್ತನೂರ, ಶಿವಾನಂದ, ವೀರನಗೌಡ ಬಂಡಿ, ಎಂ.ಚನ್ನಬಸವ, ಜೆ.ಬಸವರಾಜ, ಮಲ್ಲಿಕಾರ್ಜುನ ಗುಡಿಮನಿ, ಎಸ್.ಜಿ.ಕಲ್ಲಯ್ಯಸ್ವಾಮಿ, ಆನಂದಕಮಾರ, ವಿಜಯಕುಮಾರ ಸಜ್ಜನ, ಪ್ರತಿಭಾ ಗೋನಾಳ, ಶಿವಯೋಗಿ ಪಾಟೀಲ ಸೇರಿದಂತೆ ವೀರಶೈವ ಲಿಂಗಾಯತ ಸಮಾಜ, ಜಾಗತಿಕ ಲಿಂಗಾಯತ ಮಹಾಸಭಾ ಮತ್ತು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಪದಾಧಿಕಾರಿಗಳು ಹಾಗು ಇನ್ನಿತರ ಸಮುದಾಯಗಳ ಸಂಘಟಿಕರು ಮತ್ತು ಗಣ್ಯರು ಇದ್ದರು.

# ವಿಶ್ವಸಂಸ್ಥೆ ಭದ್ರತಾ ಮಂಡಳಿ ವಿಸ್ತರಣೆಯಾದರೆ ಭಾರತಕ್ಕೆ ಸ್ಥಾನ

**ವಿಶ್ವಸಂಸ್ಥೆ, ಏ.18:** ವಿಶ್ವಸಂಸ್ಥೆಯ ಭದ್ರತಾ ಮಂಡಳಿಯನ್ನು ವಿಸ್ತರಿಸುವ ಬಗ್ಗೆ ನಿರ್ಧಾರ ತೆಗೆದುಕೊಂಡರೆ, ಖಂಡಿತವಾಗಿಯೂ ಭಾರತವು ಸ್ಪರ್ಧಿಯಾಗಲಿದೆ ಎಂದು ಯುಎನ್‌ಎಸ್ಸಿ ಸುಧಾರಣೆಗಳ ಕುರಿತ ಅಂತರ್ ಸರ್ಕಾರಿ ಮಾತುಕತೆಗಳ ಅಧ್ಯಕ್ಷರು ಹೇಳಿದ್ದಾರೆ. ಈ ಸುಧಾರಿತ ಮಂಡಳಿಯ ಗುರಿ ಪ್ರಾತಿನಿಧಿಕವಾಗಿರಬೇಕು. ನಿಸ್ಸಂಶಯವಾಗಿ, ಭಾರತವು ಇಂದು ವಿಶ್ವ ವೇದಿಕೆಯಲ್ಲಿ ಪ್ರಮುಖ ದೇಶವಾಗಿದೆ. ಆದರೆ ವಿಶ್ವಸಂಸ್ಥೆ 193 ದೇಶಗಳ ಸದಸ್ಯತ್ವವನ್ನು ಹೊಂದಿದೆ. ಈ ಪರಿಗಣನೆಯು ಎಲ್ಲರಿಗೂ ಮತ್ತು ವಿಶ್ವಸಂಸ್ಥೆಯ ಸಂಪೂರ್ಣ ಸದಸ್ಯತ್ವವನ್ನು ಪ್ರತಿನಿಧಿಸುತ್ತದೆ ಎಂದು ರಾಯಭಾರಿ ತಾರಿಕ್ ಅಲ್ಬನಾಯ್ ಪತ್ರಿಕಾಗೋಷ್ಠಿಯಲ್ಲಿ ಹೇಳಿದರು.



ಆದ್ದರಿಂದ, ಮಂಡಳಿಯ ವಿಸ್ತರಣೆಯು 21 ರಿಂದ 27 ಸದಸ್ಯರನ್ನು ಹೊಂದುವ ನಿರ್ಧಾರವನ್ನು ತೆಗೆದುಕೊಂಡರೆ, ಖಂಡಿತವಾಗಿಯೂ ಭಾರತವು ಅದರಲ್ಲಿ ಸ್ಪರ್ಧಿಯಾಗಲಿದೆ ಮತ್ತು ವ್ಯಾಪಕ ಸದಸ್ಯತ್ವದ ನಿರ್ಧಾರಕ್ಕೆ ಒಳಪಟ್ಟಿರುತ್ತದೆ ಎಂದು ಅಲ್ಬನಾಯ್ ಪಿಟಿಐ ಪ್ರಶ್ನೆಯೊಂದಕ್ಕೆ ಉತ್ತರಿಸಿದರು. ವಿಶ್ವಸಂಸ್ಥೆಯಲ್ಲಿ ಕುವೈತ್‌ನ ಕಾಯಂ ಪ್ರತಿನಿಧಿಯಾಗಿರುವ ಅಲ್ಬನಾಯ್, ಕಳೆದ ವರ್ಷ ತಾವು ಮತ್ತು ಆಸ್ಟ್ರಿಯಾದ ಸಹ–ಅಧ್ಯಕ್ಷ ಅಲೆಕ್ಸಾಂಡರ್ ಮಾರ್ಶಿಕ್ ಭಾರತಕ್ಕೆ ಭೇಟಿ ನೀಡಿ ಅಲ್ಲಿ ಉನ್ನತ ಮಟ್ಟದಲ್ಲಿ ಸಂಭಾಷಣೆ ನಡೆಸಿದ್ದೇವೆ ಎಂದು ನೆನಪಿಸಿಕೊಂಡರು. ಯುಎನ್‌ಎಸ್ಸಿ ಸುಧಾರಣೆಯ ವಿಷಯದ ಬಗ್ಗೆ. ಪ್ರಸ್ತುತ 79 ನೇ ಅಧಿವೇಶನದಲ್ಲಿ ಐಜಿಎನ್ ಪ್ರಕ್ರಿಯೆಯಲ್ಲಿ ಸಾಧಿಸಿದ ಪ್ರಗತಿಯ ಬಗ್ಗೆ. ನವೀಕರಿಸಿದ ರಾಯಭಾರಿ, ಸುಧಾರಣೆಯ ಹಾದಿ ನಿರಾಕರಿಸಲಾಗದಷ್ಟು ಸಂಕೀರ್ಣವಾಗಿದ್ದರೂ, ನಾವು ಮುಂದಿನ ಹಾದಿಯತ್ತ ಸ್ಥಿರ ಮತ್ತು ಅರ್ಥಪೂರ್ಣ ಕ್ರಮಗಳನ್ನು ತೆಗೆದುಕೊಳ್ಳುತ್ತಿದ್ದೇವೆ ಎಂದು ಹೇಳಿದರು.


1965 ರಲ್ಲಿ ಚುನಾಯಿತ ಸದಸ್ಯರ ಸಂಖ್ಯೆಯಲ್ಲಿನ ಹೆಚ್ಚಳವನ್ನು ಹೊರತುಪಡಿಸಿ, ಭದ್ರತಾ ಮಂಡಳಿಯ ಮೊದಲ ಪುನರಾವರ್ತನ 80 ವರ್ಷಗಳಿಗಿಂತ ಹೆಚ್ಚು ಕಾಲ ನಡೆಯಿತು ಎಂದು ಅವರು ಗಮನಿಸಿದರು. ಸುಧಾರಿತ ಮಂಡಳಿಯು ಯಾವುದೇ ಸೂತ್ರೀಕರಣವನ್ನು ತೆಗೆದುಕೊಂಡರೂ, ಅದನ್ನು ಒಳಗೊಳ್ಳುವಿಕೆ, ಪಾರದರ್ಶಕತೆ, ದಕ್ಷತೆ, ಪರಿಣಾಮಕಾರಿತ್ವ, ಪ್ರಜಾಪ್ರಭುತ್ವ ಮತ್ತು ಉತ್ತರದಾಯಿತ್ವದ ತತ್ವಗಳ ಆಧಾರದ ಮೇಲೆ ಮುಂದಿನ ಶತಮಾನದವರೆಗೆ ಉಳಿಯುವಂತ ವಿನ್ಯಾಸಗೊಳಿಸಬೇಕು. ವಿಸ್ತ್ರತ ಯುಎನ್‌ಎಸ್ಸಿ ಎಷ್ಟು ಸದಸ್ಯರನ್ನು ಹೊಂದಿರಬೇಕು ಎಂಬ ಪ್ರಶ್ನೆಗೆ ಉತ್ತರಿಸಿದ ಅವರು, ಇನ್ನೂ ಯಾವುದೇ ನಿರ್ಧಾರವಾಗಿಲ್ಲ ಆದರೆ ಈಗಿರುವ 21 ರಿಂದ 27 ಸದಸ್ಯ ರಾಷ್ಟ್ರಗಳ ನಡುವೆ ಇರುತ್ತವೆ ಎಂದು ಹೇಳಿದರು.



ರಷ್ಯಾದ ಮಾಸ್ಕೋದಲ್ಲಿ ನಡೆಯಲಿರುವ 47ನೇ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವದ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಲು ಆಗಮಿಸಿದ ಅತಿಥಿಗಳ ಸಂಭ್ರಮದ ಕ್ಷಣ...

# ಮೊದಲು ಅಲ್ಪಸಂಖ್ಯಾತ ಹಿಂದುಗಳ ಮೇಲಿನ ದೌರ್ಜನ್ಯ ತಡೆಗೆ ಗಮನ ಕೊಡಿ: ಬಾಂಗ್ಲಾಗೆ ಭಾರತ ತಿರುಗೇಟು

**ನವದೆಹಲಿ,ಏ.18:** ವಕ್ಫ್ ಕಾನೂನಿನಿಂದಾಗಿ ಪಶ್ಚಿಮ ಬಂಗಾಳದಲ್ಲಿ ನಡೆದ ಹಿಂಸಾಚಾರದ ಕುರಿತು ಬಾಂಗ್ಲಾದೇಶ ನೀಡಿದ ಹೇಳಿಕೆಗಳನ್ನು ಭಾರತ ಬಲವಾಗಿ ಖಂಡಿಸಿದೆ, ಇಂತಹ ಕಪಟ ಹೇಳಿಕೆಗಳ ಮೂಲಕ ಬಾಂಗ್ಲಾದೇಶದಲ್ಲಿ ನಡೆಯುತ್ತಿರುವ ಅಲ್ಪಸಂಖ್ಯಾತರ ಮೇಲಿನ ಕಿರುಕುಳದ ಗಮನವನ್ನು ಬೇರೆಡೆ ಸೆಳೆಯುವ ಪ್ರಯತ್ನ ಭಾಗ ಎಂದು ಭಾರತದ ವಿದೇಶಾಂಗ ಸಚಿವಾಲಯ ತಿರುಗೇಟು ನೀಡಿದೆ.



ಪಶ್ಚಿಮ ಬಂಗಾಳದ ಮುರ್ಷಿದಾಬಾದ್‌ನಲ್ಲಿ ನಡೆದ ಹಿಂಸಾಚಾರವನ್ನು ಖಂಡಿಸಿದ್ದಕ್ಕಾಗಿ ಭಾರತವು ಬಾಂಗ್ಲಾದೇಶವನ್ನು ತರಾಟೆಗೆ ತೆಗೆದುಕೊಂಡಿದ್ದು, ಈ ವಿಷಯದ ಬಗ್ಗೆ ಢಾಕಾದ ನಿಲುವನ್ನು "ಅನಗತ್ಯ ಹೇಳಿಕೆ" ಎಂದು ಕರೆದಿದೆ. ಈ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿರುವ ವಿದೇಶಾಂಗ ವ್ಯವಹಾರಗಳ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, "ಪಶ್ಚಿಮ ಬಂಗಾಳದಲ್ಲಿ ನಡೆದ ಘಟನೆಗಳಿಗೆ ಸಂಬಂಧಿಸಿದಂತೆ ಬಾಂಗ್ಲಾದೇಶದ ಕಡೆಯಿಂದ ಬಂದ ಹೇಳಿಕೆಗಳನ್ನು ನಾವು ತಿರಸ್ಕರಿಸುತ್ತೇವೆ.

ಬಾಂಗ್ಲಾದೇಶದಲ್ಲಿ ಅಲ್ಪಸಂಖ್ಯಾತ ಹಿಂದೂಗಳ ಮೇಲೆ ನಡೆಯುತ್ತಿರುವ ಕಿರುಕುಳದ ಬಗ್ಗೆ ಭಾರತದ ಕಳವಳಗಳಿಗೆ ಸಮಾನಾಂತರವಾಗಿ ಬಂಗಾಳ ಘಟನೆಯನ್ನು ಚಿತ್ರಿಸುವ ಕವಟ ಪ್ರಯತ್ನವಾಗಿದೆ. ಬಾಂಗ್ಲಾದೇಶದಲ್ಲಿ ಅಂತಹ ಕೃತ್ಯಗಳ ಅಪರಾಧಿಗಳು ಮುಕ್ತವಾಗಿ ತಿರುಗಾಡುತ್ತಿದ್ದಾರೆ ಎಂದು ಕಿಡಿಕಾರಿದರು.

ಸುಪ್ರೀಂ ಕೋರ್ಟ್ ನಿಲುವನ್ನು ಸ್ವಾಗತಿಸಿದ ವಿರೋಧಪಕ್ಷಗಳು: ವಕ್ಸ್ ತಿದ್ದುಪಡಿ ಕಾಯ್ದೆ ವಿರುದ್ಧ ಹೋರಾಟ ಮುಂದುವರಿಸಲು ನಿರ್ಧಾರ ಅಲ್ಪ ಸಂಖ್ಯಾತ ಹಿಂದೂಗಳ ಮೇಲಿನ ದೌರ್ಜನ್ಯದ ಕುರಿತು ಗಮನಕೂಡಿ.

ಇದೇ ವೇಳೆ 'ಅನಗತ್ಯ ಹೇಳಿಕೆಗಳನ್ನು ನೀಡುವ ಬದಲು, ಬಾಂಗ್ಲಾದೇಶ ತನ್ನದೇ ಆದ ಅಲ್ಪಸಂಖ್ಯಾತ ಹಿಂದೂಗಳ ಹಕ್ಕುಗಳನ್ನು ರಕ್ಷಿಸುವತ್ತ ಗಮನಹರಿಸುವುದು ಉತ್ತಮ" ಎಂದು ಅವರು ಹೇಳಿದರು.

ಏಪ್ರಿಲ್ 8 ರಂದು ಭುಗಿಲೆದ್ದ ಹಿಂಸಾಚಾರದಲ್ಲಿ ತನ್ನ ಪಾತ್ರವಿದೆ ಎಂಬ ಆರೋಪಗಳನ್ನು ತಿರಸ್ಕರಿಸಿದ ಬಾಂಗ್ಲಾದೇಶದ ಪತ್ರಿಕಾ ಕಾರ್ಯದರ್ಶಿ ಶಫಿಕುಲ್ ಅಲಂ, "ಅಲ್ಪಸಂಖ್ಯಾತ ಮುಸ್ಲಿಂ ಜನಸಂಖ್ಯೆಯನ್ನು ಸಂಪೂರ್ಣವಾಗಿ ರಕ್ಷಿಸಲು ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳುವಂತ ನಾವು ಭಾರತ ಮತ್ತು ಪಶ್ಚಿಮ ಬಂಗಾಳ ಸರ್ಕಾರವನ್ನು ಒತ್ತಾಯಿಸುತ್ತೇವೆ ಎಂದು ಹೇಳಿದ್ದರು.

# ಭಾರತದೊಂದಿಗೆ ಭೂ ಸಂಪರ್ಕ ಯೋಜನೆ ತಿರಸ್ಕರಿಸಿದ ಶ್ರೀಲಂಕಾ: ವರದಿ

**ಕೊಲಂಬೊ/ನವದೆಹಲಿ, ಏ.18:** ರಸ್ತೆ ಮತ್ತು ರೈಲು ಸೇತುವೆಯ ಮೂಲಕ ಎರಡೂ ದೇಶಗಳನ್ನು ಸಂಪರ್ಕಿಸುವ ಭೂ ಸಂಪರ್ಕ ಯೋಜನೆಯ ನಿರ್ಮಾಣಕ್ಕಾಗಿ ಭಾರತದ ಪ್ರಸ್ತಾವನೆಯನ್ನು ಶ್ರೀಲಂಕಾ ತಿರಸ್ಕರಿಸಿದೆ, ಭೂ ಸಂಪರ್ಕಕ್ಕೆ ಇನ್ನೂ ಸಿದ್ಧವಾಗಿಲ್ಲ ಎಂದು ಹೇಳಿದೆ ಎಂದು ಮಾಧ್ಯಮ ವರದಿಯೊಂದು ತಿಳಿಸಿದೆ.



ಈ ತಿಂಗಳ ಆರಂಭದಲ್ಲಿ ಕೊಲಂಬೊದಲ್ಲಿ ಶ್ರೀಲಂಕಾ ಅಧ್ಯಕ್ಷ ಅನುರ ಕುಮಾರ್ ದಿಸಾನಾಯಕೆ ಅವರೊಂದಿಗಿನ ಸಭೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಈ ಪ್ರಸ್ತಾವನೆಯನ್ನು ಎತ್ತಿದ್ದಾರೆ ಎಂದು ಡೈಲಿ ಮಿರರ್ ವರದಿ ಮಾಡಿದೆ.

ಕಳೆದ ವರ್ಷ ಡಿಸೆಂಬರ್‌ನಲ್ಲಿ ಅಧ್ಯಕ್ಷ ದಿಸಾನಾಯಕೆ ಅವರ ಭೇಟಿಯ ಸಮಯದಲ್ಲಿ ನವದೆಹಲಿ ಪ್ರಸ್ತಾಪಿಸಿದ್ದ ಪ್ರಸ್ತಾವನೆಯನ್ನು ತಿರಸ್ಕರಿಸಲಾಯಿತು, ಅದು ಅಸಾಧ್ಯವೆಂದು ಪರಿಗಣಿಸಲಾಯಿತು. ಏಪ್ರಿಲ್‌ನಲ್ಲಿ ಅವರ ಇತ್ತೀಚಿನ ಸಭೆಯಲ್ಲಿ, ಈ ವಿಷಯವು ಚರ್ಚೆಯ ಭಾಗವಾಗಿರಲಿಲ್ಲ ಎಂದು ದಿನಪತ್ರಿಕೆ ಹೇಳಿದೆ.

ಇನ್ನೂ, ಇತ್ತೀಚಿನ ದ್ವಿಪಕ್ಷೀಯ ಮಾತುಕತೆಯ ಸಂದರ್ಭದಲ್ಲಿ ಒಂದು ಸಂದರ್ಭದಲ್ಲಿ, ಪ್ರಧಾನಿ ಮೋದಿ ಅವರು ಉಭಯ ದೇಶಗಳ ನಡುವಿನ ಭೂ ಸಂಪರ್ಕದ ಮಹತ್ವ ಮತ್ತು ಅದು ತರಬಹುದಾದ ಹಲವು ಪ್ರಯೋಜನಗಳನ್ನು ಉಲ್ಲೇಖಿಸಿದರು.

2002/2004 ರಲ್ಲಿ ಆಗಿನ ಪ್ರಧಾನಿ ರನಿಲ್ ವಿಕ್ರಮಸಿಂಘೆ ನೇತೃತ್ವದ ಸರ್ಕಾರದ ಅವಧಿಯಲ್ಲಿ ಎರಡೂ ದೇಶಗಳನ್ನು ಸಂಪರ್ಕಿಸುವ ಭೂ ಸೇತುವೆಯ ಬಗ್ಗೆ ಮೊದಲು ಚರ್ಚಿಸಲಾಯಿತು. 2023 ರಲ್ಲಿ ಪ್ರಧಾನಿ ವಿಕ್ರಮಸಿಂಘೆ ಅವರು ರಾಷ್ಟ್ರಪತಿಯಾಗಿ ನವದೆಹಲಿಗೆ ಭೇಟಿ ನೀಡಿದ ಜಂಟಿ ಹೇಳಿಕೆಯಲ್ಲಿ ಭೂ ಸಂಪರ್ಕ ಯೋಜನೆಯ ಬಗ್ಗೆಯೂ ಉಲ್ಲೇಖಿಸಲಾಗಿದೆ.

ಭೇಟಿಯ ನಂತರ ಭಾರತೀಯ ವಾಯುಪಡೆಯ ಹೆಲಿಕಾಪ್ಟರ್‌ನಲ್ಲಿ ಶ್ರೀಲಂಕಾದಿಂದ ಹೊರಟು ಪ್ರಧಾನಿ ಮೋದಿ, ಪ್ರಾಚೀನ ಕಾಲದಲ್ಲಿ ಶ್ರೀಲಂಕಾ ಮತ್ತು ಭಾರತವನ್ನು ಸಂಪರ್ಕಿಸುವ ರಾಮ ಸೇತುವನ್ನು ವೀಕ್ಷಿಸಿದರು.

ಶ್ರೀರಾಮನ ಸೈನ್ಯವು ಲಂಕಾಕ್ಕೆ ದಂಡಯಾತ್ರೆ ಮಾಡುವಾಗ ನಿರ್ಮಿಸಿದೆ ಎಂದು ಹೇಳಲಾಗುವ ಪ್ರಾಚೀನ ಭೂ ಸೇತುವೆಯನ್ನು ಭಾರತ ಮತ್ತು ಶ್ರೀಲಂಕಾ ಎರಡರಲ್ಲೂ ಅದರ ಭೌಗೋಳಿಕ, ಐತಿಹಾಸಿಕ ಮತ್ತು ಪೌರಾಣಿಕ ಮಹತ್ವಕ್ಕಾಗಿ ಆಚರಿಸಲಾಗುತ್ತದೆ.

# ಮರಳಿ ಅಮೆರಿಕ ವೀಸಾ ಸೌಲಭ್ಯ ಪಡೆದ 1000ಕ್ಕೂ ಅಧಿಕ ವಿದ್ಯಾರ್ಥಿಗಳು

**ವಾಷಿಂಗ್ಟನ್,ಏ.18:** ಅಮೆರಿಕದಲ್ಲಿ ಇತ್ತೀಚಿನ ವಾರಗಳಲ್ಲಿ 1 ಸಾವಿರಕ್ಕೂ ಅಧಿಕ ವಿದೇಶಿ ವಿದ್ಯಾರ್ಥಿಗಳಿಗೆ ವೀಸಾ ನೀಡಲಾಗಿದೆ ಅಥವಾ ಅಮೆರಿಕದಲ್ಲಿ ಅವರುಗಳ ವಾಸ್ತವ್ಯಕ್ಕೆ ಕಾನೂನು ಮಾನ್ಯತೆ ದೊರೆತಿದೆ. ಅಲ್ಲದೆ, ಅಮೆರಿಕದಲ್ಲಿ ವಾಸ್ತವ್ಯ ಹೂಡಲು ಇದ್ದ ಅನುಮತಿಯನ್ನು ಡೊನಾಲ್ಡ್ ಟ್ರಂಪ್ ಆಡಳಿತವೂ ಏಕಾಏಕಿ ಹಿಂಪಡೆದಿದೆ ಎಂದು ಹಲವಾರು ಮಂದಿ ಸರ್ಕಾರದ ವಿರುದ್ಧ ಮೊಕದ್ದಮೆ ಹೂಡಿದ್ದಾರೆ. ವಿದ್ಯಾರ್ಥಿಗಳ ಕಾನೂನು ಮಾನ್ಯತೆ ರದ್ದುಪಡಿಸುವ ಒಕ್ಕೂಟ ಸರ್ಕಾರದ ನಿರ್ಧಾರದಿಂದ ಸಾವಿರಾರು ವಿದ್ಯಾರ್ಥಿಗಳು, ಬಲವಂತದಿಂದ ಸ್ವದೇಶಕ್ಕೆ ಕಳುಹಿಸಲಾಗುವ ಭೀತಿ ಎದುರಿಸುತ್ತಿದ್ದರು. ಇವರಲ್ಲಿ ಹಾರ್ವರ್ಡ್‌ರ, ಸ್ಟ್ಯಾನ್ಫೋರ್ಡ್ ಸೇರಿ ಹಲವು ವಿ.ವಿಗಳಲ್ಲದೆ, ವಿವಿಧ ಶಿಕ್ಷಣ ಸಂಸ್ಥೆಗಳ ವಿದ್ಯಾರ್ಥಿಗಳಿದ್ದರು. ಶಿಕ್ಷಣ ಸಂಸ್ಥೆಗಳ ದಾಖಲೆಗಳ ಪ್ರಕಾರ, 160 ಕಾಲೇಜುಗಳ ಕನಿಷ್ಠ 1,024 ವಿದ್ಯಾರ್ಥಿಗಳ ವೀಸಾಗಳ ಕಾನೂನು ಮಾನ್ಯತೆಯು ಮರುಸ್ಥಾಪಿತವಾಗಿದೆ ಎಂದು ಸುದ್ದಿಸಂಸ್ಥೆಯ ವರದಿ ತಿಳಿಸಿದೆ.

### ಕೇಂದ್ರ ಗಮನಿಸಲಿ-ಕೈ ಆಗ್ರಹ

ವೀಸಾ ರದ್ದತಿ ಕೈಬಿಡಲು ಕೋರಿ ಅರ್ಜಿ ಸಲ್ಲಿಸಿರುವ ಭಾರತೀಯ ವಿದ್ಯಾರ್ಥಿಗಳ ಸಮಸ್ಯೆ ಕುರಿತು ಅಮೆರಿಕ ಸರ್ಕಾರದ ಜೊತೆಗೆ ಚರ್ಚಿಸಬೇಕು ಎಂದು ಕಾಂಗ್ರೆಸ್ ಪಕ್ಷವು ಕೇಂದ್ರ ಸರ್ಕಾರವನ್ನು ಒತ್ತಾಯಿಸಿದೆ.

ವೀಸಾ ರದ್ಧತಿ ಕೈಬಿಡಲು ಕೋರಿ ಅರ್ಜಿ ಸಲ್ಲಿಸಿರುವ 327 ವಿದೇಶಿ ವಿದ್ಯಾರ್ಥಿಗಳಲ್ಲಿ ಶೇ 50ರಷ್ಟು ಮಂದಿ ಭಾರತೀಯರಿದ್ದಾರೆ ಎಂಬಅಮೆರಿಕದ ವಲಸಿಗರ ವಕೀಲರ ಸಂಘದ ಹೇಳಿಕೆ ಉಲ್ಲೇಖಿಸಿ ಕಾಂಗ್ರೆಸ್ ಈ ಆಗ್ರಹ ಮಾಡಿದೆ. ವೀಸಾ ರದ್ದತಿ ಮರುಪರಿಶೀಲನೆ ಕೋರಿರುವ ಹೆಚ್ಚಿನ ವಿದ್ಯಾರ್ಥಿಗಳಲ್ಲಿ ಭಾರತೀಯರೇ ಇದ್ದಾರೆ ಎಂಬುದು ಕಳವಳಕಾರಿ ಸಂಗತಿ ಎಂದು ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಜೈರಾಮ್ ರಮೇಶ್ ಅವರು 'ಎಕ್ಸ್' ಮೂಲಕ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

# ಶೂಟಿಂಗ್ ವಿಶ್ವಕಪ್ ಶ್ರೀಯಾಂಕಾಗೆ 8ನೇ ಸ್ಥಾನ



**ಲಿಮಾ (ಪೆರು),ಏ.18:** ಭಾರತದ ಅನುಭವಿ ಶೂಟರ್ ಶ್ರೀಯಾಂಕಾ ಸದಂಗಿ ಅವರು ಇಲ್ಲಿ ನಡೆಯುತ್ತಿರುವ ಐಎಸ್‌ಎಸ್‌ಎಫ್ ವಿಶ್ವಕಪ್‌ನಎಂಟನೇ ಸ್ಥಾನ ಗಳಿಸಿದರು. ಮಹಿಳೆಯರ 50 ಮೀಟರ್ ರೈಫಲ್ 3 ಪೊಸಿಷನ್ಸ್ (3ಪಿ) ಸ್ಪರ್ಧೆಯಲ್ಲಿ 2022ರ ಕೈರೊ ವಿಶ್ವಕಪ್ನಲ್ಲಿ ಕಂಚಿನ ಪದಕ ಗೆದ್ದಿದ್ದ 30 ವರ್ಷ ವಯಸ್ಸಿನ ಶ್ರೀಯಾಂಕಾ (400.7) ಫೈನಲ್‌ನಲ್ಲಿ ನಿರಾಸೆ ಮೂಡಿಸಿದರು. ಆದರೆ, ಅರ್ಹತಾ ಸುತ್ತಿನಲ್ಲಿ ಐದನೇ ಸ್ಥಾನದೊಂದಿಗೆ ಎಂಟು ಸ್ಪರ್ಧಿಗಳನ್ನು ಒಳಗೊಂಡ ಅಂತಿಮ ಸುತ್ತಿಗೆ ಪ್ರವೇಶಿಸಿದ್ದರು.

ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ ಬೆಳ್ಳಿ ಪದಕ ಗೆದ್ದಿದ್ದ ಸಗೆನ್ ಮಲೆನಾ (463.3 ಅಂಕ) ಚಾಂಪಿಯನ್ ಆದರು. 31 ವರ್ಷ ವಯಸ್ಸಿನ ಸಗೆನ್ ಅವರ ಈ ಚಿನ್ನ ಸಾಧನೆಯಿಂದಾಗಿ ಅಮೆರಿಕವು ಮೂರು ಸ್ವರ್ಣ ಸೇರಿ ಆರು ಪದಕಗಳೊಂದಿಗೆ ಪದಕ ಪಟ್ಟಿಯಲ್ಲಿ ಭಾರತವನ್ನು ಹಿಂದಿಕ್ಕಿ ಅಗ್ರಸ್ಥಾನಕ್ಕೇರಿತು. ಭಾರತ ಎರಡು ಚಿನ್ನ, ಒಂದು ಬೆಳ್ಳಿ ಮತ್ತು ಒಂದು ಕಂಚಿನ ಪದಕಗಳೊಂದಿಗೆ ಎರಡನೇ ಸ್ಥಾನದಲ್ಲಿದೆ. ಚೀನಾ (1 ಚಿನ್ನ, ಬೆಳ್ಳಿ. 3 ಕಂಚು) ಮೂರನೇ ಸ್ಥಾನದಲ್ಲಿದೆ.

# ಬೆಂಗಳೂರು ಗ್ರಾಂಡ್‌ಮಾಸ್ಟರ್ಸ್ ಟೂರ್ನಿ ಚೆಸ್ ಕಿರೀಟ ಗೆದ್ದ ಪಂಟ್ರುಲಾಯಿಯಾ

**ಬೆಂಗಳೂರು,ಏ.18:** ಜಾರ್ಜಿಯಾದ ಗ್ರಾಂಡ್ಮಾಸ್ಟರ್ ಲೆವನ್ ಪಂಟ್ರುಲಾಯಿಯಾ ಅವರು 'ನಮ್ಮ ಬೆಂಗಳೂರು ಇಂಟರ್‌ನ್ಯಾಷನಲ್ ಗ್ರಾಂಡ್‌ಮಾಸ್ಟರ್ಸ್ ಚೆಸ್ ಟೂರ್ನಿಯಲ್ಲಿ ಪ್ರಶಸ್ತಿ ಗೆದ್ದುಕೊಂಡರು. ಐದನೇ ಶ್ರೇಯಾಂಕದ ಈ ಆಟಗಾರ ಹತ್ತು ಸುತ್ತುಗಳಿಂದ ಎಂಟು ಅಂಕ ಕಲೆಹಾಕಿದರು.



ಜಾರ್ಜಿಯಾದ ರಾಷ್ಟ್ರೀಯ ಚಾಂಪಿಯನ್ ಕೂಡ ಆಗಿರುವ ಪಂಟ್ರುಲಾಯಿಯಾ ಹತ್ತು ಸುತ್ತುಗಳಿಂದ ಎಂಟು ಪಾಯಿಂಟ್ಸ್ ಕಲೆಹಾಕಿದರು. ಮಧ್ಯಪ್ರದೇಶದ ಗ್ಯಾಂಡ್‌ಮಾಸ್ಟರ್ ಅನುಜ್ ಶ್ರೀವತಿ ಮತ್ತು ಬೆಲರೂಸ್‌ನ ಅಲೆಕ್ಸಿ ಫೆಡರೋವ್ ಕೂಡ ಇಷ್ಟೇ ಅಂಕ ಪಡೆದರೂ, ಪ್ರೊಗ್ರೆಸಿವ್ ಅಂಕಗಳ ಆಧಾರದಲ್ಲಿ ಎರಡು ಮತ್ತು ಮೂರನೇ ಸ್ಥಾನ ಪಡೆದರು.

ಕೋರಮಂಗಲದ ಒಳಾಂಗಣ ಕ್ರೀಡಾಂಗಣದಲ್ಲಿ ನಡೆದ ಟೂರ್ನಿಯ ಅಂತಿಮ ಸುತ್ತಿನ ಮೊದಲ ಬೋರ್ಡ್‌ನಲ್ಲಿ 39 ವರ್ಷ ವಯಸ್ಸಿನ ಪಂಟ್ರುಲಾಯಿಯಾ ಅವರು ಅರ್ಮೇನಿಯಾದ ಮಾನ್ಯುಯಲ್ ಪೆಟ್ರೋಸಿಯಾನ್ (7.5) ಜೊತೆ 35ನೇ ನಡೆಯಲ್ಲಿ ಡ್ರಾ ಸಾಧಿಸುವಲ್ಲಿ ಯಶಸ್ವಿ ಆದರು.

ಮಧ್ಯಪ್ರದೇಶದ ಐಎಂ ಅನುಜ್ ಶ್ರೀವರ್ತಿ ಎರಡನೇ ಬೋರ್ಡ್‌ನಲ್ಲಿ ಐಎಂ ಅರಣ್ಯಕ್ ಘೋಷ್ (6) ಅವರನ್ನು 55 ನಡೆಗಳಲ್ಲಿ ಸೋಲಿಸಿದರು. 52 ವರ್ಷ ವಯಸ್ಸಿನ ಗ್ರಾಂಡ್‌ಮಾಸ್ಟರ್ ಫೆಡರೋವ್, ಆಂಧ್ರ ಪ್ರದೇಶದ ಮೆಹರ್ ಚಿನ್ನಾರೆಡ್ಡಿ ಅವರನ್ನು 48ನೇ ನಡೆಯಲ್ಲಿ ಮಣಿಸಿದರು. ಈ ಟೂರ್ನಿಯಲ್ಲಿ ಕಡಿಮೆ ರೇಟಿಂಗ್ ಹೊರತಾಗಿಯೂ ಉತ್ತಮ ಪ್ರದರ್ಶನ ನೀಡಿದ ಕೇರಳದ ನಿತಿನ್ ಬಾಬು (7.5) ನಾಲ್ಕನೇ, ಮೂರನೇ ಶ್ರೇಯಾಂಕದ ಪೆಟ್ರೋಸಿಯಾನ್ (7.5), ಅಗ್ರ ಶ್ರೇಯಾಂಕದ ಪಾ ಇನಿಯನ್ (ತಮಿಳುನಾಡು, 7.5), ಅರ್ಮೇನಿಯಾದ ಕರೆನ್ ಗ್ರೆಗೋರಿಯನ್ (7.5), ಗೋವಾದ ಇತನ್ ವಾಜ್ (7.5) ಅವರು ನಾಲ್ಕರಿಂದ ಏಳರವರೆಗಿನ ಸ್ಥಾನಗಳನ್ನು ಪಡೆದರು. ನಿತಿನ್ ಬಾಬು (ರೇಟಿಂಗ್ 2242) ಅವರು ಈ ಟೂರ್ನಿಯಲ್ಲಿ ಐಎಂ ನಾರ್ಮ್ ಪಡೆದರು. ಒಟ್ಟು 12 ಆಟಗಾರರು ಏಳೂವರೆ ಪಾಯಿಂಟ್ಸ್ ಪಡೆದರು.

# ತವರಿನಲ್ಲಿ ಸತತ ಮೂರನೇ ಪಂದ್ಯ ಸೋತ ಆರ್‌ಸಿಬಿ

**ಬೆಂಗಳೂರು, ಏ.18:** ಪಂಜಾಬ್ ಕಿಂಗ್ಸ್ ಐಪಿಎಲ್ ತಮ್ಮ ಐದನೇ ಗೆಲುವು ದಾಖಲಿಸಿದೆ. ಎಂ.ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆದ ಆರ್‌ಸಿಬಿ ವಿರುದ್ಧದ ಪಂದ್ಯದಲ್ಲಿ ಶ್ರೇಯಸ್ ಅಯ್ಯರ್ ನಾಯಕತ್ವದ ತಂಡವು ಆತಿಥೇಯ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವನ್ನು 5 ವಿಕೆಟ್‌ಗಳಿಂದ ಸೋಲಿಸಿತು.



ನೆಹಾಲ್ ವಧೇರಾ ಅವರ ಅದ್ಭುತ ಬ್ಯಾಟಿಂಗ್ ನೆರವಿನಿಂದ ಪಂಜಾಬ್ ಕಿಂಗ್ಸ್ ತಂಡವು ಆರ್‌ಸಿಬಿಯನ್ನು ಐದು ವಿಕೆಟ್‌ಗಳಿಂದ ಸೋಲಿಸುವ ಮೂಲಕ ಸತತ ಎರಡನೇ ಗೆಲುವು ದಾಖಲಿಸಿತು. ಆರ್‌ಸಿಬಿ ಮತ್ತು ಪಂಜಾಬ್ ನಡುವಿನ ಈ ಪಂದ್ಯ ಮಳೆಯಿಂದಾಗಿ ತಡವಾಗಿ ಆರಂಭವಾಯಿತು. ಹೀಗಾಗಿ ಪಂದ್ಯವನ್ನು ತಲಾ 14 ಓವರ್‌ಗಳಿಗೆ ಸೀಮಿತಗೊಳಿಸಲಾಯಿತು. ಪಂದ್ಯದಲ್ಲಿ ಪಂಜಾಬ್ ಟಾಸ್ ಗೆದ್ದು ಮೊದಲು ಬೌಲಿಂಗ್ ಮಾಡಲು ನಿರ್ಧರಿಸಿತು. ಹೀಗಾಗಿ ಮೊದಲು ಬ್ಯಾಟಿಂಗ್ ಮಾಡಿದ ಆರ್‌ಸಿಬಿ ತಂಡ 14 ಓವರ್‌ಗಳಲ್ಲಿ ಒಂಬತ್ತು ವಿಕೆಟ್ ಕಳೆದುಕೊಂಡು 95 ರನ್ ಕಲೆಹಾಕಿತು. ಇದಕ್ಕೆ ಉತ್ತರವಾಗಿ ಪಂಜಾಬ್ ತಂಡ 12.1 ಓವರ್‌ಗಳಲ್ಲಿ ಐದು ವಿಕೆಟ್ ಕಳೆದುಕೊಂಡು ಗೆಲುವಿನ ದಡ ಮುಟ್ಟಿತು.


**ಡೇವಿಡ್ ಏಕಾಂಗಿ ಹೋರಾಟ**

ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ಆರ್‌ಸಿಬಿ ತಂಡದ ಬ್ಯಾಟಿಂಗ್ ಅತ್ಯಂತ ಕಳಪೆಯಾಗಿತ್ತು. ತಂಡದ ಪರ ಕೊನೆಯ ಹಂತದಲ್ಲಿ ಟಿಮ್ ಡೇವಿಡ್ ಅರ್ಧಶತಕದ ಇನ್ನಿಂಗ್ಸ್ ಆಡದಿದ್ದರೆ, ಆರ್‌ಸಿಬಿ ಇನ್ನು ಕಡಿಮೆ ಮೊತ್ತಕ್ಕೆ ಆಲೌಟ್ ಆಗುತ್ತಿತ್ತು. ಒಂದು ಹಂತದಲ್ಲಿ ಆರ್‌ಸಿಬಿ 63 ರನ್‌ಗಳಿಗೆ 9 ವಿಕೆಟ್‌ಗಳನ್ನು ಕಳೆದುಕೊಂಡಿತ್ತು. ಇಲ್ಲಿಂದ ತಂಡದ ಪರ ಏಕಾಂಗಿ ಹೋರಾಟ ನೀಡಿದ ಟಿಮ್ ಡೇವಿಡ್ ಅಜೇಯ 50 ರನ್ ಗಳಿಸುವ ಮೂಲಕ ತಂಡದ ಸ್ಕೋರ್ ಅನ್ನು 95 ರನ್‌ಗಳಿಗೆ ಕೊಂಡೊಯ್ದರು. ಡೇವಿಡ್ ಹೊರತುಪಡಿಸಿ ನಾಯಕ ರಜತ್ ಪಟಿದಾರ್ 23 ರನ್‌ಗಳ ಇನ್ನಿಂಗ್ಸ್ ಆಡಿದರು. ಉಳಿದಂತೆ ಯಾರಿಂದಲೂ ಜವಾಬ್ದಾರಿಯುತ ಬ್ಯಾಟಿಂಗ್ ಪ್ರದರ್ಶನ ಕಂಡುಬರಲಿಲ್ಲ. ಪಂಜಾಬ್ ಕಿಂಗ್ಸ್ ಪರ ಅರ್ಶ್ದೀಪ್ ಸಿಂಗ್, ಯುಜ್ವೇಂದ್ರ ಚಾಹಲ್, ಮಾರ್ಕೊ ಯಾನ್ಸೆನ್ ಮತ್ತು ಹರ್‌ಪ್ರೀತ್ ಬ್ರಾರ್ ತಲಾ 2 ವಿಕೆಟ್ ಪಡೆದರು.

**ಪಂಜಾಬ್‌ಗೆ ಕಳಪೆ ಆರಂಭ:** 96 ರನ್‌ಗಳ ಗುರಿ ಬೆನ್ನಟ್ಟಿದ ಪಂಜಾಬ್ ಕಿಂಗ್ಸ್ ಪರ ಪ್ರಭ್ಸಿಮ್ರಾನ್ ಸಿಂಗ್ 13 ರನ್?ಗಳ ಕೊಡುಗೆ ನೀಡಿದರು. ಪ್ರಿಯಾಂಶ್ ಆರ್ಯ ಕೂಡ ಕೇವಲ 13 ರನ್ ಗಳಿಸಿ ಔಟಾದರು. ಇದಾದ ನಂತರ, ಶ್ರೇಯಸ್ ಅಯ್ಯರ್ ಮತ್ತು ಜೋಶ್ ಇಂಗ್ಲಿಷ್ ನಡುವೆ ಮೂರನೇ ವಿಕೆಟ್‌ಗೆ 20 ರನ್‌ಗಳ ಪಾಲುದಾರಿಕೆ ಇತ್ತು. ಪಂದ್ಯದಲ್ಲಿ ಕೇವಲ 7 ರನ್ ಗಳಿಸುವಲ್ಲಿ ಯಶಸ್ವಿಯಾದ ನಾಯಕ ಶ್ರೇಯಸ್ ಅಯ್ಯರ್ ರೂಪದಲ್ಲಿ ಪಂಜಾಬ್ ಮೂರನೇ ವಿಕೆಟ್ ಕಳೆದುಕೊಂಡಿತು, ಜೋಶ್ ಇಂಗ್ಲಿಷ್ ಕೂಡ 14 ರನ್ ಗಳಿಸಿ ಔಟಾದರು.

**ಪಂದ್ಯ ಗೆಲ್ಲಿಸಿದ ವಧೇರಾ:** 53 ರನ್‌ಗಳಿಗೆ 4 ವಿಕೆಟ್‌ಗಳನ್ನು ಕಳೆದುಕೊಂಡಿದ್ದ ಪಂಜಾಬ್ ಕಿಂಗ್ಸ್ ತಂಡಕ್ಕೆ ಗೆಲುವಿನ ಹಾದಿಯನ್ನು ಸುಲಭಗೊಳಿಸುವ ಜವಾಬ್ದಾರಿಯನ್ನು ನೆಹಾಲ್ ವಧೇರಾ ಮತ್ತು ಶಶಾಂಕ್ ಸಿಂಗ್ ಜೋಡಿ ವಹಿಸಿಕೊಂಡರು. ಐದನೇ ವಿಕೆಟ್‌ಗೆ ಇಬ್ಬರ ನಡುವೆ 21 ಎಸೆತಗಳಲ್ಲಿ 28 ರನ್‌ಗಳ ಪಾಲುದಾರಿಕೆ ಕಂಡುಬಂದಿತು. ಪಂಜಾಬ್ ತಂಡದ ಪರ ಗೆಲುವಿನ ಇನ್ನಿಂಗ್ಸ್ ಆಡಿದ ನೆಹಾಲ್ ಅಜೇಯ 33 ರನ್‌ಗಳ ಇನ್ನಿಂಗ್ಸ್ ಆಡಿದರು. ಆರ್‌ಸಿಬಿ ಪರ ಬೌಲಿಂಗ್‌ನಲ್ಲಿ ಜೋಶ್ ಹ್ಯಾಜಲ್‌ವುಡ್ 3 ವಿಕೆಟ್ ಪಡೆದರೆ, ಭುವನೇಶ್ವರ್ ಕುಮಾರ್ 2 ವಿಕೆಟ್ ಪಡೆದರು.

# ವಿಶ್ವ ಸ್ಕ್ವ್ಯಾಷ್ ಚಾಂಪಿಯನ್‌ಶಿಪ್ ಅರ್ಹತಾ ಸ್ಪರ್ಧೆ: ಸೆಮಿಗೆ ವೀರ್, ಅನಾಹತ್



**ಕೌಲಾಲಂಪುರ,ಏ.18:** ಭಾರತದ ಯುವ ಸ್ಕ್ವ್ಯಾಷ್ ಆಟಗಾರರಾದ ವೀರ್ ಚೋತ್ರಾಣಿ ಮತ್ತು ಅನಾಹತ್ ಸಿಂಗ್ ಅವರು ಶುಕ್ರವಾರ ವಿಶ್ವ ಚಾಂಪಿಯನ್‌ಶಿಪ್ ಅರ್ಹತಾ ಸ್ಪರ್ಧೆಯಲ್ಲಿ (ಏಷ್ಯಾ) ಸೆಮಿಫೈನಲ್ ಪ್ರವೇಶಿಸಿದರು.

ಪುರುಷರ ಸಿಂಗಲ್ಸ್ ಕ್ವಾರ್ಟರ್ ಫೈನಲ್‌ನಲ್ಲಿ 23 ವರ್ಷ ವಯಸ್ಸಿನ ಚೋತ್ರಾಣಿ 9–11, 11–6, 11–6, 11–7ರಿಂದ ಆತಿಥೇಯ ಮಲೇಷ್ಯಾದ ಮೊಹಮ್ಮದ್ ಸಯಾಫಿಕ್ ಕಮಲ್ ಅವರನ್ನು ಮಣಿಸಿದರು.

ಎರಡನೇ ಶ್ರೇಯಾಂಕದ ಚೋತ್ರಾಣಿ ಮೊದಲ ಪಂದ್ಯಲ್ಲಿ ಹಿನ್ನಡೆ ಅನುಭವಿಸಿದ್ದರು. ನಂತರದಲ್ಲಿ ಲಯ ಕಂಡುಕೊಂಡು ನಂತರ ಸತತ ಮೂರು ಪಂದ್ಯಗಳಲ್ಲಿ ಮೇಲುಗೈ ಸಾಧಿಸಿದರು.

17ನೇ ವರ್ಷ ವಯಸ್ಸಿನ ಅನಾಹತ್ ಅವರು ಮಹಿಳೆಯರ ಸಿಂಗಲ್ಸ್ ಕ್ವಾರ್ಟರ್ ಫೈನಲ್‌ನಲ್ಲಿ 11–1, 11–7, 11–5ರ ನೇರ ಗೇಮ್‌ಗಳಿಂದ ಜಪಾನ್‌ನ ಅಕಾರಿ ಮಿಡೋರಿಕಾವಾ ಅವರನ್ನು ನಿರಾಯಾಸವಾಗಿ ಮಣಿಸಿದರು. ಏಳನೇ ಶ್ರೇಯಾಂಕದ ಅನಾಹತ್ ಅವರು ನಾಲ್ಕರ ಘಟ್ಟದ ಪಂದ್ಯದಲ್ಲಿ ಎಂಟನೇ ಶ್ರೇಯಾಂಕದ ಹಾಂಗ್ ಕಾಂಗ್‌ನ ಹೆಲೆನ್ ಟ್ಯಾಂಗ್ ಅವರನ್ನು ಶನಿವಾರ ಎದುರಿಸಲಿದ್ದಾರೆ. ಹೆಲೆನ್ 11–5, 11–6, 10–12, 11–9ರಿಂದ ಭಾರತದ ತನ್ವಿ ಖನ್ನಾ ಅವರನ್ನು ಹಿಮ್ಮೆಟ್ಟಿಸಿದರು. ತನ್ವಿ ಹಿಂದಿನ ಸುತ್ತಿನಲ್ಲಿ ಅಗ್ರ ಶ್ರೇಯಾಂಕದ ಎನ್. ಚಿಂಗ್ ಚೆಂಗ್ ಅವರಿಗೆ ಆಘಾತ ನೀಡಿದ್ದರು.

ಟೂರ್ನಿಯ ವಿಜೇತರು ಮೇ 9 ರಿಂದ 17ರವರೆಗೆ ಷಿಕಾಗೊದಲ್ಲಿ ನಡೆಯಲಿರುವ ವಿಶ್ವ ಚಾಂಪಿಯನ್‌ಶಿಪ್‌ಗೆ ಅರ್ಹತೆ ಪಡೆಯುತ್ತಾರೆ.

# ಸೂಪರ್ ಡಿವಿಷನ್ ಲೀಗ್ ಚಾಂಪಿಯನ್‌ಶಿಪ್: ರೈಸಿಂಗ್ ಸ್ಟಾರ್‌ಗೆ ಭರ್ಜರಿ ಜಯ

**ಬೆಂಗಳೂರು,ಏ.18:** ರೈಸಿಂಗ್ ಸ್ಟಾರ್ ಹಾಕಿ ಕ್ಲಬ್ 'ಎ' ತಂಡವು ಕೆಎಸ್‌ಎಚ್‌ಎ–ಬಿಎಚ್‌ಎ ಎರಡನೇ ಹಂತದ ಸೂಪರ್ ಡಿವಿಷನ್ ಲೀಗ್ ಚಾಂಪಿಯನ್‌ಶಿಪ್‌ನ ಪಂದ್ಯದಲ್ಲಿ 6–2 ಗೋಲುಗಳಿಂದ ಫಾಲ್ಕನ್ ಕ್ಲಬ್ ತಂಡವನ್ನು ಮಣಿಸಿತು.

ಕರ್ನಾಟಕ ರಾಜ್ಯ ಹಾಕಿ ಸಂಸ್ಥೆಯ ಕ್ರೀಡಾಂಗಣದಲ್ಲಿ ಶುಕ್ರವಾರ ನಡೆದ ಪಂದ್ಯದಲ್ಲಿ ರೈಸಿಂಗ್ ಸ್ಟಾರ್ ತಂಡದ ಪರ ಗೋವಿಂದ್ (1ನೇ ಮತ್ತು 19ನೇ ನಿಮಿಷ), ಬಾಬು ಮೆಟ್ಟರ್ (47ನೇ, 51ನೇ ಮತ್ತು 57ನೇ) ಮತ್ತು ವಿಶ್ವ (60ನೇ) ಗೋಲು ಗಳಿಸಿದರು. ಫಾಲ್ಕನ್ ಪರ ಆಕಾಶ್ (12ನೇ) ಮತ್ತು ಹರಿಲಕ್ಷ್ಮಣ (31ನೇ) ಗೋಲು ಬಾರಿಸಿದರು.



ಎರಡನೇ ಪಂದ್ಯದಲ್ಲಿ ಆರ್‌ಡಬ್ಲ್ಯುಎಫ್‌ಎಸ್‌ಎ ತಂಡ 4–2 ಗೋಲುಗಳಿಂದ ವಿ. ರಾಜಾ ಎಚ್‌ಸಿ ತಂಡವನ್ನು ಸೋಲಿಸಿತು. ಆರ್‌ಡಬ್ಲ್ಯುಎಫ್‌ಎಸ್‌ಎ ಪರ ರವಿಕುಮಾರ್ (21ನೇ), ಸೇತು ಪಾಂಡ್ಯನ್ (42ನೇ), ಉಮೇಶ್ ಗೌಡ (45ನೇ) ಚೆಂಗಪ್ಪ (54ನೇ) ಗೋಲು ಚೆಂಡನ್ನು ಗುರಿ ಸೇರಿಸಿದರು. ರಾಜಾ ತಂಡದ ಪರ ಬಾಲಾಜಿ (50ನೇ ಮತ್ತು 59ನೇ) ಗೋಲು ಹೊಡೆದರು.



ಇಟಲಿಯ ರೋಮ್‌ನಲ್ಲಿ ನಡೆದ UEFA ಯುರೋಪಾ ಲೀಗ್ ಕ್ವಾರ್ಟರ್‌ಫೈನಲ್‌ನ 2 ನೇ ಲೆಗ್ ಪಂದ್ಯದ ಸಮಯದಲ್ಲಿ ಲ್ಯಾಜಿಯೊದ ಗುಸ್ತಾವ್ ಇಸಾಕ್ಸೆನ್ ಬೋಡೊ ಗ್ಲಿಮ್ಟ್‌ನ ಫ್ರೆಡ್ರಿಕ್ ಆಂಡ್ರೆ ಬ್ಜೋರ್ಕನ್ ಅವರೊಂದಿಗೆ ಲಾಜಿಯೊ ಮತ್ತು ಬೋಡೊ/ಗ್ಲಿಮ್ಟ್ ನಡುವಿನ ಪೈಪೋಟಿ.